ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 22, ಸಂಚಿಕೆ: 268, ಪುಟಗಳು: 8, ಸೋಮವಾರ, 7 ಜುಲೈ 2025 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3



ವೇಣು ಸಾರಥ್ಯದಲ್ಲಿ...



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



### ಸುಭಾಷಿತ

ಜೀವನದ ಹಾದಿಯಲ್ಲಿ ಎದುರಾಗುವ ತಡೆಗಳು ಕೆಲವು ಪರೀಕ್ಷೆಗಳಷ್ಟೇ! ಅವು ನಮ್ಮನ್ನು ಮತ್ತಷ್ಟು ಬಲಿಷ್ಟ ಮತ್ತು ಉತ್ತಮಗೊಳಿಸುತ್ತವೆ.

### ಪಂಚಾಂಗ

(ಸೋಮವಾರ 7 ಜುಲೈ-2025)

- ಶ್ರೀ ವಿಶ್ವಾವಸು ನಾಮ ಸಂವತ್ಸರ
- ಉತ್ತರಾಯಣ, ಗ್ರೀಷ್ಮ ಋತು
- ಆಷಾಡ ಮಾಸ, ಶುಕ್ಲ ಪಕ್ಷ
- ವಾರ: ಸೋಮವಾರ, ತಿಥಿ: ದ್ವಾದಶಿ
- ನಕ್ಷತ್ರ: ಅನುರಾಧ
- ರಾಹುಕಾಲ: 7:40 ರಿಂದ 9:16
- ಗುಳಿಕಕಾಲ: 2:04 ರಿಂದ 3:40
- ಯಮಗಂಡಕಾಲ: 10:52 ರಿಂದ 12:28

## ಸಂಕ್ಷಿಪ್ತ ಸುದ್ದಿ

## ಉದ್ಯಮಿ ಗೋಪಾಲ್ ಖೇಮ್ಕಾ ಕೊಲೆ ಮಾಡಿ ಅಂತ್ಯಸಂಸ್ಕಾರಕ್ಕೆ ಬಂದಿದ್ದ ಹಂತಕ ಅರೆಸ್ಟ್



**ಬಿಹಾರ:** ಉದ್ಯಮಿ ಗೋಪಾಲ್ ಖೇಮ್ಕಾ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಶಂಕಿತನನ್ನು ಪೊಲೀಸರು ಬಂಧಿಸಿದ್ದಾರೆ. ಗೋಪಾಲ್ ಅವರ ಅಂತ್ಯಕ್ರಿಯೆ ವೇಳೆ ವ್ಯಕ್ತಿಯೊಬ್ಬನನ್ನು ವಶಕ್ಕೆ ಪಡೆದಿದ್ದಾರೆ. ಬಿಹಾರದ ಪ್ರಸಿದ್ಧ ಉದ್ಯಮಿ ಗೋಪಾಲ್ ಖೇಮ್ಕಾ ಅವರನ್ನು ಶುಕ್ರವಾರ ಪಾಟ್ನಾದಲ್ಲಿರುವ ಅವರ ಮನೆಯ ಹೊರಗೆ ಬೈಕ್‌ನಲ್ಲಿ ಬಂದ ದುಷ್ಕರ್ಮಿಗಳು ಗುಂಡಿಕ್ಕಿ ಕೊಂದಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗೋಪಾಲ್ ಅವರ ಅಂತ್ಯಕ್ರಿಯೆ ವೇಳೆ ಶಂಕಿತ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಶುಕ್ರವಾರ ರಾತ್ರಿ 11.40 ರ ಸುಮಾರಿಗೆ ಗಾಂಧಿ ಮೈದಾನ ಪ್ರದೇಶದಲ್ಲಿರುವ ತಮ್ಮ ಮನೆಯ ಹೊರಗೆ ಖೇಮ್ಕಾ ಕಾರಿನಿಂದ ಇಳಿಯುತ್ತಿದ್ದಾಗ ಈ ಘಟನೆ ನಡೆದಿದೆ. ಘಟನೆಯ ನಂತರ, ಮುಖ್ಯಮಂತ್ರಿ ನಿತೀಶ್ ಕುಮಾರ್ ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆಯ ಪರಿಸ್ಥಿತಿಯನ್ನು ಪರಿಶೀಲಿಸಲು ಸಭೆ ನಡೆಸಿದರು, ಇದರಲ್ಲಿ ತನಿಖೆಯನ್ನು ಆದಷ್ಟು ಬೇಗ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ಪುಟ 2

## ಶುಭಾಂಶು ಶುಕ್ಲಾರಿಂದ ಬೆಂಗಳೂರು ನೀರುಕರಡಿ ಪ್ರಯೋಗ ಪೂರ್ಣ



**ನವದೆಹಲಿ:** ಆಕ್ಸಿಯೋಂ-4 ಮಿಷನ್ ಭಾಗವಾಗಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಿರುವ ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ, ನೀರುಕರಡಿ ಪ್ರಯೋಗ ಪೂರ್ಣಗೊಳಿಸಿದ್ದಾರೆ. ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆ (ಐಐಎಸ್‌ಸಿ) ಈ ಪ್ರಯೋಗವನ್ನು ಸಿದ್ಧಪಡಿಸಿತ್ತು. ಈ ಬಗ್ಗೆ ಇಸ್ರೋ ಮಾಹಿತಿ ಹಂಚಿಕೊಂಡಿದ್ದು, 'ಶುಭಾಂಶು ಶುಕ್ಲಾ ಐಎಸ್ಎಸ್‌ನಲ್ಲಿ ನೀರುಕರಡಿಗಳನ್ನು ಒಳಗೊಂಡ ಸೂಕ್ಷ್ಮ ಗುರುತ್ವಾಕರ್ಷಣೆಯ ಪ್ರಯೋಗ ಪೂರ್ಣಗೊಳಿಸಿದ್ದಾರೆ. ಪುಟ 2

## ಸಿಎಂ ಬದಲಾವಣೆ ಚರ್ಚೆಗೆ ಸ್ವಾಮೀಜಿಗಳೂ ಎಂಟ್ರಿ



**ಬೆಂಗಳೂರು:** ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನ ಬಿಟ್ಟು ಕೊಡುತ್ತಾರೆ. ಡಿಸಿಎಂ ಡಿಕೆ ಶಿವಕುಮಾರ್ ಸಿಎಂ ಪಟ್ಟಕ್ಕೇರುತ್ತಾರೆ ಎಂಬ ಪುಕಾರು ಕಾಂಗ್ರೆಸ್ ಪಾಳಯದಲ್ಲಿ ಬಿರುಗಾಳಿ ಎಬ್ಬಿಸಿದೆ. ಇದರ ಮಧ್ಯೆ ಈ ವಿಚಾರಕ್ಕೆ ಸ್ವಾಮೀಜಿಗಳೂ ಕೂಡ ಧ್ವನಿಗೂಡಿಸಿದ್ದಾರೆ. ಜೂನ್ 27 ರಂದು ಕೆಂಪೇಗೌಡ ಜಯಂತಿಯಂದು ಮಾತನಾಡಿದ್ದ ನಿಶ್ಚಲಾನಂದ ಸ್ವಾಮೀಜಿ, ಡಿಕೆಶಿ ನಾಡ ಪ್ರಭುವಾಗಲಿ ಎಂದಿದ್ದರು. ಭಾನುವಾರ ಮಾತನಾಡಿರುವ ರಂಭಾಪುರ ಶ್ರೀಗಳು, ಕಾಂಗ್ರೆಸ್ ವರಿಷ್ಠರ ಸಮ್ಮುಖದಲ್ಲಿ ನಡೆದ ಒಪ್ಪಂದಂತೆ ಮತ್ತು ಒಡಂಬಡಿಕೆಯಂತೆ ಡಿಕೆ ಶಿವಕುಮಾರ್‌ಗೆ ಸಿಎಂ ಸ್ಥಾನ ಕಲ್ಪಿಸಿಕೊಟ್ಟರೆ ಒಳ್ಳೆಯದು ಎಂದಿದ್ದಾರೆ.

ಏತನ್ಮಧ್ಯೆ, ಒಡಂಬಡಿಕೆ ಬಗ್ಗೆ ನಾನು ಬಹಿರಂಗವಾಗಿ ಯಾಕೆ ಮಾತನಾಡಲಿ ಎಂದು ಡಿಕೆ ಶಿವಕುಮಾರ್ ಪ್ರತಿಕ್ರಿಯಿಸಿದ್ದಾರೆ. ಮತ್ತೊಂದೆಡೆ, ಧ್ವನಿ ಇಲ್ಲದವರಿಗೆ ಧ್ವನಿ ಕೊಟ್ಟಿದ್ದು ನಮ್ಮ ದೊರೆ ರಾಜ ಸಿದ್ದರಾಮಯ್ಯ ಎಂದು ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಹೇಳಿದ್ದಾರೆ. ಇತ್ತ ಸಿದ್ದರಾಮಯ್ಯ ಪುತ್ರ ಯತೀಂದ್ರ ಕೂಡ, 5 ವರ್ಷ ಸಿದ್ದರಾಮಯ್ಯ ಸಿಎಂ ಆಗಿ ಮುಂದುವರೆಯುತ್ತಾರೆ ಎಂದು ಹೇಳಿದ್ದಾರೆ.

ಇನ್ನು ಗದಗ ಜಿಲ್ಲೆ ರೋಣ ತಾಲೂಕು ಕೌಜಗೇರಿ ಗ್ರಾಮದ ಮೊಹರಂ ಹಬ್ಬದ ಅಲಿ ದೇವರ ವಾಣಿಯೂ ಸಿದ್ದರಾಮಯ್ಯ ಪರವೇ ಬಂದಿದೆ. ''ಹಾಲು ಕೆಟ್ಟರೂ, ಹಾಲಮತ ಕೆಡಂಗಿಲ್ಲ. ಅಂಥವ್ರ ಕೈಯಾಗ ಅಧಿಕಾರ ಸಿಕ್ಕಿದೆ. ನೀವು ಕೊಟ್ಟೀರಿ. ಅದನ್ನು ಬದಲಿ ಮಾಡುವುದು ಅಷ್ಟು ಸುಲಭವಲ್ಲ. ಬಹಳ ಕಠಿಣ ಐತಿ'' ಎಂದು ದೇವರ ವಾಣಿ ಹೇಳಿದೆ. ಪುಟ 2

### ಪಾರ್ಟಿಗಳಲ್ಲಿ ಡ್ರಗ್ಸ್ ಕಂಡುಬಂದರೆ ರೆಸಾರ್ಟ್, ಹೋಂ ಸ್ಟೇ

## ಹೋಟೆಲ್ ಮಾಲೀಕರ ಮೇಲೂ ಕೇಸ್

**ಬೆಂಗಳೂರು:** ಬೆಂಗಳೂರು ಹೊರವಲಯದಲ್ಲಿ ನಿರಂತರವಾಗಿ ಪಾರ್ಟಿ, ಮೋಜು-ಮಸ್ತಿಗಳು ನಡೆಯುತ್ತಲೇ ಇರುತ್ತವೆ. ರೆಸಾರ್ಟ್, ಹೋಂ ಸ್ಟೇ, ಹೋಟೆಲ್‌ಗಳನ್ನು ಬುಕ್ ಮಾಡುವ ಪಾರ್ಟಿ ಆಯೋಜಕರು, ಬರ್ತ್ ಡೇ, ಎಂಗೇಜ್ ಮೆಂಟ್, ಮದುವೆ, ರೇವ್ ಪಾರ್ಟಿ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ನಡೆಸುತ್ತಾರೆ. ಇಂಥ ಹಲವು ಕಾರ್ಯಕ್ರಮದಲ್ಲಿ ಡ್ರಗ್ಸ್ ಸೇವನೆ ಕೂಡ ನಡೆಯುತ್ತದೆ. ಖಚಿತ ಮಾಹಿತಿ ಮೇರೆಗೆ ಬೆಂಗಳೂರು ನಗರ ಹಾಗೂ ಗ್ರಾಮಾಂತರ ಪೊಲೀಸರು ದಾಳಿ ನಡೆಸಿ ಡ್ರಗ್ಸ್ ಸೀಜ್ ಮಾಡಿದ್ದಾರೆ. ಅದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಈಶಾನ್ಯ ವಿಭಾಗ ಪೊಲೀಸರು ಮಾಲೀಕರಿಗೆ ಎಚ್ಚರಿಕೆಯನ್ನೂ ನೀಡಿದ್ದಾರೆ.

ಜುಲೈ 5 ರಂದು ಚಿಕ್ಕಜಾಲ ಪೊಲೀಸ್ ಠಾಣೆಯಲ್ಲಿ ರೆಸಾರ್ಟ್,



ಹೋಂ ಸ್ಟೇ, ಫಾರ್ಮ್ ಹೌಸ್, ಹೋಟೆಲ್ ಮಾಲೀಕರ ಜೊತೆಗೆ ಸಭೆ ನಡೆಸಿದ ಈಶಾನ್ಯ ವಿಭಾಗ ಡಿಸಿಪಿ ಸಜೀತ್ ಎಚ್ಚರಿಕೆ ಕೊಟ್ಟಿದ್ದಾರೆ. ಪುಟ 2

## ಬ್ರಿಕ್ಸ್ ಶೃಂಗಸಭೆಯಲ್ಲಿ ಪಾಕ್ ವಿರುದ್ಧ ಮೋದಿ ಕಟು ವಾಗ್ದಾಳಿ

# ಬುದ್ಧನ ಶಾಂತಿ ತತ್ವ ಪ್ರತಿಪಾದನೆ




**ಬ್ರೆಸಿಲಿಯಾ:** ರಿಯೊ ಡಿ ಜನ್ನೆರೊದಲ್ಲಿ ನಡೆದ 17ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಯೋತ್ಪಾದನೆ ಬೆಂಬಲಿಸುತ್ತಿರುವ ಪಾಕಿಸ್ತಾನದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಭಯೋತ್ಪಾದನೆ ಮಾನವೀಯತೆಗೆ ಅತಿ ದೊಡ್ಡ ಬೆದರಿಕೆ ಎಂದು ಕರೆದ ಮೋದಿ, ಇದೇ ವೇಳೆ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸುವಲ್ಲಿ ಭಾರತದ ಜೊತೆ ನಿಂತ ಎಲ್ಲಾ ರಾಷ್ಟ್ರಗಳಿಗೆ ಧನ್ಯವಾದ ಅರ್ಪಿಸಿದ್ದಾರೆ.

ಶೃಂಗಸಭೆ ಉದ್ದೇಶಿಸಿ ಭಾಷಣ ಮಾಡಿದ ಮೋದಿ, ಭಾರತ ಭಯೋತ್ಪಾದನೆಯ ಬಲಿಪಶು ರಾಷ್ಟ್ರವಾಗಿದ್ದರೆ, ಪಾಕಿಸ್ತಾನ ಅದರ ಬೆಂಬಲಿಗ ರಾಷ್ಟ್ರವಾಗಿದೆ ಎಂದು ಬ್ರಿಕ್ಸ್ ಶೃಂಗಸಭೆಯಲ್ಲಿ ವಿಶ್ವ ನಾಯಕರಿಗೆ ಮನವರಿಕೆ ಮಾಡಿಕೊಟ್ಟ ಪ್ರಧಾನಿ ಮೋದಿ, ಬಲಿಪಶುಗಳು ಮತ್ತು ಬೆಂಬಲಿಗರನ್ನು ಒಂದೇ ತಕ್ಕಡಿಯಲ್ಲಿ ತೂಗಲು ಸಾಧ್ಯವಿಲ್ಲ ಎಂದು ಒತ್ತಿ ಹೇಳಿದ್ದಾರೆ.

ಭಯೋತ್ಪಾದನೆಗೆ ಬೆಂಬಲ ನೀಡುವುದು, ಭಯೋತ್ಪಾದಕರಿಗೆ ಮೌನ ಒಪ್ಪಿಗೆ ನೀಡುವುದನ್ನು ಸಹಿಸಲಾಗುವುದಿಲ್ಲ. ಈ ಬಗ್ಗೆ ನಿರ್ಣಾಯಕ ನಿರ್ಧಾರ ತೆಗೆದುಕೊಳ್ಳುವಂತೆ ಎಲ್ಲಾ ರಾಷ್ಟ್ರಗಳಿಗೆ ಮನವಿ ಮಾಡಿದ್ರು. ಅಲ್ಲದೇ ಭಾರತ ಮಹಾತ್ಮ ಗಾಂಧಿ, ಗೌತಮ ಬುದ್ಧರಿಂದ ಪ್ರೇರಿತರಾಗಿ ಶಾಂತಿಯ ಹಾದಿಯಲ್ಲಿ ಮುಂದುವರಿಯುತ್ತಿದೆ. ಎಷ್ಟೇ ಕಠಿಣ ಪರಿಸ್ಥಿತಿ ಬಂದರೂ, ಮಾನವಕುಲದ ಕಲ್ಯಾಣಕ್ಕೆ ಶಾಂತಿಯೇ ಅತ್ಯುತ್ತಮ ಮಾರ್ಗವಾಗಿದೆ ಎಂದು ಪ್ರತಿಪಾದಿಸಿದ್ರು.

ಪಾಕಿಸ್ತಾನವು ತನ್ನ ನೆಲದಲ್ಲಿ ಭಯೋತ್ಪಾದಕರಿಗೆ ಆಶ್ರಯ ನೀಡುವ ಮೂಲಕ ಭಯೋತ್ಪಾದನೆಯನ್ನ ರಾಜ್ಯ ನೀತಿಯಾಗಿ ಹೇಗೆ ಬಳಸುತ್ತಿದೆ ಎಂಬುದನ್ನು ಭಾರತವು 17ನೇ ಬಾರಿಗೆ ಸ್ಪಷ್ಟ ಪುರಾವೆಗಳೊಂದಿಗೆ ತೋರಿಸಿದೆ. ಇತ್ತೀಚೆಗೆ ಚೀನಾದ ರಾಜಧಾನಿ ಬೀಜಿಂಗ್‌ನಲ್ಲಿ ನಡೆದ ಶಾಂಘೈ ಸಹಕಾರ ಒಕ್ಕೂಟದ ರಕ್ಷಣಾ ಸಚಿವರ ಸಭೆಯಲ್ಲಿ, ಪಹಲ್ಗಾಮ್ ದಾಳಿ ಉಲ್ಲೇಖವಿರದ ಜಂಟಿ ಹೇಳಿಕೆಗೆ ಸಹಿ ಮಾಡಲು, ಭಾರತ ನಿರಾಕರಿಸಿತ್ತು.

**ಉಗ್ರವಾದಕ್ಕೆ ಖಂಡನೆ:** ಇನ್ನೂ ಪ್ರಧಾನಿ ಮೋದಿ ಅವರ ಭಾಷಣದ ಬಳಿಕ ಬ್ರಿಕ್ಸ್ ಸದಸ್ಯ ರಾಷ್ಟ್ರಗಳು ಜಂಟಿ ಹೇಳಿಕೆ ಅಥವಾ ರಿಯೊ ಡಿ ಜನ್ನೆರೊ ಘೋಷಣೆಯನ್ನು ಹೊರಡಿಸಿದವು. ಯಾವುದೇ ರೀತಿಯ ಭಯೋತ್ಪಾದಕ ಕೃತ್ಯಗಳನ್ನು ಪುಟ 2

### ವೈಯಕ್ತಿಕ, ರಾಜಕೀಯ ಲಾಭಕ್ಕಾಗಿ ಭಯೋತ್ಪಾದನೆಯನ್ನು ಮೌನವಾಗಿ

## ಬೆಂಬಲಿಸುವುದು ತಪ್ಪು

**ರಿಯೊ ಡಿ ಜನ್ನೆರೊ:** ಭಯೋತ್ಪಾದನೆಯನ್ನು ಖಂಡಿಸುವುದು ನಮ್ಮ ತತ್ವವಾಗಬೇಕು, ಕೇವಲ ಅನುಕೂಲಕ್ಕಾಗಿ ಅಲ್ಲ, ಯಾವ ದೇಶದ ಮೇಲೆ ದಾಳಿ ನಡೆದಿದೆ, ಯಾರು ಮಾಡಿದ್ದಾರೆಂದು ನೋಡುತ್ತಾ ಹೋದರೆ ಅದು ಮಾನವೀಯತೆಗೆ ಮಾಡಿದ ದ್ರೋಹವಾಗುತ್ತದೆ. ಭಯೋತ್ಪಾದಕರ ವಿರುದ್ಧ ನಿರ್ಬಂಧಗಳನ್ನು ವಿಧಿಸುವಲ್ಲಿ ಯಾವುದೇ ಹಿಂಜರಿಕೆ ಬೇಡ. ಭಯೋತ್ಪಾದನೆಗೆ ಸಂಬಂಧಿಸಿದಂತೆ ಮಾತು ಮತ್ತು ಕ್ರಿಯೆಯ ನಡುವೆ ಯಾವುದೇ ವ್ಯತ್ಯಾಸ ಇರಬಾರದು.



**ಜಗತ್ತಿನಲ್ಲಿ ನಡೆಯುತ್ತಿರುವ ಸಂಘರ್ಷಗಳ ಬಗ್ಗೆ ಕಳವಳ:** ಪಶ್ಚಿಮ ಏಷ್ಯಾದಿಂದ ಯುರೋಪ್ ವರೆಗೆ ಜಗತ್ತಿನಲ್ಲಿ ನಡೆಯುತ್ತಿರುವ ಸಂಘರ್ಷಗಳು ಮತ್ತು ಉದ್ವಿಗ್ನತೆಗಳ ಬಗ್ಗೆ ಪ್ರಧಾನಿ ಕಳವಳ ವ್ಯಕ್ತಪಡಿಸಿದರು. ಗಾಜಾದಲ್ಲಿನ ಮಾನವೀಯ ಪರಿಸ್ಥಿತಿಯ ಬಗ್ಗೆಯೂ ಅವರು ಕಳವಳ ವ್ಯಕ್ತಪಡಿಸಿದರು. ಶಾಂತಿಯ ಮಾರ್ಗವೇ ಏಕೈಕ ಆಯ್ಕೆ ಎಂದು ಭಾರತ ನಂಬುತ್ತದೆ ಎಂದು ಅವರು ಹೇಳಿದರು. ಪುಟ 2

### ಶಾಸಕರ ಮನೆಯ ಹಿಂಭಾಗದ ರಸ್ತೆಯಲ್ಲಿ ನಿಲ್ಲಿಸಿದ್ದ 20 ವಾಹನಗಳ ಮೇಲೆ

## ದುಷ್ಕರ್ಮಿಗಳಿಂದ ದಾಳಿ

**ಆನೇಕಲ್:** ಬೊಮ್ಮನಹಳ್ಳಿ ಶಾಸಕ ಸತೀಶ್ ರೆಡ್ಡಿ ಮನೆಯ ಹಿಂಭಾಗದ ರಸ್ತೆಯಲ್ಲಿ ನಿಲ್ಲಿಸಲಾಗಿದ್ದ ಕಾರು ಮತ್ತು ಆಟೋಗಳ ಮೇಲೆ ಕಿಡಿಗೇಡಿಗಳು ದಾಳಿ ಮಾಡಿದ್ದಾರೆ. ದಾಳಿಯಲ್ಲಿ 12 ಕಾರುಗಳು 8 ಆಟೋಗಳ ಗಾಜುಗಳು ಪುಡಿ ಪುಡಿಯಾಗಿವೆ. ಬೊಮ್ಮನಹಳ್ಳಿಯ ಹೊಂಗಸಂದ್ರದಲ್ಲಿ ಘಟನೆ ನಡೆದಿದೆ. ಹೊಂಗಸಂದ್ರದ ರಾಜಕುಮಾರ್ ರಸ್ತೆ ಬದಿ ನಿಲ್ಲಿಸಿದ್ದ 12 ಕಾರುಗಳು 8 ಆಟೋಗಳ ಮೇಲೆ ದುಷ್ಕರ್ಮಿಗಳು ನಸುಕಿನ ಜಾವ 3 ಗಂಟೆ ಸುಮಾರಿಗೆ ಕಲ್ಲು, ದೊಣ್ಣೆ, ರಾಡ್‌ನಿಂದ ಕಾರು ಆಟೋಗಳ ಮೇಲೆ ದಾಳಿ ಮಾಡಿದ್ದಾರೆ. ದಾಳಿಯಲ್ಲಿ ಕಾರು ಮತ್ತು ಆಟೋಗಳ ಗಾಜುಗಳು ಒಡೆದಿವೆ.



ಪ್ರಕರಣ ಸಂಬಂಧ ಕಾರು, ಆಟೋ ಮಾಲೀಕರು ಪ್ರತಿಕ್ರಿಯಿಸಿದ್ದು, ಹಲವು ವರ್ಷಗಳಿಂದ ''ಕಾರು, ಆಟೋ ಓಡಿಸಿ ಜೀವನ ಸಾಗಿಸುತ್ತಿದ್ದೇವೆ. ಬಾಡಿಗೆ ಮನೆಗಳ ಬಳಿ ಕಾರು, ಆಟೋ ನಿಲ್ಲಿಸಲು ಜಾಗವಿಲ್ಲದೆ ರಸ್ತೆ ಬದಿ ಪಾರ್ಕ್ ಮಾಡುತ್ತಿದ್ದೇವೆ. ಪುಟ 2

## ಬೈಕ್ ಟ್ಯಾಕ್ಸಿ ನಿಷೇಧ

### ಸ್ಥಗಿತಗೊಂಡಿದ್ದ ಬೌನ್ಸ್ ಬೈಕ್ ಸರ್ವಿಸ್‌ಗೆ ಮರುಜೀವ!

**ಬೆಂಗಳೂರು:** ರಾಜ್ಯ ಸಾರಿಗೆ ಇಲಾಖೆ ಬೈಕ್ ಟ್ಯಾಕ್ಸಿಗೆ ನಿಷೇಧ ಹೇರಿದ ಬೆನ್ನಲ್ಲೇ ಮೂರು ವರ್ಷದ ಹಿಂದೆ ಸ್ಥಗಿತಗೊಂಡಿದ್ದ ಬೌನ್ಸ್ ಬೈಕ್‌ಗಳು ಹೊಸ ರೂಪ, ಹೊಸ ನಿಯಮದೊಂದಿಗೆ ಮತ್ತೆ ರೋಡಿಗಿಳಿತ್ತಿವೆ.



ಬೆಂಗಳೂರಲ್ಲಿ ಒಂದೆಡೆ ಅಗ್ರಿಗೇಟರ್ ಕಂಪನಿಗಳಾದ ಒಲಾ-ಊಬರ್‌ಗಳಿಂದ ಹಗಲು ದರೋಡೆ ನಡೆಯುತ್ತಿದೆ. ಮತ್ತೊಂದೆಡೆ ರ್‍ಯಾಪಿಡೋ ಬೈಕ್ ಟ್ಯಾಕ್ಸಿ ಬಂದ್ ಆಗಿದೆ. ಹೀಗಾಗಿ ಪ್ರತಿನಿತ್ಯ ಕೆಲಸ ನಿರ್ವಹಿಸೋ ಜನರಿಗೆ ತೊಂದರೆಯಾಗುತ್ತಿದೆ. ಇದರ ನಡುವೆ ಮೂರು ವರ್ಷದ ಹಿಂದೆ ಸ್ಥಗಿತಗೊಂಡಿದ್ದ ಬೌನ್ಸ್ ಬೈಕ್ ಬಾಡಿಗೆ ಸರ್ವಿಸ್ ಆರಂಭಿಸಲಾಗಿದೆ. ಪುಟ 2

### ರಾಜ್ಯದಲ್ಲಿ 2 ದಿನ ಭಾರೀ ಮಳೆ

## ಯೆಲ್ಲೋ ಅಲರ್ಟ್

**ಬೆಂಗಳೂರು:** ರಾಜ್ಯದಲ್ಲಿ ಮುಂಗಾರು ಮಳೆಯ ಆರ್ಭಟ ಜೋರಾಗಿದೆ. ಇನ್ನು 2-3 ದಿನಗಳ ಕಾಲ ಕರ್ನಾಟಕದಲ್ಲಿ ಧಾರಾಕಾರ ಮಳೆ ಆಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು 12 ಜಿಲ್ಲೆಗಳಿಗೆ ಮಳೆಯ ಮುನ್ಸೂಚನೆ ನೀಡಲಾಗಿದೆ.

**12 ಜಿಲ್ಲೆಗಳಿಗೆ ಭಾರೀ ಮಳೆ ಅಲರ್ಟ್:** ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಹಾವೇರಿ, ಬಾಗಲಕೋಟೆ, ಧಾರವಾಡ, ಗದಗ, ಬೆಳಗಾವಿ, ಶಿವಮೊಗ್ಗ, ದಾವಣಗೆರೆ, ಚಿಕ್ಕಮಗಳೂರು, ಮೈಸೂರು, ಹಾಸನ ಮತ್ತು ಕೊಡಗು ಜಿಲ್ಲೆಗಳಲ್ಲಿ ಭಾರೀ ಮಳೆಯ ಮುನ್ಸೂಚನೆ ನೀಡಲಾಗಿದೆ.




ಉಳಿದಂತೆ ಎಲ್ಲಾ ಜಿಲ್ಲೆಗಳಲ್ಲೂ ಸಾಧಾರಣ ಮಳೆಯ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ.

**ಕೊಡಗಿನ ಶಾಲಾ-ಕಾಲೇಜಿಗೆ ರಜೆ:** ಕೊಡಗಿನಲ್ಲಿ ನಿರಂತರವಾಗಿ ಸುರಿಯುತ್ತಿರುವ ಭಾರೀ ಮಳೆಗೆ ಜನ ಜೀವನ ಅಸ್ತವ್ಯಸ್ತಗೊಂಡಿದೆ. ಪುಟ 2

## ಬಿಬಿಎಂಪಿ ಶಾಲಾ ಮಕ್ಕಳಿಗೆ ಇನ್ನೂವರೆಗೂ ವಿತರಣೆಯಾಗದ ಶೂ, ಸಮವಸ್ತ್ರ

**ಬೆಂಗಳೂರು:** ಬೇಸಿಗೆ ಕಳೆದು ಶಾಲೆಗಳು ಆರಂಭವಾಗಿ ಒಂದು ತಿಂಗಳು ಕಳೆದರೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಾಲೆ ಮಕ್ಕಳಿಗೆ ಸಮವಸ್ತ್ರ, ಶೂ ಇನ್ನೂವರೆಗೂ ವಿತರಣೆಯಾಗಿಲ್ಲ. ಇದಕ್ಕೆ ಕಾರಣ ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳದೆ ಇರುವುದು. ಬಿಬಿಎಂಪಿ ಶೂ ಮತ್ತು ಸಮವಸ್ತ್ರದ ಟೆಂಡರ್ ಜೂನ್‌ನಲ್ಲೇ ಕರೆದಿದೆ. ಈ ಟೆಂಡರ್ ಪಡೆಯಲು ಕಂಪನಿಗಳು ಮುಂದೆ ಬಂದಿವೆ. ಆದರೆ, ಯಾವ ಕಂಪನಿಗೆ ಟೆಂಡರ್ ನೀಡಬೇಕೆಂದು ಬಿಬಿಎಂಪಿ ಇನ್ನೂ ಅಂತಿಮಗೊಳಿಸಿಲ್ಲ. ಹೀಗಾಗಿ, ಬಿಬಿಎಂಪಿ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಸಮವಸ್ತ್ರ ಹಾಗೂ ಶೂ ವಿತರಣೆಯಾಗಿಲ್ಲ. ವಿದ್ಯಾರ್ಥಿಗಳು ಸಮವಸ್ತ್ರ ಹಾಗೂ ಶೂಗಾಗಿ ಇನ್ನೊಂದು ತಿಂಗಳು ಕಾಯಬೇಕಾಗಿದೆ. ಸದ್ಯ, ವಿದ್ಯಾರ್ಥಿಗಳು ಹಳೆಯ ಶೂ ಮತ್ತು ಸಮವಸ್ತ್ರ ಧರಿಸಿಕೊಂಡು ಶಾಲೆಗೆ ಬರುತ್ತಿದ್ದಾರೆ.



ಬಿಬಿಎಂಪಿಯ 93 ಶಿಶುವಿಹಾರ, 17 ಪ್ರಾಥಮಿಕ ಶಾಲೆ, 35 ಪ್ರೌಢಶಾಲೆ, 20 ಪಿಯು ಕಾಲೇಜು, 6 ಸ್ನಾತಕೋತ್ತರ ಪದವಿ ಕಾಲೇಜುಗಳಿವೆ. ಬಿಬಿಎಂಪಿ ಶಾಲೆಗಳಿಗೆ ಪ್ರಸಕ್ತ ವರ್ಷ 22 ಸಾವಿರಕ್ಕೂ ಅಧಿಕ ಮಕ್ಕಳು ದಾಖಲಾತಿ ಪಡೆದುಕೊಂಡಿದ್ದಾರೆ. ಈಗಾಗಲೇ ಶಾಲೆಗಳು ಆರಂಭಗೊಂಡು 35 ದಿನ ಕಳೆದಿವೆ. ಆದರೂ ಕೂಡ ಬಿಬಿಎಂಪಿಯ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಸಮವಸ್ತ್ರ, ಶೂ, ಸಾಕ್ಸ್ ವಿತರಣೆಯಾಗಿಲ್ಲ. ಪ್ರತಿಬಾರಿ ಸಮವಸ್ತ್ರ, ಶೂ ವಿತರಣೆಯಲ್ಲಿ ವಿಳಂಬ ಮಾಡುತ್ತಿದ್ದ ಪಾಲಿಕೆ ಈ ಬಾರಿಯೂ ಕೂಡ ತನ್ನ ಹಳೇ ಚಾಳಿ ಮುಂದುವರಿಸಿದೆ. ವಿದ್ಯಾರ್ಥಿಗಳು ಹೊಸ ಶೂ, ಸಮವಸ್ತ್ರ ಧರಿಸಲು ಇನ್ನೂ ಒಂದು ತಿಂಗಳು ಕಾಯಬೇಕಾಗಿದೆ. ಬಿಬಿಎಂಪಿಯ ಶಾಲಾ-ಕಾಲೇಜಿಗೆ ಜುಲೈ 31ರವರೆಗೆ ದಾಖಲಾತಿಗೆ ಅವಕಾಶ ಇದೆ. ಇನ್ನೂ ಸಾಕಷ್ಟು ವಿದ್ಯಾರ್ಥಿಗಳು ದಾಖಲಾಗುವ ಸಾಧ್ಯತೆ ಇದೆ. ಕಂಪನಿಗಳಿಂದ ಶೂ, ಸಮವಸ್ತ್ರಗಳ ಸ್ಯಾಂಪಲ್ ಪಡೆಯಲಾಗಿದೆ. ಸಮಿತಿ ನೇತೃತ್ವದಲ್ಲಿ ಯಾವ ಕಂಪನಿಗೆ ಟೆಂಡರ್ ನೀಡಬೇಕು ಎಂದು ಫೈನಲ್ ಮಾಡಿದ ಮೇಲೆ ಸಮವಸ್ತ್ರ, ಶೂ ಖರೀದಿಸಲಾಗುತ್ತದೆ ಎಂದು ಪಾಲಿಕೆ ಅಧಿಕಾರಿಗಳು ಹೇಳಿದ್ದಾರೆ. ಪುಟ 2

## ಬಿಎಂಟಿಸಿಯಲ್ಲಿ 4 ಸಾವಿರ ಲೀಟರ್ ಡೀಸೆಲ್ ಹಣ ಲೂಟಿ

**ಬೆಂಗಳೂರು:** ಬಿಎಂಟಿಸಿಯಲ್ಲಿ 54 ಡಿಪೋಗಳಿದ್ದು, ಸುಮಾರು 6800 ಬಸ್‌ಗಳಿವೆ. ಅದರಲ್ಲಿ ಪ್ರತಿದಿನ ಡಿಪೋದಿಂದ ಒಪ್ಪಂದದ ಮೇರೆಗೆ ನೂರಾರು ಬಸ್‌ಗಳು ಬಾಡಿಗೆಗೆ ಹೋಗುತ್ತವೆ. ಈ ವೇಳೆ, ಡಿಪೋದ ಹಿರಿಯ ಅಧಿಕಾರಿಗಳು ಡ್ರೈವರ್ ಮತ್ತು ಕಂಡಕ್ಟರ್‌ಗಳನ್ನು ಸೆಟ್ ಮಾಡಿಕೊಂಡು ಸುಳ್ಳು ಲೆಕ್ಕ ಕೊಟ್ಟು ಡಿಸೇಲ್ ಕಳ್ಳತನ ಮಾಡುತ್ತಿರುವ ಆರೋಪ ಕೇಳಿಬಂದಿದೆ.

ದೀಗ ಇಂತಹದ್ದೇ ಪ್ರಕರಣ ಬೆಳಕಿಗೆ ಬಂದಿದೆ. ಘಟಕ 31 ರ ಸುಮ್ಮನಹಳ್ಳಿ ಡಿಪೋದಿಂದ ಸಿಸಿ ಕಾಂಟ್ಯಾಕ್ಟ್ ಕ್ಯಾರೇಜ್ ಮೇಲೆ ಬೇರೆಬೇರೆ ಊರಿಗೆ ಮತ್ತು ಮದುವೆ-ಶುಭ ಸಮಾರಂಭಗಳಿಗೆ ಬಿಎಂಟಿಸಿ ಬಸ್‌ಗಳನ್ನು ತೆಗೆದುಕೊಂಡು ಹೋಗಿದ್ದಾರೆ. ಈ ವೇಳೆ, ಬಸ್ ಕಡಿಮೆ ದೂರ ಸಂಚಾರ ಮಾಡಿದ್ದರೂ ಹೆಚ್ಚಿನ ಸಂಚಾರ ಮಾಡಿದೆ ಎಂದು ಲೆಕ್ಕ ತೋರಿಸಿ ಡಿಪೋದ ಹಿರಿಯ ಅಧಿಕಾರಿಗಳು ಸುಮಾರು 4 ಸಾವಿರ ಲೀಟರ್‌ನಷ್ಟು ಡಿಸೇಲ್ ಕಳವು ಮಾಡಿ ಬಿಎಂಟಿಸಿಗೆ ಲಕ್ಷಾಂತರ ರುಪಾಯಿ ಮೋಸ ಮಾಡಿರುವ ಆರೋಪ



ಕೇಳಿ ಬಂದಿದೆ. ಈ ಆರೋಪದ ಬಗ್ಗೆ ದಾಖಲೆ ಸಮೇತ ಬಿಎಂಟಿಸಿಯ ಮುಖ್ಯ ಕಚೇರಿಯ ಹಿರಿಯ ಅಧಿಕಾರಿಗಳಿಗೆ ದೂರು ನೀಡಿದರೂ ಯಾವುದೇ ಕ್ರಮಗೊಳ್ಳಲು ಮುಂದಾಗಿಲ್ಲ ಎಂಬ ಆರೋಪವೂ ಕೇಳಿಬಂದಿದೆ. ಈ ಅಕ್ರಮದಲ್ಲಿ ಹಿರಿಯ ಅಧಿಕಾರಿಗಳೇ ಶಾಮೀಲಾಗಿದ್ದಾರೆ ಎಂಬ ಆರೋಪವೂ ಇದೆ. ಪುಟ 2

### ಆನ್‌ಲೈನ್ ಬೆಟ್ಟಿಂಗ್, ಗ್ಯಾಂಬ್ಲಿಂಗ್ ಅಂಕುಶಕ್ಕೆ ಮುಂದಾದ

## ಸರ್ಕಾರ

**ಬೆಂಗಳೂರು:** ಆನ್‌ಲೈನ್ ಬೆಟ್ಟಿಂಗ್ ಹಾಗೂ ಗ್ಯಾಂಬ್ಲಿಂಗ್‌ಗೆ ಅಂಕುಶ ಹಾಕಲು ಸರ್ಕಾರ ಮುಂದಾಗಿದೆ. ಸರ್ಕಾರದಿಂದ ಹೊಸ ತಿದ್ದುಪಡಿ ಮಸೂದೆ ಕರ್ನಾಟಕ ಪೊಲೀಸ್ (ತಿದ್ದುಪಡಿ) ಮಸೂದೆ 2025 ಕರಡು ಸಿದ್ಧಪಡಿಸಲಾಗಿದೆ.



ಮುಂಬರುವ ಅಧಿವೇಶನದಲ್ಲಿ ಮಂಡನೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಈ ಪ್ರಸ್ತಾಪಿತ ಕಾನೂನು ಪ್ರಕಾರ ಗೇಮ್ ಆಫ್ ಚಾನ್ಸ್ ಅಂದ್ರೆ, ಯಾವುದೇ ಆಟ, ಪುಟ 2

» **ಹೊಸ ತಿದ್ದುಪಡಿ ಮಸೂದೆ ಮಂಡನೆಗೆ ತಯಾರಿ**

## ಒಬಿಸಿ ಸಲಹಾ ಮಂಡಳಿಯ ಅಧ್ಯಕ್ಷರಾಗಿ ನೇಮಕವಾಗಿಲ್ಲ: ಸಿಎಂ ಕಚೇರಿ ಸ್ಪಷ್ಟನೆ

**ನವದೆಹಲಿ:** ಕಾಂಗ್ರೆಸ್ ಒಬಿಸಿ ಸಲಹಾ ಮಂಡಳಿಯ ಅಧ್ಯಕ್ಷರಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ನೇಮಕ ಮಾಡಿಲ್ಲ ಎಂದು ಸಿಎಂ ಕಚೇರಿ ತಿಳಿಸಿದೆ.

ಒಬಿಸಿ ಸಲಹಾ ಮಂಡಳಿ ಅಧ್ಯಕ್ಷರಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೇಮಕಗೊಂಡಿದ್ದಾರೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿದೆ. ಅಂತಹ ಯಾವುದೇ ನೇಮಕಾತಿ ನಡೆದಿಲ್ಲ ಎಂದು ಹೇಳಿದೆ.



ಸಲಹಾ ಮಂಡಳಿ ಸಭೆ ಎಐಸಿಸಿ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷರಾದ ಡಾ. ಅನಿಲ್ ಜೈಹಿಂದ್ ಅವರ ಅಧ್ಯಕ್ಷತೆಯಲ್ಲಿ ಜುಲೈ 15ರಂದು ಬೆಂಗಳೂರಿನಲ್ಲಿ ನಡೆಯಲಿದೆ. ಸಭೆಯ ಆತಿಥ್ಯವನ್ನು ಮುಖ್ಯಮಂತ್ರಿಗಳು ವಹಿಸಿಕೊಂಡಿದ್ದು ಸಭೆ ಕೆಪಿಸಿಸಿ ಕಚೇರಿಯ ಭಾರತ್ ಜೋಡೋ ಭವನದಲ್ಲಿ ನಡೆಯಲಿದೆ.

ವಿವಿಧ ರಾಜ್ಯಗಳ ಪಕ್ಷದ ಮಾಜಿ ಮುಖ್ಯಮಂತ್ರಿಗಳು, ಹಾಲಿ ಮತ್ತು ಮಾಜಿ ಸಂಸದರು, ಶಾಸಕರು ಸೇರಿದಂತೆ 50 ಮಂದಿ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಎಐಸಿಸಿಯ ಒಬಿಸಿ ಘಟಕದ ಸಲಹ ಸಮಿತಿಗೆ ಬೇರೆ ಬೇರೆ ರಾಜ್ಯದ ಪ್ರಮುಖ 24 ಒಬಿಸಿ ನಾಯಕರನ್ನ ಸಲಹೆಗಾರರಾಗಿ ನೇಮಿಸಲಾಗಿದೆ. ಕೆಲವು ಮಾಜಿ ಸಿಎಂಗಳು ಇದರಲ್ಲಿ ಇದ್ದಾರೆ ಎಂದು ಸಿದ್ದರಾಮಯ್ಯನವರ ಕಚೇರಿ ತಿಳಿಸಿದೆ.

## ಗ್ಯಾರಂಟಿ ಬೇಡ ಅಂತ ಹೇಳಿ, ಅದೇ ದುಡ್ಡಲ್ಲಿ ರಸ್ತೆ ಮಾಡಿಸ್ತೀವಿ

**ಕೊಪ್ಪಳ:** ನಮಗೆ ಗ್ಯಾರಂಟಿ ಬೇಡ ಅಂತಾ ಹೇಳಿ ಬಿಡಿ ಅದೇ ದುಡ್ಡಲ್ಲಿ ರಸ್ತೆ ಮಾಡಿಸ್ತೀವಿ ಎಂದು ಶಾಸಕ ಬಸವರಾಜ ರಾಯರೆಡ್ಡಿ ಹೇಳಿದ್ದಾರೆ. ಕೊಪ್ಪಳದ ಕುಕನೂರ ತಾಲೂಕಿನ ರಾಯವಣಕಿ ಗ್ರಾಮದ ಶಾಲಾ ಕೊಠಡಿ ಉದ್ಘಾಟನೆ ಮಾಡಿ ಅವರು ಮಾತನಾಡಿದರು. ಈ ವೇಳೆ, ನಮಗೆ ಗ್ಯಾರಂಟಿ ಬೇಡ ಎಂದು ಹೇಳಿ. ನಮ್ಮ ಜನ ಏನೂ ಬೇಡ ಎನ್ನುತ್ತಿದ್ದಾರೆ ಎಂದು ಸಿದ್ದರಾಮಯ್ಯ ಅವರಿಗೆ ಸಲಹೆ ಕೊಡ್ತೇನಿ ಎಂದಿದ್ದಾರೆ. ಮಹಿಳೆಯರಿಗೆ ಗೃಹಲಕ್ಷ್ಮೀ ಕೊಡ್ತೀರಿ. ನಮಗೆ ರಸ್ತೆ ಕೊಡಿ ಎಂದು ಕೇಳಿದ ಜನರಿಗೆ ಅವರು ಈ ರೀತಿ ಉತ್ತರಿಸಿದ್ದಾರೆ. ಗ್ರಾಮೀಣ ರಸ್ತೆ ಮಾಡಸೋದು ಕಷ್ಟ, ನಮ್ಮ ಬಳಿ ಇರುವ ಹಣದಲ್ಲಿ ನೋಡಿ ಮಾಡಬೇಕು ಎಂದಿದ್ದಾರೆ.



1.24 ಲಕ್ಷ ಕೋಟಿ ರೂ. ವಿವಿಧ ಉಚಿತ ಯೋಜನೆಗಳಿಗೆ ಹಣ ನೀಡುತ್ತಿದ್ದೇವೆ, ಗ್ಯಾರಂಟಿ ಯೋಜನೆಗಳಿಂದ ನೇರವಾಗಿ 54ಕೋಟಿ ರೂ. ನೀಡುತ್ತಿದ್ದೇವೆ. ಬರುವ ದಿನಗಳಲ್ಲಿ ರಸ್ತೆಗಳಿಗೂ ಹಣ ನೀಡುತ್ತೇವೆ, ಹಳ್ಳಿ ರಸ್ತೆಗಳನ್ನು ಸರಿಪಡಿಸುತ್ತೇವೆ ಎಂದಿದ್ದಾರೆ.

## ಡಾ.ಬಾಬು ಜಗಜೀವನ ರಾಂ ಅವರ ಆಡಳಿತ ವೈಖರಿಯು ನಮಗೆ ಸ್ಫೂರ್ತಿದಾಯಕ

**ಬೆಂಗಳೂರು:** ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ ರಾಂ ಅವರು ಉತ್ತಮ ಆಡಳಿತಗಾರರಾಗಿದ್ದರು. ಅವರ ಆಡಳಿತ ವೈಖರಿಯು ನಮಗೆ ಸ್ಫೂರ್ತಿದಾಯಕವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.



ವಿಧಾನಸೌಧದ ಪಶ್ಚಿಮ ದ್ವಾರದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಡಾ. ಬಾಬು ಜಗಜೀವನ ರಾಂ ಅವರ 39ನೇ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು ಡಾ.ಬಾಬು ಜಗಜೀವನ ರಾಂ ಅವರು ಸ್ವಾತಂತ್ರ ಹೋರಾಟಗಾರರಲ್ಲದೆ ಸಮಾಜ ಸೇವಕರು ಆಗಿದ್ದರು. ನಾಡು ಕಂಡ ಅಪರೂಪದ ನಾಯಕ. ಅವರ ಬದುಕು ನಮಗೆ ಪ್ರೇರಣೆಯಾಗಬೇಕು ಎಂದರು. ಅವರು ನಮಗೆಲ್ಲರಿಗೂ ಮಾರ್ಗದರ್ಶಕರಾಗಿದ್ದಾರೆ. ಅವರ ಮಾರ್ಗದಲ್ಲಿ ನಡೆಯುವ ಪ್ರಯತ್ನವೇ ನಾವು ಅವರಿಗೆ ಸಲ್ಲಿಸುವ ಗೌರವ ಎಂದು ತಿಳಿಸಿದರು.

ದೀನದಲಿತರು, ಹಿಂದುಳಿದವರು, ಕಾರ್ಮಿಕರು, ಅಲ್ಪಸಂಖ್ಯಾತರಿಗೆ ನಾಯಕರಾಗಿದ್ದರು. ಮಾನವೀಯ ಮೌಲ್ಯ ಹೊಂದಿದ್ದ ಅವರು ಸಮಾಜ ಸುಧಾರಕರಾಗಿದ್ದರು. ಉತ್ತಮ ಆಡಳಿತಗಾರರಾಗಿದ್ದರಲ್ಲದೆ ಎಲ್ಲರಿಗೂ ಆದರ್ಶಪ್ರಾಯವಾಗಿದ್ದರು ಎಂದು ತಿಳಿಸಿದರು.

ದೇಶದ ಹಸಿರು ಕ್ರಾಂತಿಯ ಹರಿಕಾರರಾಗಿ ದೇಶದಲ್ಲಿ ಆಹಾರ ಸ್ವಾವಲಂಬನೆಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಕೃಷಿಯನ್ನು ಆಧುನೀಕರಿಸಲು ಅವರು ನೀಡಿದ ಕೊಡುಗೆ ಅಪಾರ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಆಹಾರ, ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್, ಸಮಾಜ ಕಲ್ಯಾಣ ಇಲಾಖೆಯ ಮಾಜಿ ಸಚಿವ ಹೆಚ್. ಆಂಜನೇಯ, ಸಮಾಜ ಕಲ್ಯಾಣ ಇಲಾಖೆಯ ಆಯುಕ್ತ ಡಾ. ರಾಕೇಶ್ ಕುಮಾರ್ ಸೇರಿದಂತೆ ಹಿರಿಯ ಗಣ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

## ನಮ್ಮ ಸರ್ಕಾರ ಬಂದ್ರೆ ರಾಯರೆಡ್ಡಿಗೆ 'ಸತ್ಯವಾನ್ ರಾಯರೆಡ್ಡಿ' ಪ್ರಶಸ್ತಿ ಕೊಡ್ತೀವಿ!

ಬೆಂಗಳೂರು: ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಗೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ಅವರು, ಮುಂದಿನ ಮೂರು ವರ್ಷ ನಾನೇ ಸಿಎಂ ಆಗಿರುತ್ತೇನೆ ಎಂದು ಹೇಳಿಕೆ ನೀಡುವ ಮೂಲಕ ಸಿಎಂ ಬದಲಾವಣೆಗೆ ಬಹುತೇಕ ವಿರಾಮ ನೀಡಿದ್ದರು. ಈ ಸಂಬಂಧ ಪ್ರತಿಕ್ರಿಯೆ ನೀಡಿದ ವಿಪಕ್ಷ ನಾಯಕ ಆರ್. ಅಶೋಕ್ ಅವರು, ಎರಡು ವರ್ಷ ಎರಡು ತಿಂಗಳಿಂದ ಬರ್ತಿರೋದು ಒಂದೇ ಸುದ್ದಿ ಅಗ್ರಿಮೆಂಟ್ ಆಗಿದೆ, ಸಿಎಂ ಬದಲಾವಣೆ, ಎರಡುವರೆ ವರ್ಷ ಎರಡು ವರ್ಷದ ಬಗ್ಗೆ ಸುದ್ದಿಯಾಗ್ತಿದೆ ಎಂದರು. ಡಿಕೆ ಶಿವಕುಮಾರ್ ಒಂದು ಮಾಧ್ಯಮದಲ್ಲಿಯೂ ಅದನ್ನು ಹೇಳಿದ್ರು, ಸಿದ್ದರಾಮಯ್ಯನ ಅತಂತ್ರ ಮಾಡಲು ಕುತಂತ್ರ ಮಾಡ್ತಾರೋ ಗೊತ್ತಿಲ್ಲ. ಸಿದ್ದರಾಮಯ್ಯಗೆ ಗೇಟ್ ಪಾಸ್ ಕೊಡೊದು ಗ್ಯಾರಂಟಿ. ನಾನು ಹೇಳಿದ್ದ ಜೊತಿಷ್ಯ ನಿಜ ಆಗಿದೆ, ಎಂಎಲ್ಎಗಳು ಬದಲಾವಣೆ ಬಗ್ಗೆ ಮಾತಾಡಿದ್ದಾರೆ. ರಾಜಣ್ಣ ಕ್ರಾಂತಿಯಾಗುತ್ತೆ ಎಂದಿದ್ದಾರೆ. ಎರಡುವರ್ಷ ಎರಡು ತಿಂಗಳಿಂದ ಸರ್ಕಾರ ಟೇಕ್ ಆಫ್ ಆಗಿಲ್ಲ, ಸಿದ್ದರಾಮಯ್ಯಗೆ ಎಂಎಲ್ಎ ಬೆಂಬಲವಿಲ್ಲ. ಸುರ್ಜೇವಾಲ ಮುಂದೆ ಎಂಎಲ್ಎಗಳು ಹೇಳಿದ್ದಾರೆ ಎಂದರು.



ನ್ಯಾಯ ಕೊಡಿ ಎಂದು ಕೇಂದ್ರದ ನಾಯಕ ಮುಂದೆ ಹೇಳಿದ್ದಾರೆ. ಒಬಿಸಿ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಮಾಡಿದ್ದಾರೆ, ಸಿದ್ದರಾಮಯ್ಯ ಕೇಂದ್ರಕ್ಕೆ ಹೋಗೋದು ಗ್ಯಾರಂಟಿ, ಖರ್ಗೆಗೆ ಬಹಳ ಆಸೆ ಇದೆ, ಕಾಂಗ್ರೆಸ್ ನವರು ಖರ್ಗೆಯವರನ್ನು ಓಡಿಸಿದ್ರು, ಖರ್ಗೆ ಅವರಿಗೆ ಈಗ ಬಾಗಿಲು ತೆರೆದಿದೆ. ಖರ್ಗೆ ಬರ್ತಾರೋ, ಡಿಕೆಶಿವಕುಮಾರ್ ಬರ್ತಾರೋ, ಪರಮೇಶ್ವರ್ ಬರ್ತಾರೋ ಖರ್ಗೆ ಆಸೆ ಇದೆ ಅವರ ಜೊತೆ ಇದ್ದ ಅವರೇ ರಾಷ್ಟ್ರೀಯ ಅಧ್ಯಕ್ಷರಾಗಿದ್ದರಿಂದ ಬಂದ್ರು ಬರಬಹುದು ಎಂದರು.

**ರಾಯರೆಡ್ಡಿಗೆ ನಮ್ಮ ಸರ್ಕಾರ ಬಂದ್ರೆ ಪ್ರಶಸ್ತಿ:** ಈ ಸರ್ಕಾರದಲ್ಲಿ ಅಭಿವೃದ್ಧಿಯೇ ಇಲ್ಲ ಎಂದು ರಾಯರೆಡ್ಡಿ ಹೇಳಿದ್ದಾರೆ, 2ಸಾವಿರ ಬೇಕೋ ರೋಡ್ ಬೇಕೋಎಂದಿದ್ದಾರೆ ಅವರು, ಸತ್ಯವನ್ನೇ ಹೇಳಿದ್ದಾರೆ. ನಮ್ಮ ಸರ್ಕಾರ ಬಂದರೆ ಅವರಿಗೆ ಪ್ರಶಸ್ತಿ ಕೊಡ್ತೇವೆ, ಸತ್ಯವಾನ್ ರಾಯರೆಡ್ಡಿ ಪ್ರಶಸ್ತಿ ಕೊಡ್ತೇವೆ. ಜನರಿಗೆ ಚಿಪ್ಪು ಕೊಟ್ಟು ಹೋಗುವ ಸರ್ಕಾರ ಇದು ಎಂದು ಕಿಡಿಕಾರಿದರು. ನಾಳೆ ನಾನು ಹಾಸನಕ್ಕೆ ಭೇಟಿ ಕೊಡ್ತಿದ್ದೇನೆ ಜಿಲ್ಲಾ ಮಂತ್ರಿ ಹೋಗ್ತಾನೆ ಇಲ್ಲ, ಸಿದ್ದರಾಮಯ್ಯ ಕೊವಿಡ್ ಲಸಿಕೆ ಎಂದು ಕೇಂದ್ರದ ಮೇಲೆ ಗೂಬೆ ಕೂರಿಸ್ತಾರೆ. ಈಗ ಲಸಿಕೆಯಿಂದಲ್ಲ ಎನ್ನೊದು ಪ್ರೂವ್ ಆಗಿದೆ. ಆರೋಗ್ಯ ಮಂತ್ರಿಯೂ ಹೋಗಿಲ್ಲ ಅನಾರೋಗ್ಯ ಮಂತ್ರಿಯೋ ಹೋಗಿಲ್ಲ, ನಾನು ವಿಪಕ್ಷ ನಾಯಕನಾಗಿ ಹೋಗ್ತೇನೆ, ಕಾಫಿ ಬೆಳೆಗಾರರೂ ಸಂಕಷ್ಟದಲ್ಲಿದ್ದಾರೆ. ಆ ಹೋರಾಟಕ್ಕಾಗಿ ಸಕಲೇಶಪುರಕ್ಕೆ ಹೋಗ್ತೇನೆ ಎಂದರು. ಕಾಂಗ್ರೆಸ್‌ನಲ್ಲಿ ಎರಡು ಗುಂಪಾಗಿದೆ, ಆ ಗುಂಪಲ್ಲಿ ನಾನಾ-ನೀನಾ ಎನ್ನೊದು ಬಂದಿದೆ. ಅಧಿಕಾರ ಹಂಚಿಕೆ ಆಗಬೇಕಲ್ವಾ, ಅದೇ ಕಾರಣಕ್ಕೆ ಸುರ್ಜೇವಾಲ ಸರ್ಕಸ್ ಮಾಡ್ತಿರೋದು. ಸಿಎಂನ ಒಬಿಸಿ ಕಮಿಟಿಯಲ್ಲಿ ಚೇರ್ಮನ್ ಮಾಡಿರೊದು ನೋಡಿದ್ರೆ, ಒಬಿಸಿ ಸಲಹಾ ಮಂಡಳಿ ಬೋರ್ಡಿಂಗ್ ಪಾಸ್ ಇದ್ದಂತೆ, ಇನ್ನು ಸೆಕ್ಯೂರಿಟಿ ಚೆಕ್ ಮತ್ತು ಫ್ಲೈಟ್ ಹತ್ತೋದೊಂದೆ ಬಾಕಿ ಎಂದರು.

**ಕಾಂಗ್ರೆಸ್ ಮನಸ್ಥಿತಿ ಟಿಪ್ಪು ಮನಸ್ಥಿತಿ ಒಂದೇ:** ರಾಗಿಗುಡ್ಡ ಘಟನೆ ವಿಚಾರ, ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ಇದಾಗ್ತಿದೆ, ಕಾಂಗ್ರೆಸ್ ಮನಸ್ಥಿತಿ ಟಿಪ್ಪು ಮನಸ್ಥಿತಿ ಇದ್ದಂಗೆ. ಮಂಗಳೂರು ಮತ್ತು ಶಿವಮೊಗ್ಗದಲ್ಲಿ ಇದು ರೆಗ್ಯೂಲರ್ ಆಗಿದೆ. ಎಲ್ಲಿ ಹಿಂದೂ ಸಂಘಟನೆ ಸ್ಟ್ರಾಂಗ್ ಇದೆಯೋ ಅಲ್ಲಿ ಕಿರುಕುಳ ಕೊಡ್ತಿದ್ದಾರೆ. ಇದು ಕಾಂಗ್ರೆಸ್ ಪ್ರಾಯೋಜಿತ ಗೃಹ ಸಚಿವರನ್ನ ಟಾರ್ಚ್ ಹಾಕೊಂಡು ಹುಡುಕಬೇಕಿದೆ ಎಂದರು.

## ಬೆಂಗಳೂರಿನಲ್ಲಿ ಮತ್ತೊಂದು ಚೀಟಿ ಪಂಗನಾಮ: ಬರೋಬ್ಬರಿ 40 ಕೋಟಿ ರೂ.ನೊಂದಿಗೆ ದಂಪತಿ ಎಸ್ಕೇಪ್

**ಬೆಂಗಳೂರು:** ಚೀಟಿ ಹಣಕ್ಕಾಗಿ ಆಸೆ ಪಟ್ಟು ಅದೆಷ್ಟೋ ಜನರು ಮೋಸ ಹೋಗಿದ್ದಾರೆ. ಸಾರ್ವಜನಿಕರಿಂದ ಕೋಟ್ಯಾಂತರ ರೂಪಾಯಿ ಚೀಟಿ ಹಣ ಕಟ್ಟಿಸಿಕೊಂಡು ದಂಪತಿ ಪರಾರಿಯಾಗಿರುವ ಘಟನೆ ಬೆಂಗಳೂರಿನ ಜರಗನಹಳ್ಳಿಯಲ್ಲಿ ನಡೆದಿದೆ. ಆರೋಪಿಗಳಾದ ಸುಧಾ ಮತ್ತು ಸಿದ್ದಿಚಾರಿ ಸುಮಾರು 40 ಕೋಟಿ ರೂ. ಚೀಟಿ ಹಣ ಕಟ್ಟಿಸಿಕೊಂಡು ಪರಾರಿಯಾಗಿ ಒಂದು ತಿಂಗಳು ಕಳೆದಿದೆ. ಆದರೆ, ಇನ್ನೂವರೆಗೂ ಪೊಲೀಸರ ಬಲೆಗೆ ಬಿದ್ದಿಲ್ಲ.



ಪುಟ್ಟೇನಹಳ್ಳಿ ಠಾಣೆ ಪೊಲೀಸರು ಮೂರು ತಂಡಗಳಾಗಿ ಆರೋಪಿಗಳಾದ ಸುಧಾ ಮತ್ತು ಸಿದ್ದಾಚಾರಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ. ಈ ನಡುವೆ ವಂಚನೆಗೆ ಒಳಗಾದವರು ಗೃಹ ಸಚಿವ ಜಿ.ಪರಮೇಶ್ವರ್ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಮೊರೆ ಹೋಗಿದ್ದಾರೆ. ಆದಷ್ಟು ಬೇಗ ಆರೋಪಿಗಳನ್ನು ಹಿಡಿದು ನ್ಯಾಯ ಕೊಡಿಸುವಂತೆ ಮನವಿ ಮಾಡಿದ್ದಾರೆ.

**ಏನಿದು ಪ್ರಕರಣ?:** ಜರಗನಹಳ್ಳಿಯಲ್ಲಿ ವಾಸವಾಗಿದ್ದ ಸುಧಾ ಎಂಬುವರ ಕುಟುಂಬ ಕಳೆದ 20 ವರ್ಷದಿಂದ ಚೀಟಿ ಹಣ ನಡೆಸುತ್ತಿದೆ. ಈ ಕುಟುಂಬ ಸುಮಾರು 600ಕ್ಕೂ ಹೆಚ್ಚು ಜನರಿಂದ ಚೀಟಿ ಹಣ ಕಟ್ಟಿಸಿಕೊಂಡಿದೆ. ಸಾರ್ವಜನಿಕರು 5 ರಿಂದ 10 ಲಕ್ಷ ರೂ.ವರೆಗೂ ಚೀಟಿ ಹಣ ಕಟ್ಟಿದ್ದಾರೆ. ಆದರೆ, ಸುಧಾ ಮತ್ತು ಆಕೆಯ ಪತಿ ಸಿದ್ದಾಚಾರಿ ಕಳೆದ ಒಂದು ವರ್ಷದಿಂದ ಚೀಟಿ ಹಣ ನೀಡದೆ ಸತಾಯಿಸುತ್ತಿದ್ದರು. ಈ ನಡುವೆ ಸುಧಾ ಮತ್ತು ಸಿದ್ದಾಚಾರಿ ದಂಪತಿ ತಮ್ಮ ಇಬ್ಬರು ಮಕ್ಕಳ ಸಮೇತ ಜೂನ್ 3ರ ಮಧ್ಯರಾತ್ರಿ ಇದ್ದಕ್ಕಿದ್ದಂತೆ ಮನೆ ಬಿಟ್ಟು ಹೋಗಿದ್ದಾರೆ.

## ಪೊಲೀಸಪ್ಪನ ಕಾಮದಾಸೆಗೆ ಸುಂದರ ಕುಟುಂಬ ಬೀದಿಗೆ

**ಹುಬ್ಬಳ್ಳಿ:** ಗಂಡ-ಹೆಂಡತಿ ಜಗಳ ಬಗೆಹರಿಸುವ ನೆಪದಲ್ಲಿ ವಿವಾಹಿತ ಮಹಿಳೆಯನ್ನ ಬಲೆ ಹಾಕಿಕೊಂಡ ಪೊಲೀಸ್ ಕಾನ್ಸಟೇಬಲ್, ಬಳಿಕ ಆಕೆ ಜೊತೆಗೆ ಅಕ್ರಮ ಸಂಬಂಧವಿಟ್ಟುಕೊಂಡಿರುವ ಜೊತೆಗೆ ಮಹಿಳೆಯ 6 ವರ್ಷದ ಮಗಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಆರೋಪ ಕೇಳಿಬಂದಿದೆ.

ಹುಬ್ಬಳ್ಳಿಯ ಪೋಲಿ ಪೋಲಿಸಪ್ಪ ಮಾಡಿರುವ ಕೆಲಸಕ್ಕೆ ಪೊಲೀಸ್ ಇಲಾಖೆಗೆ ತಲೆನೋವಾಗಿದೆ. ಪೊಲೀಸ್ ಕಾನ್ಸ್‌ಟೇಬಲ್ ಕಾಮದಾಸೆಗೆ ಸುಂದರ ಕುಟುಂಬ ಹೊಡೆದು ಬೀದಿಗೆ ಬಂದಿದೆ.

ಹುಬ್ಬಳ್ಳಿಯ ಘಂಟಿಕೇರಿ ಠಾಣೆಯ ಕಾನ್ಸ್‌ಟೇಬಲ್ ಹಜರತ್ ಮಿಟ್ಟೆಖಾನ್ ವಿರುದ್ಧ ಹುಬ್ಬಳ್ಳಿ ನಗರದ ಬೆಂಡಿಗೇರಿ ಠಾಣೆಯಲ್ಲಿ ವಿರುದ್ಧ ಪೋಕ್ಸೋ ಕೇಸ್ ದಾಖಲಾಗಿದೆ. ಪೊಲೀಸ್ ಸಹಾಯವಾಣಿ 112 ವಿಭಾಗದಲ್ಲಿ ಕೆಲಸ ಮಾಡುತ್ತಿದ್ದ ಕಾನ್ ಸ್ಟೇಬಲ್ ಹಜರತ್, ಗಂಡ-ಹೆಂಡತಿ ಜಗಳದ ಕರೆ ಆಧರಿಸಿ, ವಿವಾಹಿತಳ ಮನೆಗೆ ಹೋಗಿದ್ದ. ಜಗಳ ಬಗೆಹರಿಸುವ ನೆಪದಲ್ಲಿ ಮಹಿಳೆ ಜೊತೆಗೆ ಸ್ನೇಹ ಮಾಡಿ, ಆಕೆಯ ಜೊತೆಗೆ ಅಕ್ರಮ ಸಂಬಂಧ ಕೂಡ ಇಟ್ಟುಕೊಂಡಿದ್ದ ಎನ್ನಲಾಗಿದೆ.



ಇದರ ಜೊತೆಗೆ ಮಹಿಳೆಯ 6 ವರ್ಷದ ಬಾಲಕಿಗೆ ಸಹ ಲೈಂಗಿಕ ಕಿರುಕುಳ ನೀಡಿದ್ದ ಎನ್ನಲಾಗಿದೆ. ಇದರಿಂದ ನೊಂದ ಮಹಿಳೆ ಗಂಡ ಹಾಗೂ ಸಂತ್ರಸ್ತೆ ಬಾಲಕಿ ತಂದೆ, ಕಾನ್ಸ್‌ಟೇಬಲ್ ವಿರುದ್ಧ ಪ್ರಕರಣ ದಾಖಲಿಸಿ, ಕಾನೂನು ಹೋರಾಟಕ್ಕಿಳಿದ್ದಾರೆ. ಸದ್ಯ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಈ ವಿಷಯವನ್ನು ಗಂಭೀರವಾಗಿ ತೆಗೆದುಕೊಂಡು ತನಿಖೆ ಆರಂಭಿಸಿದೆ.

# ಎತ್ತಿನಹೊಳೆ ಡ್ಯಾಂ ನಿರ್ಮಾಣಕ್ಕೆ ದೊಡ್ಡಬಳ್ಳಾಪುರ ತಾಲೂಕಿನ ಜನರಿಂದಲೂ ವಿರೋಧ!

**ದೇವನಹಳ್ಳಿ:** ಎತ್ತಿನಹೊಳೆ ಯೋಜನೆಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಿರೋಧ ವ್ಯಕ್ತವಾಗಿದ್ದು, ಆ ನಂತರ ಸಕಲೇಶಪುರದಲ್ಲಿ ಪರಿಸರಕ್ಕೆ ಹಾನಿಯಾಗುತ್ತದೆ ಎಂಬ ಕೂಗು ಕೇಳಿಬಂದಿದ್ದು ಗೊತ್ತೇ ಇದೆ. ಇದೆಲ್ಲದರ ಮಧ್ಯೆ ಎತ್ತಿನಹೊಳೆ ಯೋಜನೆಯ ಮೊದಲ ಹಂತದ ಕಾಮಗಾರಿ ಉದ್ಘಾಟನೆಯನ್ನು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ 2024ರ ಸೆಪ್ಟೆಂಬರ್ ನಲ್ಲಿ ಮಾಡಿದ್ದರು. ಬಯಲುಸೀಮೆಯ ಜಿಲ್ಲೆಗಳಾದ ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ಬೆಂಗಳೂರು, ರಾಮನಗರ, ಹಾಸನ ಮತ್ತು ಚಿಕ್ಕಮಗಳೂರು ಜಿಲ್ಲೆಗಳತ್ತ ಪೂರ್ವಾಭಿಮುಖವಾಗಿ ನದಿಯ ನೀರನ್ನು ತಿರುಗಿಸುವ ಈ ಯೋಜನೆಗೆ ಇದೀಗ ಬಯಲುಸೀಮೆಯಲ್ಲೇ ವಿರೋಧ ವ್ಯಕ್ತವಾಗಿದೆ. ದೊಡ್ಡಬಳ್ಳಾಪುರ ತಾಲೂಕಿನ ಲಕ್ಕೆನಹಳ್ಳಿ ಬಳಿ ಸ್ಥಳೀಯರಿಂದ ವಿರೋಧ ವ್ಯಕ್ತವಾಗಿದೆ. ಲಕ್ಕೆನಹಳ್ಳಿ ಬಳಿ ಎತ್ತಿನಹೊಳೆ ಡ್ಯಾಂ ನಿರ್ಮಾಣಕ್ಕೆ ಸರ್ಕಾರ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿದೆ. 7 ಹಳ್ಳಿಗಳನ್ನು ಸ್ಥಳಾಂತರ ಮಾಡಿ ಡ್ಯಾಂ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದ್ದು, ಇದಕ್ಕೆ ಸ್ಥಳೀಯರು



ವಿರೋಧ ವ್ಯಕ್ತಪಡಿಸಿದ್ದಾರೆ.

**ಡ್ಯಾಂನಿಂದ 7 ಹಳ್ಳಿಗಳಿಗೆ ಮುಳುಗಡೆ ಭೀತಿ:** ಲಕ್ಕೆನಹಳ್ಳಿ ಬಳಿ ಡ್ಯಾಂ ನಿರ್ಮಾಣ ಮಾಡುವುದರಿಂದ ಲಕ್ಕೆನಹಳ್ಳಿ, ಸಿಂಗೇನಹಳ್ಳಿ, ದಾಸರಪಾಳ್ಯ, ಶ್ರೀರಾಮನಹಳ್ಳಿ, ಮಚ್ಚೇನಹಳ್ಳಿ, ಕಡೆಪಾಳ್ಯ, ಗಾಣದಾಳು ಗ್ರಾಮಗಳ ಮುಳುಗಡೆ ಆತಂಕ ಎದುರಾಗಿದ್ದು, ಇಲ್ಲಿನ ನಿವಾಸಿಗಳಿಗೆ ಸಂಪೂರ್ಣ ಸ್ಥಳಾಂತರ ಮಾಡುವ ಭಯ ಎದುರಾಗಿದೆ.

**ಎತ್ತಿನಹೊಳೆ ಯೋಜನೆಗೆ ಲಕ್ಕೆನಹಳ್ಳಿಯಲ್ಲೇಕೆ ಡ್ಯಾಂ:** ಎತ್ತಿನಹೊಳೆ ನೀರನ್ನು ಪೈಪ್ ಲೈನ್ ಮೂಲಕ ತಂದು ಲಕ್ಕೆನಹಳ್ಳಿಯಲ್ಲಿ ನಿರ್ಮಿಸಲಾಗುವ ಡ್ಯಾಂಗೆ ತುಂಬಿಸಲು ಸರ್ಕಾರ ಯೋಜನೆ ರೂಪಿಸಿದೆ. ನಂತರ ಅಲ್ಲಿಂದ ನೀರು ಪೂರೈಕೆ ಮಾಡುವ ಇರಾದೆ ಹೊಂದಿದೆ. ಆದರೆ, ಇಲ್ಲಿ ಡ್ಯಾಂ ನಿರ್ಮಾಣದಿಂದ ಅಕ್ಕಪಕ್ಕದ 7 ಗ್ರಾಮಗಳು ಮುಳುಗಡೆಯಾಗಲಿದ್ದು, ಸಂಪೂರ್ಣ ಸ್ಥಳಾಂತರ ಮಾಡಬೇಕಾಗಲಿದೆ. ಹೀಗಾಗಿ, 'ನಮ್ಮ ಗ್ರಾಮದ ಬಳಿ ಡ್ಯಾಂ ಬೇಡ, ಬೇರೆಡೆ ನಿರ್ಮಾಣ ಮಾಡಿ' ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಕಳೆದ ವಾರ ಡಿಸಿಎಂ ಡಿಕೆ ಶಿವಕುಮಾರ್ ಡ್ಯಾಂ ನಿರ್ಮಾಣದ ಸ್ಥಳಕ್ಕೆ ಬೇಟಿ ನೀಡಿದ್ದರು. ಇದರ ಬೆನ್ನಲ್ಲೇ, ಗ್ರಾಮಸ್ಥರು ಪ್ರತಿಭಟನೆ ನಡೆಸಿ ಡ್ಯಾಂ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿದ್ದಾರೆ. ಉಪಮುಖ್ಯಮಂತ್ರಿಗಳು ಗ್ರಾಮಸ್ಥರ ಅಭಿಪ್ರಾಯ ಪಡೆಯದೇ ತೆರಳಿದ್ದಾರೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ರಾಮದ ಸುತ್ತಮುತ್ತ ಅಡಿಕೆ ಸೇರಿದಂತೆ ಹಲವು ಬೆಳೆಗಳನ್ನು ಬೆಳೆಯಲಾಗುತ್ತಿದೆ. ಡ್ಯಾಂ ನಿರ್ಮಾಣ ಮಾಡಿದರೆ ಸಾವಿರಾರು ಎಕರೆ ಫಲವತ್ತಾದ ಕೃಷಿ ಭೂಮಿ ಮುಳುಗಡೆಯಾಗುತ್ತದೆ ಎಂದು ರೈತರು ಆತಂಕ ವ್ಯಕ್ತಪಡಿಸಿದ್ದು, ಕೋಲಾರ ಅಥವಾ ಚಿಕ್ಕಬಳ್ಳಾಪುರ ಭಾಗದ ಬಯಲು ಪ್ರದೇಶದಲ್ಲಿ ಡ್ಯಾಂ ನಿರ್ಮಾಣ ಮಾಡುವಂತೆ ಒತ್ತಾಯಿಸಿದ್ದಾರೆ.

ಹಿರಿಯರು ಕಟ್ಟಿದ ಊರು, ಅವರ ಸಮಾಧಿ ಇರುವ ಭೂಮಿ ಬಿಟ್ಟು ಹೋಗಲ್ಲ ಎಂದು ಸ್ಥಳೀಯರು ಪಟ್ಟು ಹಿಡಿದಿದ್ದಾರೆ. ಡ್ಯಾಂ ನಿರ್ಮಾಣ ಮಾಡಲು ಬಂದರೆ ಉಗ್ರ ಹೋರಾಟ ನಡೆಸುವ ಎಚ್ಚರಿಕೆಯನ್ನೂ ನೀಡಿದ್ದಾರೆ.

### ಸ್ವಾಮೀಜಿಗಳೂ ಎಂಟ್ರಿ

**ಶಾಸಕರ ಜೊತೆ ಸುರ್ಜೇವಾಲ ಇಂದು ಮತ್ತೆ ಸಭೆ:** ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಎರಡನೇ ಹಂತದ ಶಾಸಕರ ಮೀಟಿಂಗ್ ನಡೆಸಲು ಇಂದು ರಾಜ್ಯಕ್ಕೆ ಆಗಮಿಸುತ್ತಿದ್ದಾರೆ. ಮತ್ತೆ ಮೂರು ದಿನಗಳ ಕಾಲ ಶಾಸಕರ ಜೊತೆಗೆ ಚರ್ಚೆ ನಡೆಸಲಿರುವ ಸುರ್ಜೆವಾಲ, ಸಚಿವರ ಕಾರ್ಯವೈಖರಿ ಬಗ್ಗೆಯೂ ಮಾಹಿತಿ ಸಂಗ್ರಹಿಸುವ ಸಾಧ್ಯತೆಗಳು ದಟ್ಟವಾಗಿವೆ. ಆಯಾಯ ಕ್ಷೇತ್ರದಲ್ಲಿ ಆಗದೇ ಇರುವ ಕೆಲಸಗಳ ಬಗ್ಗೆಯೂ ಸುರ್ಜೇವಾಲ ಮಾಹಿತಿ ಸಂಗ್ರಹ ಮಾಡಲಿದ್ದಾರೆ.

ಶಾಸಕರ ಜೊತೆಗಿನ ಸಭೆಯ ಬಳಿಕ ಸಚಿವರಿಗೂ ಪ್ರತ್ಯೇಕವಾಗಿ ಸುರ್ಜೆವಾಲ ಬುಲಾವ್ ಹೊರಡಿಸಲಿದ್ದಾರೆ. ಶಾಸಕರು ಹೇಳಿದ ಅಭಿಪ್ರಾಯಗಳನ್ನು ಇಟ್ಟುಕೊಂಡು ಸಂಪುಟ ಪುನರ್‌ರಚನೆಗೂ ಹೈಕಮಾಂಡ್ ಹೋಂ ವರ್ಕ್ ನಡೆಸಲಿದೆ. ಈಗಾಗಲೇ ಸಚಿವರಿಂದ ಹೈಕಮಾಂಡ್ ರಿಪೋರ್ಟ್ ಕಾರ್ಡ್ ಪಡೆದುಕೊಂಡು ಪರಿಶೀಲನೆ ನಡೆಸಿದೆ. ಆಯಾಯ ಇಲಾಖೆಗೆ ಸಂಬಂಧಿಸಿ 5 ಪ್ರಶ್ನೆಗಳ ರಿಪೋರ್ಟ್ ಕಾರ್ಡ್ ಪಡೆದಿರುವ ಹೈಕಮಾಂಡ್, ಸಚಿವರ ರಿಪೋರ್ಟ್ ಆಧರಿಸಿ ಪ್ರಗತಿ ಪರಿಶೀಲನೆ ನಡೆಸುತ್ತಿದೆ. ಸಚಿವರ ರಿಪೋರ್ಟ್‌ಗೂ ಶಾಸಕರ ದೂರಿಗೂ ತಾಳೆ ಹಾಕಲಿರುವ ಹೈಕಮಾಂಡ್, ಸಚಿವರ ಕಾರ್ಯವೈಖರಿ ಗಮನಿಸಿ ಕ್ಯಾಬಿನೆಟ್‌ನಲ್ಲಿ ಮುಂದುವರಿಸಬೇಕಾ ಕೈ ಬಿಡಬೇಕಾ ಎಂದು ತೀರ್ಮಾನಿಸಲಿದೆ ಎಂದು ಮೂಲಗಳು ತಿಳಿಸಿವೆ.

### ಮಾಲೀಕರ ಮೇಲೂ ಕೇಸ್

ಮಾಲೀಕರು ಕಾನೂನಾತ್ಮಕವಾಗಿ ಏನು ಮಾಡಬೇಕು? ಏನು ಮಾಡಬಾರದು ಎಂಬ ಸೂಚನೆಯನ್ನು ಈ ಸಭೆಯಲ್ಲಿ ಕೊಡಲಾಗಿದೆ.

**ರೆಸಾರ್ಟ್, ಹೋಂ ಸ್ಟೇ ಮಾಲೀಕರಿಗೆ ನೀಡಿದ ಸೂಚನೆಗಳೇನು?:** ಯಾವುದೇ ಹೋಂ ಸ್ಟೇ ನಡೆಸುವವರು ಪ್ರವಾಸೋದ್ಯಮ ಇಲಾಖೆ ಸೇರಿದಂತೆ, ಪೊಲೀಸರ ಅನುಮಾತಿ ಪಡೆದಿರಬೇಕು. ಪ್ರತಿನಿತ್ಯ ಬಾಡಿಗೆ ನೀಡುವವರ ಮಾಹಿತಿಯನ್ನು ಪೊಲೀಸರಿಗೆ ತಿಳಿಸಬೇಕು ಎಂದು ಸೂಚನೆ ನೀಡಲಾಗಿದೆ. ಅಷ್ಟೇ ಅಲ್ಲದೆ, ಕಾನೂನುಬಾಹಿರ ಚಟುವಟಿಕೆಗಳು ಪಾರ್ಟಿಯಲ್ಲಿ ನಡೆದರೆ ಮಾಲೀಕರ ವಿರುದ್ಧವೂ ಕೇಸ್ ಮಾಡಲಾಗುತ್ತದೆ ಎಂದು ಈಶಾನ್ಯ ವಿಭಾಗ ಡಿಸಿಪಿ ಸಜೀತ್ ಎಚ್ಚರಿಕೆ ನೀಡಿದ್ದಾರೆ.

ಪೊಲೀಸರು ಎಷ್ಟೇ ಪ್ರಯತ್ನಪಟ್ಟರೂ ಕೂಡ ಪಾರ್ಟಿಗಳಲ್ಲಿ ಡ್ರಗ್ಸ್ ಪೂರೈಕೆ ಆಗಾಗ ನಡೆಯುತ್ತಲೇ ಇರುತ್ತದೆ. ಅದಕ್ಕೆ ಸಂಪೂರ್ಣ ಕಡಿವಾಣ ಹಾಕುವ ಕೆಲಸವನ್ನು ಪೊಲೀಸರು ಮಾಡಲೇಬೇಕಿದೆ.

### ಬುದ್ಧನ ಶಾಂತಿ ತತ್ವ ಪ್ರತಿಪಾದನೆ

ಖಂಡಿಸುವುದಾಗಿ ಸ್ಪಷ್ಟಪಡಿಸಿರುವ ಬ್ರಿಕ್ಸ್ ನಾಯಕರು, ಭಯೋತ್ಪಾದನೆಗೆ ಯಾರೇ ಬೆಂಬಲ ನೀಡಿದರೂ ಅದನ್ನು ಉಗ್ರವಾಗಿ ಖಂಡಿಸುವುದಾಗಿ ಹೇಳಿದ್ದಾರೆ.

**ನೆನಪಿದೆಯಾ ಪಹಲ್ಗಾಮ್ ಉಗ್ರರ ದಾಳಿ:** ಕಳೆದ ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದಲ್ಲಿ ಬೈಸರನ್ ಕಣಿವೆ ಪ್ರದೇಶದಲ್ಲಿರುವ ಪಹಲ್ಗಾಮ್‌ನಲ್ಲಿ ಭಯೋತ್ಪಾದಕ ದಾಳಿ ನಡೆದಿತ್ತು. ಇದರಲ್ಲಿ ಓರ್ವ ವಿದೇಶಿ ಸೇರಿ 26 ಮಂದಿ ಸಾವನ್ನಪ್ಪಿದ್ದರು. ನೇಕರು ಗಾಯಗೊಂಡರು. ಇದಕ್ಕೆ ಪ್ರತೀಕಾರವಾಗಿ ಭಾರತ ಆಪರೇಷನ್ ಸಿಂಧೂರ ಕಾರ್ಯಾಚರಣೆ ನಡೆಸಿತ್ತು.

### ಬೆಂಬಲಿಸುವುದು ತಪ್ಪು

ಜಗತ್ತನ್ನು ವಿಭಜನೆ ಮತ್ತು ಸಂಘರ್ಷದಿಂದ ದೂರವಿಡುವ ಮಾತುಕತೆ, ಸಹಕಾರ ಮತ್ತು ಸಮನ್ವಯದತ್ತ ಸಾಗುವ ಮತ್ತು ಒಗ್ಗಟ್ಟು ಮತ್ತು ವಿಶ್ವಾಸವನ್ನು ಹೆಚ್ಚಿಸುವ ಪ್ರತಿಯೊಂದು ಪ್ರಯತ್ನಕ್ಕೂ ಭಾರತ ಬೆಂಬಲ ನೀಡುತ್ತದೆ ಎಂದು ಅವರು ಹೇಳಿದರು.

ಭಯೋತ್ಪಾದನೆಯಿಂದ ತೊಂದೆಗೊಳಗಾದವರು ಹಾಗೂ ಭಯೋತ್ಪಾದಕರನ್ನು ಒಂದೇ ತಕ್ಕಡಿಯಲ್ಲಿ ತೂಗಬಾರದು ಎಂದು ಪ್ರಧಾನಿ ಮೋದಿ ಹೇಳಿದರು. ಭಯೋತ್ಪಾದನೆ ಇಂದು ಮಾನವೀಯತೆಗೆ ಅತ್ಯಂತ ಗಂಭೀರ ಸವಾಲಾಗಿದೆ. ಭಯೋತ್ಪಾದನೆಯ ವಿರುದ್ಧ ಕ್ರಮದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ.

ಮುಂದಿನ ವರ್ಷ ಭಾರತದಲ್ಲಿ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಗೆ ಪ್ರಧಾನಿ ಎಲ್ಲಾ ದೇಶಗಳನ್ನು ಆಹ್ವಾನಿಸಿದರು. ಜಗತ್ತಿನಲ್ಲಿ ಶಾಂತಿ ಮತ್ತು ಸುರಕ್ಷತೆ ಬಹಳ ಮುಖ್ಯ. ಇದು ನಮ್ಮೆಲ್ಲರಿಗೂ ಸಾಮಾನ್ಯ ಭವಿಷ್ಯದ ಅಡಿಪಾಯ. ಪರಿಸರ ಶಾಂತಿಯುತ ಮತ್ತು ಸುರಕ್ಷಿತವಾಗಿದ್ದರೆ ಮಾತ್ರ ಜನರು ಪ್ರಗತಿ ಸಾಧಿಸಲು ಸಾಧ್ಯವಾಗುತ್ತದೆ. ಈ ಗುರಿಯನ್ನು ಸಾಧಿಸುವಲ್ಲಿ ಬ್ರಿಕ್ಸ್ ಪ್ರಮುಖ ಪಾತ್ರ ವಹಿಸಬಹುದು. ನಾವು ಒಟ್ಟಾಗಿ ಸವಾಲುಗಳನ್ನು ಎದುರಿಸಬೇಕು ಮತ್ತು ಒಟ್ಟಾಗಿ ಮುಂದುವರಿಯಬೇಕು ಎಂದು ಹೇಳಿದರು.

### ದುಷ್ಕರ್ಮಿಗಳಿಂದ ದಾಳಿ

ಇಲ್ಲಿಯವರೆಗೆ ಇಂತಹ ಘಟನೆ ನಡೆದಿರಲಿಲ್ಲ. ಆದರೆ, ಇದೀಗ ಅಪರಿಚಿತರು ರಸ್ತೆ ಬದಿ ನಿಲ್ಲಿಸಿದ್ದ ಕಾರು ಮತ್ತು ಆಟೋಗಳ ಮೇಲೆ ದಾಳಿ ನಡೆಸಿ ಗಾಜುಗಳನ್ನು ಒಡೆದಿದ್ದಾರೆ. ಈ ರಸ್ತೆಯಲ್ಲಿ ಹೆಚ್ಚು ನೀರಿನ ಟ್ಯಾಂಕರ್ ವಾಹನಗಳ ಓಡಾಡುತ್ತವೆ. ತಿರುವುಗಳಲ್ಲಿ ಟ್ಯಾಂಕರ್ ವಾಹನಗಳು ಸಾಗಲು ಕಿರಿಕಿರಿಯಾಗುತ್ತಿತ್ತು. ವಾಟರ್ ಟ್ಯಾಂಕರ್‌ದವರು ದಾಳಿ ಮಾಡಿರುವ ಸಾಧ್ಯತೆ ಇದೆ'' ಎಂದು ಆರೋಪಿಸಿದ್ದಾರೆ.

ಸದ್ಯ ಘಟನೆ ಸಂಬಂಧ ಬೊಮ್ಮನಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ. ಸಿಸಿ ಕ್ಯಾಮರಾಗಳ ದೃಶ್ಯಗಳನ್ನು ಆಧರಿಸಿ ಪೊಲೀಸರು ಅರುಣ್, ಸಾಗರ್, ಸತೀಶ್ ಮತ್ತು ಮರಿಯಪ್ಪ ಎಂಬ ನಾಲ್ವರನ್ನು ವಶಕ್ಕೆ ಪಡೆದಿದ್ದಾರೆ. ಕುಡಿದ ನಶೆಯಲ್ಲಿ ಕೃತ್ಯ ಎಸಗಿರುವ ಸಾಧ್ಯತೆ ಇದ್ದು, ಪೊಲೀಸರ ತನಿಖೆಯಿಂದ ಸತ್ಯಾಸತ್ಯತೆ ತಿಳಿದುಬರಬೇಕಿದೆ.

ಮೊದಲನೇ ಪುಟದಿಂದ...

### ಬೈಕ್ ಟ್ಯಾಕ್ಸಿ ನಿಷೇಧ

ರಾಜ್ಯ ಸಾರಿಗೆ ಇಲಾಖೆಯ ರೆಂಟ್ ಎ ಮೋಟಾರ್ ಸೈಕಲ್ ಸ್ಕೀಮ್- 1987ರಲ್ಲಿ ಅನುಮತಿ ಪಡೆದು ಈ ಬೈಕ್ ಸರ್ವಿಸ್ ನೀಡಲಾಗ್ತಿದೆ. ನಗರದಲ್ಲಿ ಮತ್ತೆ ಫೀಲ್ಡಿಗಿಳಿದ ಈ ಬಾಡಿಗೆ ಬೈಕ್ ಗಳು ಬೌನ್ಸ್ ಎಲೆಕ್ಟ್ರಿಕ್ ಬೈಕ್‌ಗಳಾಗಿದ್ದು, ಮೊದಲ ಹಂತದಲ್ಲಿ ಗಿಗ್ ವರ್ಕರ್ಸ್‌ಗೆ ಅಂದರೆ ಫುಡ್ ಡಿಲವರಿ, ಕೊರಿಯರ್ ಬಾಯ್ಸ್, ಸೇಲ್ಸ್ ಮ್ಯಾನ್‌ಗಳಿಗೆ ರೆಂಟ್ ಕೊಡ್ತಿವೆ. ಈಗಾಗಲೇ ನಗರದಲ್ಲಿ ಒಂದು ಸಾವಿರ ಬೈಕ್‌ಗಳು ರಸ್ತೆಗಿಳಿದಿದ್ದು, ಒಂದು ದಿನಕ್ಕೆ 240-280 ರೂ.ಅಂತೆ ಚಾರ್ಜ್ ಮಾಡಲಾಗ್ತಿದೆ. ಮಿನಿಮಮ್ ಮೂರು ದಿನಕ್ಕೆ ಬುಕ್ಕಿಂಗ್ ಮಾಡಬೇಕಾಗುತ್ತದೆ. ನಗರದ ಜೆಪಿ ನಗರ, ಹೂಡಿ, ಯಲಹಂಕ, ಆರ್.ಆರ್ ನಗರ, ಹೆಚ್ ಎಸ್ ಆರ್ ಲೇಔಟ್‌ಗಳಲ್ಲಿ ಹಬ್ ಮಾಡಲಾಗಿದೆ.

ಮೂರು ವರ್ಷದ ಹಿಂದೆ ಕೋವಿಡ್ ಸಂಕಷ್ಟದಲ್ಲಿ ಹೆಲ್ಮೆಟ್ ಕಳ್ಳತನ, ಬೈಕ್ ಪಾರ್ಕಿಂಗ್, ಡ್ಯಾಮೇಜ್ ಹೀಗೆ ಹಲವು ಸಮಸ್ಯೆಗಳಿಂದಾಗಿ ಈ ಬೈಕ್ ಬಾಡಿಗೆ ಸೇವೆ ನಿಲ್ಲಿಸಲಾಗಿತ್ತು. ಇದೀಗ ಈಗ ಹೊಸ ರೂಲ್ಸ್‌ಗಳೊಂದಿಗೆ ಸೇವೆ ಪುನರಾರಂಭಿಸಲಾಗಿದೆ. ಯಾವ ಹಬ್‌ನಿಂದ ತೆಗೆದುಕೊಂಡು ಹೋಗ್ತಾರೋ ಅದೇ ಹಬ್‌ಗೆ ಟೈಮ್ ಡ್ಯೂರೇಷನ್ ಮುಗಿದ ನಂತರ ತಂದು ಕೊಡಬೇಕು. ವಾಹನ ಸವಾರರ ಕಂಟ್ರೋಲ್ ಸಹ ಇರಲಿದೆಯಂತೆ.

ಈಗಾಗಲೇ ಬೆಂಗಳೂರು ಹಾಗೂ ದೆಹಲಿಯಲ್ಲಿ ಆರಂಭಗೊಂಡಿರೋ ಈ ಬೌನ್ಸ್ ಬೈಕ್ ಸರ್ವಿಸ್‌ಗೆ ಗಿಗ್ ವರ್ಕಸ್ ‌ನಿಂದ ಉತ್ತಮ ರೆಸ್ಪಾನ್ಸ್ ದೊರೆತಿದೆ.

### ಯೆಲ್ಲೋ ಅಲರ್ಟ್

ಇಂದು ಭಾರೀ ಮಳೆಯಾಗುವ ಸೂಚನೆ ಇದ್ದು ಜಿಲ್ಲೆಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಈ ಹಿನ್ನೆಲೆ ಕೊಡಗು ಜಿಲ್ಲೆಯ ಶಾಲಾ-ಕಾಲೇಜುಗಳಿಗೆ ಇಂದು ರಜೆ ಘೋಷಣೆ ಮಾಡಿ ಜಿಲ್ಲಾಧಿಕಾರಿ ವೆಂಕಟ್ ರಾಜ ಅವರು ಆದೇಶ ಹೊರಡಿಸಿದ್ದಾರೆ.

### ಸರ್ಕಾರ

ಸ್ಪರ್ಧೆಯ ಫಲಿತಾಂಶಗಳು ಅದೃಷ್ಟದಿಂದ ಅವಲಂಬಿತವಾಗಿರುವ, ಅನಿಶ್ಚಿತತೆಗಳಿಂದ ಕೂಡಿರುವ ಆನ್ ಲೈನ್ ಗ್ಯಾಂಬ್ಲಿಂಗ್, ಬೆಟ್ಟಿಂಗ್ ಅಥವಾ ಪಂತ ಕಟ್ಟುವ ಚಟುವಟಿಕೆಗಳು ನಿಷಿದ್ಧ. ಪಂಥ ಕಟ್ಟುವುದು, ಹಣ ಇಡುವುದು, ಟೋಕನ್, ವರ್ಚುವಲ್ ಕರೆನ್ಸಿ ಅಥವಾ ಇ-ಫಂಡುಗಳನ್ನು ಇಟ್ಟು ಅಂತರ್ಜಾಲ, ಮೊಬೈಲ್ ಆಪ್ ಅಥವಾ ಇತರೆ ಡಿಜಿಟಲ್ ವೇದಿಕೆಗಳ ಮೂಲಕ ಆಡುವ ಆಟಗಳ ನಿಷೇಧ. ನೋಂದಾಯಿತವಲ್ಲದ ವೇದಿಕೆಗಳ ಮೂಲಕ ಇಂಥ ಆನ್ ಲೈನ್ ಬೆಟ್ಟಿಂಗ್, ಗ್ಯಾಂಬ್ಲಿಂಗ್ ಸೇವೆ ಕೊಡುವುದು ಸಹ ನಿಷೇಧಿಸಲು ಅವಕಾಶ ಇದೆ.

ಮಸೂದೆಯಲ್ಲಿ ಕರ್ನಾಟಕ ಆನ್‌ಲೈನ್ ಗೇಮಿಂಗ್ ಮತ್ತು ಬೆಟ್ಟಿಂಗ್ ನಿಯಂತ್ರಣ ಪ್ರಾಧಿಕಾರ ರಚನೆಗೆ ಅವಕಾಶ ಇದೆ. ಈ ಪ್ರಾಧಿಕಾರ ಹೊಸ ಕಾನೂನಿನಂತೆ ನಿಯಮಗಳ ಜಾರಿ, ಅನುಪಾಲನೆ, ಆನ್‌ಲೈನ್ ಗೇಮಿಂಗ್ ಹಾಗೂ ಗ್ಯಾಂಬ್ಲಿಂಗ್ ನಿಯಂತ್ರಣದ ಮೇಲೆ ನಿಗಾ ಇಡಲಿದೆ.

ಈ ಪ್ರಾಧಿಕಾರಕ್ಕೆ ಕಾನೂನು, ಸಾರ್ವಜನಿಕ ಆಡಳಿತ, ತಂತ್ರಜ್ಞಾನದ ಅನುಭವ ಹೊಂದಿರುವವರನ್ನು ರಾಜ್ಯ ಸರ್ಕಾರ ಅಧ್ಯಕ್ಷರಾಗಿ ನೇಮಿಸಲು ಅವಕಾಶ ಇದೆ. ಜೊತೆಗೆ ಮೂವರು ಸದಸ್ಯರನ್ನು ನೇಮಕ ಮಾಡಲಾಗುತ್ತದೆ. ಇನ್ನೂ ಹೊಸ ಮಸೂದೆ ಪ್ರಕಾರ ನಿಯಮ ಉಲ್ಲಂಘಿಸಿದ್ರೆ 3 ವರ್ಷ ಜೈಲು, 5 ಲಕ್ಷ ದಂಡದ ಶಿಕ್ಷೆ ಗೊಳಪಡಿಸಬಹುದಾಗಿದೆ.

### ಡೀಸೆಲ್ ಹಣ ಲೂಟಿ

ಈಗ ಬೆಳಕಿಗೆ ಬಂದಿರುವುದು ಸುಮ್ಮನಹಳ್ಳಿ ಡಿಪೋ ಅಕ್ರಮ ಮಾತ್ರ. ಸರಿಯಾಗಿ ತನಿಖೆ ಮಾಡಿದರೆ 54 ಡಿಪೋಗಳ ಅಕ್ರಮ ಕೂಡ ಬಯಲಾಗುತ್ತದೆ ಎಂದು ಸಾರಿಗೆ ನೌಕರರ ಮುಖಂಡರು ಹೇಳಿದ್ದಾರೆ.

ಒಟ್ಟಿನಲ್ಲಿ ಬಿಎಂಟಿಸಿ ಚಾಲಕ, ನಿರ್ವಾಹಕರು ಒಂದು ಅಥವಾ ಎರಡು ರೂ. ಕಡಿಮೆ ಲೆಕ್ಕ ತೋರಿಸಿದರೆ ಕೂಡಲೇ ಅವರನ್ನು ಅಮಾನತು ಮಾಡುವ ಬಿಎಂಟಿಸಿಯ ಹಿರಿಯ ಅಧಿಕಾರಿಗಳು, ಇದೀಗ ಅಧಿಕಾರಿಗಳೇ ಲಕ್ಷಾಂತರ ರೂಪಾಯಿ ವಂಚನೆ ಮಾಡಿದರೂ ಮೌನವಾಗಿರುವುದು ಸಾಕಷ್ಟು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.

### ವಿತರಣೆಯಾಗದ ಶೂ, ಸಮವಸ್ತ್ರ

ಈಗಾಗಲೇ ಬಿಬಿಎಂಪಿಯ ಶಾಲೆಗಳಲ್ಲಿ 22 ಸಾವಿರ ವಿದ್ಯಾರ್ಥಿಗಳು ದಾಖಲಾಗಿದ್ದು, ಬಿಬಿಎಂಪಿ ಆದಷ್ಟು ಬೇಗ ವಿದ್ಯಾರ್ಥಿಗಳಿಗೆ ಶೂ, ಸಮವಸ್ತ್ರ ವಿತರಿಸುತ್ತಾ ಕಾದುನೋಡಬೇಕಿದೆ.

### ಅರೆಸ್ಟ್

ನೀಡಿದ್ದರು. ಪೊಲೀಸ್ ಮೂಲಗಳ ಪ್ರಕಾರ, ಕೊಲೆಯ ಹಿಂದಿನ ಪಿತೂರಿಯಲ್ಲಿ ರೋಷನ್ ಪಾತ್ರದ ಬಗ್ಗೆ ಪ್ರಸ್ತುತ ವಿಚಾರಣೆ ನಡೆಸಲಾಗುತ್ತಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖಾಧಿಕಾರಿಗಳು ಇಲ್ಲಿಯವರೆಗೆ ಸುಮಾರು 12ಕ್ಕೂ ಅಧಿಕ ಮಂದಿಯನ್ನು ವಿಚಾರಣೆಗೆ ಒಳಪಡಿಸಿದ್ದಾರೆ.

ಜುಲೈ 4 ರ ತಡರಾತ್ರಿ ಅಪರಿಚಿತ ದುಷ್ಕರ್ಮಿಯೊಬ್ಬ ಪ್ರಸಿದ್ಧ ಉದ್ಯಮಿ ಗೋಪಾಲ್ ಖೇಮ್ಕಾ ಅವರನ್ನು ಗುಂಡಿಕ್ಕಿ ಕೊಂದಿದ್ದಾನೆ. ಪ್ರಾಥಮಿಕ ಸಂಶೋಧನೆಗಳು ಈ ಕೊಲೆಯನ್ನು ಪೂರ್ವಯೋಜಿತವಾಗಿ ನಡೆಸಲಾಗಿದ್ದು, ಇದರಲ್ಲಿ ಹಲವಾರು ವ್ಯಕ್ತಿಗಳು ಭಾಗಿಯಾಗಿದ್ದಾರೆಂದು ಮೇಲ್ನೋಟಕ್ಕೆ ತೋರುತ್ತದೆ. ಕೊಲೆಯ ನಂತರ, ಬಿಹಾರದ ಹಲವಾರು ವ್ಯಾಪಾರ ಸಮುದಾಯದ ಸದಸ್ಯರು ತಮ್ಮ ಸುರಕ್ಷತೆಯ ಬಗ್ಗೆ ಗಂಭೀರ ಕಳವಳ ವ್ಯಕ್ತಪಡಿಸಿದ್ದಾರೆ.

ಹೆಚ್ಚುತ್ತಿರುವ ಅಶಾಂತಿಗೆ ಪ್ರತಿಕ್ರಿಯಿಸಿದ ಬಿಹಾರ ಸರ್ಕಾರ ಎಲ್ಲಾ ಕಳವಳಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಪರಿಹರಿಸಲಾಗುವುದು ಎಂದು ಭರವಸೆ ನೀಡಿದೆ. ಖೇಮ್ಕಾ ಭಾರತೀಯ ಜನತಾ ಪಕ್ಷ (ಬಿಜೆಪಿ) ಯೊಂದಿಗೆ ಸಹ ಸಂಬಂಧ ಹೊಂದಿದ್ದರು.ಇಷ್ಟು ಪ್ರಭಾವಿ ಉದ್ಯಮಿಯನ್ನು ಮನೆಯ ಹೊರಗೆ ಗುಂಡು ಹಾರಿಸಿ ಕೊಲೆ ಮಾಡಿರುವುದರ ಕುರಿತು ಸಾಕಷ್ಟು ಪ್ರಶ್ನೆಗಳು ಹುಟ್ಟಿಕೊಂಡಿವೆ.

ಉದ್ಯಮಿ ಹತ್ಯೆಯ ಕುರಿತು ನಡೆಯುತ್ತಿರುವ ತನಿಖೆಯನ್ನು ಮೇಲ್ವಿಚಾರಣೆ ಮಾಡಲು ವಿಶೇಷ ಪಡೆ ಅಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ಅಧಿಕಾರಿಗಳನ್ನು ಒಳಗೊಂಡ ಎಸ್ಐಟಿಯನ್ನು ರಚಿಸಲಾಗಿದೆ ಎಂದು ಡಿಜಿಪಿ ವಿನಯ್ ಕುಮಾರ್ ತಿಳಿಸಿದ್ದಾರೆ.

2018 ರಲ್ಲಿ ಹಾಜಿಪುರದಲ್ಲಿ ಭೂ ವಿವಾದಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಖೇಮ್ಕಾ ಅವರ ಮಗನನ್ನು ಸಹ ಕೊಲೆ ಮಾಡಲಾಗಿತ್ತು. ನಂತರ ಗೋಪಾಲ್ ಖೇಮ್ಕಾ ಅವರಿಗೆ ಭದ್ರತೆ ಒದಗಿಸಲಾಯಿತು. ಏಪ್ರಿಲ್ 2024 ರಲ್ಲಿ ಅದನ್ನು ಹಿಂತೆಗೆದುಕೊಳ್ಳಲಾಯಿತು ಮತ್ತು ಅದರ ನಂತರ ಅವರು ಎಂದಿಗೂ ಭದ್ರತೆ ಕೇಳಿರಲಿಲ್ಲ.ವೈದ್ಯರಾಗಿರುವ ಅವರ ಇನ್ನೊಬ್ಬ ಮಗ ಮತ್ತು ಇತರ ಕುಟುಂಬ ಸದಸ್ಯರಿಗೆ ಭದ್ರತೆ ಒದಗಿಸಿದ್ದಾರೆ.

### ಪ್ರಯೋಗ ಪೂರ್ಣ

ಅಧ್ಯಯನವು ಬಾಹ್ಯಾಕಾಶದಲ್ಲಿ ಅವುಗಳ ಬದುಕುಳಿಯುವಿಕೆ, ಪುನರುಜ್ಜೀವನ ಮತ್ತು ಸಂತಾನೋತ್ಪತ್ತಿ ಮೇಲೆ ಕೇಂದ್ರೀಕರಿಸುತ್ತದೆ. ಸೂಕ್ಷ್ಮ ಗುರುತ್ವಾಕರ್ಷಣೆಯ ಪರಿಸರದಲ್ಲಿ ನೀರುಕರಡಿಗಳ ಜೈವಿಕ ಕಾರ್ಯವಿಧಾನಗಳ ಬಗ್ಗೆ ಅಧ್ಯಯನ ನಡೆಯಲಿದೆ ಎಂದು ತಿಳಿಸಿದೆ.

14 ದಿನಗಳ ಕಾಲ ಐಎಸ್‌ಎಸ್‌ನಲ್ಲಿ ಇರಲಿರುವ ಶುಕ್ಲಾ ಒಟ್ಟು 7 ಪ್ರಯೋಗಗಳನ್ನು ಕೈಗೊಳ್ಳಲಿದ್ದಾರೆ. ಈ ಪೈಕಿ 4 ಪ್ರಯೋಗಗಳನ್ನು ಕರ್ನಾಟಕದ ವಿಜ್ಞಾನಿಗಳು ಸಿದ್ಧಪಡಿಸಿದ್ದಾರೆ.

ಗಗನಯಾತ್ರಿ ಶುಭಾಂಶು ಶುಕ್ಲಾ ಐಎಸ್‌ಎಸ್‌ನ ಕಿಟಕಿ ಎಂದೇ ಕರೆಯಲಾಗುವ 'ಕಪೋಲಾ' ರಂಧ್ರದಿಂದ ಹೊರ ಪ್ರಪಂಚವನ್ನು ವೀಕ್ಷಿಸುತ್ತಿರುವ ಚಿತ್ರವನ್ನು ನಾಸಾ ಬಿಡುಗಡೆ ಮಾಡಿದೆ.

ಸಂಜೆ ಮುಗಿಲು
ಸೋಮವಾರ
7.7.2025





# ಡಾ.ಬಾಬು ಜಗಜೀವನ ರಾಂ ಅವರ ಆಡಳಿತ ವೈಖರಿಯು ನಮಗೆ ಸ್ಫೂರ್ತಿದಾಯಕ

**ಬೆಂಗಳೂರು:** ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ ರಾಂ ಅವರು ಉತ್ತಮ ಆಡಳಿತಗಾರರಾಗಿದ್ದರು. ಅವರ ಆಡಳಿತ ವೈಖರಿಯು ನಮಗೆ ಸ್ಫೂರ್ತಿದಾಯಕವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ವಿಧಾನಸೌಧದ ಪಶ್ಚಿಮ ದ್ವಾರದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಡಾ. ಬಾಬು ಜಗಜೀವನ ರಾಂ ಅವರ 39ನೇ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು ಡಾ.ಬಾಬು ಜಗಜೀವನ ರಾಂ ಅವರು ಸ್ವಾತಂತ್ರ ಹೋರಾಟಗಾರರಲ್ಲದೆ ಸಮಾಜ ಸೇವಕರು ಆಗಿದ್ದರು. ನಾಡು ಕಂಡ ಅಪರೂಪದ ನಾಯಕ. ಅವರ ಬದುಕು ನಮಗೆ ಪ್ರೇರಣೆಯಾಗಬೇಕು ಎಂದರು. ಅವರು ನಮಗೆಲ್ಲರಿಗೂ ಮಾರ್ಗದರ್ಶಕರಾಗಿದ್ದಾರೆ. ಅವರ ಮಾರ್ಗದಲ್ಲಿ ನಡೆಯುವ ಪ್ರಯತ್ನವೇ ನಾವು ಅವರಿಗೆ ಸಲ್ಲಿಸುವ ಗೌರವ ಎಂದು ತಿಳಿಸಿದರು. ದೀನದಲಿತರು, ಹಿಂದುಳಿದವರು, ಕಾರ್ಮಿಕರು, ಅಲ್ಪಸಂಖ್ಯಾತರಿಗೆ ನಾಯಕರಾಗಿದ್ದರು. ಮಾನವೀಯ ಮೌಲ್ಯ ಹೊಂದಿದ್ದ ಅವರು ಸಮಾಜ ಸುಧಾರಕರಾಗಿದ್ದರು. ಉತ್ತಮ ಆಡಳಿತಗಾರರಾಗಿದ್ದರಲ್ಲದೆ ಎಲ್ಲರಿಗೂ ಆದರ್ಶಪ್ರಾಯವಾಗಿದ್ದರು ಎಂದು ತಿಳಿಸಿದರು.

ದೇಶದ ಹಸಿರು ಕ್ರಾಂತಿಯ ಹರಿಕಾರರಾಗಿ ದೇಶದಲ್ಲಿ ಆಹಾರ ಸ್ವಾವಲಂಬನೆಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಕೃಷಿಯನ್ನು ಆಧುನೀಕರಿಸಲು ಅವರು ನೀಡಿದ ಕೊಡುಗೆ ಅಪಾರ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಆಹಾರ, ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್, ಸಮಾಜ ಕಲ್ಯಾಣ ಇಲಾಖೆಯ ಮಾಜಿ ಸಚಿವ ಹೆಚ್. ಆಂಜನೇಯ, ಸಮಾಜ ಕಲ್ಯಾಣ ಇಲಾಖೆಯ ಆಯುಕ್ತ ಡಾ. ರಾಕೇಶ್ ಕುಮಾರ್ ಸೇರಿದಂತೆ ಹಿರಿಯ ಗಣ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

### ಅಮೆರಿಕದಲ್ಲಿ ಸ್ಯಾನ್ಹೋಸೆ ನಗರದಲ್ಲಿ 18ನೇ ವಿಶ್ವ ಒಕ್ಕಲಿಗ ಮಹಾಸಮ್ಮೇಳನಕ್ಕೆ ಅದ್ಧೂರಿ ಚಾಲನೆ

# ಸಪ್ತ ಸಾಗರದಾಚೆ ಒಕ್ಕಲಿಗ ಸಂಸ್ಕೃತಿ, ಪರಂಪರೆ ಪ್ರದರ್ಶನ

**ಸ್ಯಾನ್ಹೋಸೆ, ಅಮೆರಿಕ:** ಅಮೆರಿಕದ ಸ್ಯಾನ್ಹೋಸೆ ನಗರದ ಮೆಕನರಿ ಕನ್ವೆನ್ಷನ್ ಸೆಂಟರ್‌ನಲ್ಲಿ ಮೂರು ದಿನಗಳ (ಜು.3-5) 18ನೇ ವಿಶ್ವ ಒಕ್ಕಲಿಗ ಮಹಾಸಮ್ಮೇಳನಕ್ಕೆ ಶನಿವಾರ ಅದ್ಧೂರಿ ಚಾಲನೆ ದೊರಕಿತು.

ಸಪ್ತ ಸಾಗರದಾಚೆ ಕನ್ನಡ ಮಣ್ಣಿನ ಮಕ್ಕಳ ಸಾಂಸ್ಕೃತಿಕ ಮಹಾಸಮ್ಮೇಳನವನ್ನು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಯವರು ದಿವ್ಯ ಆಶೀರ್ವಾದದೊಂದಿಗೆ ಉದ್ಘಾಟಿಸಿದರು.

ಧಾರ್ಮಿಕ, ಸಾಂಸ್ಕೃತಿಕ ಮತ್ತು ಸಮಾಜಮುಖಿ ಹಬ್ಬವಾಗಿ ರೂಪುಗೊಂಡಿರುವ ಈ ಕಾರ್ಯಕ್ರಮವು ವಿಶ್ವದ ವಿವಿಧೆಡೆ ನೆಲೆಸಿರುವ ಒಕ್ಕಲಿಗ ಸಮುದಾಯದ ಬಂಧುಗಳನ್ನು ಒಂದೆಡೆ ಸೇರಿಸಿರುವ ಅಪೂರ್ವ ಸನ್ನಿವೇಶವಾಗಿದೆ. ಕರ್ನಾಟಕದ ಮಾಜಿ ಉಪ ಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ ನಾರಾಯಣ, ಸಂಸದರಾದ ಡಾ. ಕೆ. ಸುಧಾಕರ್, ಶಾಸಕರಾದ ಸಿ.ಎಸ್. ಪುಟ್ಟರಾಜು, ಎಸ್.ಟಿ. ಸೋಮಶೇಖರ್, ಸತೀಶ್ ರೆಡ್ಡಿ, ಗುಬ್ಬಿ ಶ್ರೀನಿವಾಸ್ ಹಾಗೂ ಒಕ್ಕಲಿಗ ಸಮುದಾಯದ ಮುಖಂಡರಾದ ಸಚ್ಚಿದಾನಂದ, ಒಕ್ಕಲಿಗ ಪರಿಷತ್ ಆಫ್ ಅಮೆರಿಕ ಅಧ್ಯಕ್ಷರಾದ ಧನಂಜಯ್ ಕೆಂಗಯ್ಯ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಿ ಸಮ್ಮೇಳನಕ್ಕೆ ಕಳೆ ತಂದಿದ್ದಾರೆ.

**ಸಾಂಸ್ಕೃತಿಕ ವೈಭವ:** ವಿಶ್ವದ ನಾನಾ ಭಾಗಗಳಿಂದ ಆಗಮಿಸಿದ ಸಮುದಾಯದ ಸದಸ್ಯರು, ವೈವಿಧ್ಯಮಯ ಸಂಸ್ಕೃತಿ, ಪರಂಪರೆ, ಉತ್ಸವವನ್ನು ಇಲ್ಲಿ ಜಗತ್ತಿಗೆ ತೋರಿಸಿದ್ದಾರೆ. ಒಕ್ಕಲಿಗರ ಸಂಸ್ಕೃತಿಯ ಬಣ್ಣನೆ, ಭಕ್ತಿಯ ಮೆರವಣಿಗೆ, ಸುಗ್ಗಿ ಕುಣಿತ, ದೇವರ ಉತ್ಸವ, ಕೋಲಾಟ, ವೇಷ ಭೂಷಣಗಳ ಪ್ರದರ್ಶನಗಳು ಸ್ಯಾನ್ಹೋಸೆ ರಸ್ತೆಗಳಲ್ಲಿ ಜಾತ್ರಾ ಉತ್ಸವದ ಅನುಭವವನ್ನು ನೀಡಿದವು.

ಸಾಂಸ್ಕೃತಿಕ, ಕಲಾ ಪ್ರದರ್ಶನಗಳ ಜೊತೆಗೆ ಈ ಮೂರು ದಿನಗಳ ಕಾರ್ಯಕ್ರಮದಲ್ಲಿ ವಿಶಿಷ್ಟ ಭೋಜನ ವ್ಯವಸ್ಥೆ, ಸಮುದಾಯ ವಧು-ವರರ ಪರಿಚಯ ವೇದಿಕೆ, ಉದ್ಯಮಿಗಳಿಗೆ 'ಬಿಸಿನೆಸ್ ಫೋರಂ', ಮಕ್ಕಳಿಗಾಗಿ ವಿವಿಧ ಸ್ಪರ್ಧೆಗಳು, ಕಾರ್ಯಕ್ರಮಗಳು, ಮಹಿಳಾ ಚಟುವಟಿಕೆಗಳು ಸೇರಿದಂತೆ ಹಲವು ವಿಷಯಾಧಾರಿತ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಒಕ್ಕಲಿಗ ಸಮುದಾಯದ ಬಲವರ್ಧನೆಗೆ ಪರಸ್ಪರ ಸಹಕಾರಕ್ಕೆ ನಾಂದಿಯಾಗಿವೆ. ಅಮೆರಿಕದ ವಿವಿಧ ರಾಜ್ಯಗಳು ಹಾಗೂ ಇತರ ದೇಶಗಳಿಂದ ಸಾವಿರಾರು ಕುಟುಂಬಗಳು ಭಾಗವಹಿಸಿದ್ದ ಈ ಸಮ್ಮೇಳನ, ವಿದೇಶಿ ನೆಲದಲ್ಲಿ ಸಮುದಾಯದ ಹೆಗ್ಗಳಿಕೆಯನ್ನು ಅನಾವರಣಗೊಳಿಸಿದೆ. ''ಒಕ್ಕಲಿಗ ಸಮಾಜ ಜಗತ್ತಿನ ಮೂಲೆಮೂಲೆಗೂ ತಲುಪಿದೆ'' ಎಂಬುದನ್ನು ಸಮರ್ಥವಾಗಿ ಸಾರುತ್ತಿದೆ.




**"** ಸಂಸ್ಕೃತಿ, ಕಲೆ, ಪರಂಪರೆಯ ಪ್ರದರ್ಶನದ ಜೊತೆಗೆ ವ್ಯಾಪಾರ ಉದ್ಯಮ ಸ್ಥಾಪನೆ, ವಿಸ್ತರಣೆ, ಸ್ಟಾರ್ಟಪ್ ಐಡಿಯಾಗಳು, ನೆಟ್ವರ್ಕಿಂಗ್, ಅಮೆರಿಕದಲ್ಲಿರುವ ಹೊಸ ಅವಕಾಶಗಳನ್ನು ಬಳಸಿಕೊಂಡು ಅಭಿವೃದ್ಧಿ ಕಾಣಲು ಈ ಸಮ್ಮೇಳನ ಮಹತ್ವದ ಪಾತ್ರ ವಹಿಸುತ್ತದೆ. ಅಮೆರಿಕದಲ್ಲಿ ನೆಲೆಸಿರುವವರು, ಕರ್ನಾಟಕ ಸೇರಿ ಜಗತ್ತಿನ ನಾನಾ ಭಾಗಗಳಿಂದ ಆಗಮಿಸಿರುವವರು ಇದರ ಪ್ರಯೋಜನ ಪಡೆದು ಮತ್ತಷ್ಟು ಅಭಿವೃದ್ಧಿ ಕಾಣುವ ಸಂಪೂರ್ಮ ವಿಶ್ವಾಸವಿದೆ.**
-ಡಾ.ಸಿ.ಎನ್. ಅಶ್ವತ್ಥನಾರಾಯಣ ಶಾಸಕರು

**"** ಈ ಸಮ್ಮೇಳನದಲ್ಲಿ ಭಾಗವಹಿಸಿ ನನಗೆ ಅತ್ಯಂತ ಸಂತೋಷವಾಯಿತು. ಅಮೆರಿಕದಲ್ಲಿ ಒಕ್ಕಲಿಗ ಸಮುದಾಯದವರು ಇಷ್ಟು ದೊಡ್ಡ ಸಂಖ್ಯೆಯಲ್ಲಿ ಸೇರಿ ನಮ್ಮ ಸಂಸ್ಕೃತಿ, ಕಲೆ, ಪರಂಪರೆಯ ಪ್ರದರ್ಶನದ ಜೊತೆಗೆ ಉದ್ಯಮ ಅವಕಾಶಗಳು, ಬೆಳವಣಿಗೆ ಕುರಿತು ಚರ್ಚಿಸುವುದು ನಿಜಕ್ಕೂ ಶ್ಲಾಘನೀಯ. ಯಾವುದೇ ಸಮುದಾಯವಾಗಲಿ ಒಗ್ಗಟ್ಟಿನಿಂದ ಯಾವ ರೀತಿ ಅಭಿವೃದ್ಧಿ ಕಾಣಬಹುದು ಎನ್ನುವುದಕ್ಕೆ ಈ ಸಮ್ಮೇಳನ ಸಾಕ್ಷಿಯಾಗಿದೆ.**
-ಸಿ.ಎಸ್. ಪುಟ್ಟರಾಜು ಶಾಸಕರು

**"** ಒಕ್ಕಲುತನ ಮಾಡುವ ಒಕ್ಕಲಿಗರು ಇಂದು ತಮ್ಮ ಜ್ಞಾನ, ಸ್ವಸಾಮರ್ಥ್ಯದಿಂದ ಸಮಾಜದಲ್ಲಿ ಉನ್ನತ ಸ್ಥಾನಗಳನ್ನು ಅಲಂಕರಿಸಿದ್ದಾರೆ. ತಮ್ಮ ಜ್ಞಾನ ಭಂಡಾರದಿಂದಲೇ ಅಮೆರಿಕ, ಯುರೋಪ್ ಸೇರಿದಂತೆ ಅನೇಕ ದೇಶಗಳಲ್ಲಿ ನೆಲೆಸಿದ್ದಾರೆ. ತಂತ್ರಜ್ಞಾನ ಹುದ್ದೆಗಳು, ಉದ್ಯಮ, ವ್ಯವಹಾರ ಸೇರಿದಂತೆ ಅನೇಕ ಕೆಲಸಗಳನ್ನು ಮಾಡುತ್ತಿದ್ದಾರೆ. ತಾವು ನೆಲೆಸಿರುವ ದೇಶ ಮತ್ತು ತಾಯ್ನಾಡು ಭಾರತಕ್ಕೆ ತಮ್ಮದೇ ಆದ ಮಹತ್ವದ ಕೊಡುಗೆಗಳನ್ನು ನೀಡುತ್ತಿದ್ದಾರೆ. ತಮ್ಮ ಊರಿನಿಂದ ಸಾವಿರಾರು ಕಿ.ಮೀ ದೂರದ ಊರಿಗೆ ಬಂದಿದ್ದರೂ ಸಮುದಾಯ ಮತ್ತು ಕನ್ನಡ ನಾಡಿನ ಸಂಸ್ಕೃತಿ, ಪರಂಪರೆ, ಗೌರವಯನ್ನು ಉಳಿಸಿ ಬೆಳೆಸುತ್ತಿರುವುದು ಅತ್ಯಂತ ಸಂತೋಷದ ಸಂಗತಿ. ಇದು ಸಾಮಾನ್ಯ ಸಮ್ಮೇಳನವಲ್ಲ. ಸಮುದಾಯ ಮತ್ತು ಸಂಸ್ಕೃತಿಯನ್ನು ಒಗ್ಗೂಡಿಸಿ ಅಭಿವೃದ್ಧಿಗೆ ಕೊಡುಗೆ ನೀಡುವ ವಿಶೇಷ ಸಂದರ್ಭವಾಗಿದೆ.**
ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ,
ಪೀಠಾಧಿಪತಿ, ಆದಿಚುಂಚನಗಿರಿ ಮಠ

**"** ಅಮೆರಿಕದಲ್ಲಿ ಒಕ್ಕಲಿಗರ ಸಮ್ಮೇಳನ ಆಯೋಜನೆಯೇ ಒಂದು ಹೆಮ್ಮೆಯ ಸಂಗತಿ. ಮೂಲತಃ ಕೃಷಿಕರಾಗಿರುವ ಒಕ್ಕಲಿಗ ಸಮುದಾಯದವರು ಇಂದು ಜಗತ್ತಿನ ಮೂಲೆ ಮೂಲೆಯಲ್ಲಿದ್ದಾರೆ. ಅಮೆರಿಕದಲ್ಲಿ ದೊಡ್ಡ ಸಂಖ್ಯೆಯಲ್ಲಿರುವ ಒಕ್ಕಲಿಗರು ಒಂದೆಡೆ ಸೇರುವುದರಿಂದ ಬೆಳವಣಿಗೆಗೆ ಇನ್ನಷ್ಟು ಅನುಕೂಲವಾಗುತ್ತದೆ. ಮುಂದಿನ ದಿನಗಳಲ್ಲಿ ಈ ಸಮ್ಮೇಳನವನ್ನು ಮತ್ತಷ್ಟು ವಿಸ್ತಾರಗೊಳಿಸುವ ಉದ್ದೇಶವಿದೆ.**
-ಧನಂಜಯ್
ಅಧ್ಯಕ್ಷರು, ವಿಶ್ವ ಒಕ್ಕಲಿಗ ಪರಿಷತ್ ಆಫ್ ಅಮೆರಿಕ

# ಕೆಲಸ ಕೊಡುವ ಉದ್ಯಮಿಗಳಾಗಿ

**ತುಮಕೂರು:** ವಿಪ್ರ ಬಾಂಧವರು ಬೇರೆಯವರ ಮುಂದೆ ಕೆಲಸಕ್ಕೆ ಕೈ ಚಾಚದೆ, ಬೇರೆಯವರಿಗೆ ಕೆಲಸವನ್ನು ಕೊಡುವ ಉದ್ಯಮಿಗಳಾಗಿ ಬೆಳೆಯಬೇಕೆಂದು ಹಾಗೂ ಸಮಾಜಕ್ಕೆ ಸನ್ಮಾರ್ಗವನ್ನು ತೋರಿಸುವಲ್ಲಿ ಮೇಲ್ಪಂಕ್ತಿಯಾಗಿರಬೇಕೆಂದು ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಜಸ್ಟಿಸ್ ಎನ್.ಕುಮಾರ್‌ರವರು ಕರೆ ನೀಡಿದರು.

ತುಮಕೂರಿನ ಶ್ರೀಸಿರಿನಾಡು ಮಹಾಸಭಾದ ದಶಮಾನೋತ್ಸವ ಕಾರ್ಯಕ್ರಮವನ್ನು ಜೂನ್ 28 ರಿಂದ 29 ರವರೆಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎನ್,ಕುಮಾರ್‌ರವರು ಮಾತನಾಡುತ್ತಾ ಬ್ರಾಹ್ಮಣ ಜನಾಂಗ ಭಾರತ ಸನಾತನ ಧರ್ಮದ ಇತರೆ ಜನಾಂಗಗಳಿಗೆ ಮಾದರಿಯಾಗಿರಬೇಕು ನ್ಯಾಯ, ನೀತಿ, ಸತ್ಯ, ಧರ್ಮ ಹಾಗೂ ದೇಶಕ್ಕಾಗಿ ದುಡಿಯಬೇಕು. ಭಾರತ ದೇಶದಲ್ಲಿ ಕಲಿತು- ಅರಿತು ವಿದೇಶಕ್ಕೆ ಹಾರಬಾರದು. ನಮ್ಮ ನೆಲದಲ್ಲೇ ತಳ ಊರಿ ದೇಶದ ಪ್ರಗತಿಗೆ ದುಡಿಯಬೇಕು. ವಿಪ್ರಭಾಂಧವರು ಸಾಮಾಜಿಕ ಹಾಗೂ ಕೌಟುಂಬಿಕ ಮೌಲ್ಯಗಳನ್ನು ಮರೆಯದೆ ಕಾರ್ಯನಿರ್ವಹಿಸಬೇಕು ಎಂದು ಸಭೆಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಜಿಲ್ಲಾ ಪ್ರತಿನಿದಿಯಾದ ಡಾ.ಹೆಚ್. ಹರೀಶ್ ಹಿರಿಯಣ್ಣರವರು ಮಾತನಾಡುತ್ತಾ ಜಿಲ್ಲೆಯಲ್ಲಿ ಸಿರಿನಾಡು ಮಹಾಸಭಾದ ಕಾರ್ಯ ವೈಖರಿ ಬಗ್ಗೆ ಪ್ರಶಂಸೆ ವ್ಯಕ್ತ ಪಡಿಸಿದರು. ಇದೇ ಸಂದರ್ಭದಲ್ಲಿ ದಶಮಾನೋತ್ಸವ ಕಾರ್ಯಕ್ರಮದ ಪ್ರಯುಕ್ತ ವಿವಿಧ ಕ್ಷೇತ್ರದಲ್ಲಿ ಸಾದನೆ ಗೈದ ಡಾ.ಹೆಚ್.ಎಸ್.ಸುಬ್ರಮಣ್ಯಂ ದಂಪತಿಗಳಿಗೆ,(ವೈದ್ಯಕೀಯ ಕ್ಷೇತ್ರ) ಆಶಾ ಪಬ್ಲಿಕ್ ಪ್ರಾಸಿಕ್ಯೂಟರ್ (ಕಾನೂನು ಕ್ಷೇತ್ರ), ಸಿ.ಕೆ.ಲಕ್ಷ್ಮಿನರಸಪ್ಪ (ಪತ್ರಿಕಾ ಕ್ಷೇತ್ರ) ಹಾಗೂ ಡಾ.ಎಂ.ಕೆ ನಾಗರಾಜರಾವ್, (ಯೋಗ ಮತ್ತು ವಾಸ್ತು ಕ್ಷೇತ್ರ) ಇವರುಗಳನ್ನು ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀಸಿರಿನಾಡು ಮಹಾಸಭಾ ಗೌರವಾಧ್ಯಕ್ಷರಾದ ಡಾ.ಹೆಚ್.ಎಸ್.ಸುಬ್ರಮಣ್ಯಂರವರು



ಮಾತನಾಡುತ್ತಾ ಸಿರಿನಾಡು ಮಹಾಸಭಾ ಪ್ರಾರಂಭದಿಂದಲೂ ಸಮಾಜಮುಖಿ ಹಾಗೂ ವಿಪ್ರರಿಗೆ ಸನ್ಮಾರ್ಗ ತೋರಿಸುವ ಕೆಲಸ ಮಾಡುತ್ತಿದೆ, ಎಂದು ಪ್ರಶಂಸಿಸಿದರು. 80 ವರ್ಷ ಪೂರ್ಣಗೊಳಿಸಿದ 75 ಸಿರಿನಾಡು ಬಾಂಧವರಿಗೆ ''ಸಹಸ್ರ ಚಂದ್ರ ದರ್ಶಕ'' ರೆಂದು ಗೌರವ ಸಮರ್ಪಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಶ್ರೀಸಿರಿನಾಡು ಮಹಾಸಭಾ ಅಧ್ಯಕ್ಷರಾದ ಎಸ್.ಸುದರ್ಶನ್‌ರವರು ಮಾತನಾಡುತ್ತಾ ಸಿರಿನಾಡು ಬಾಂಧವರು ಎಲ್ಲಾ ಕ್ಷೇತ್ರಗಳಲ್ಲೂ ತಮ್ಮನ್ನು ತಾವು ತೊಡಗಿಸಿಕೊಂಡು ಅಚ್ಚುಕಟ್ಟಾಗಿ ಕೆಲಸ ನಿರ್ವಹಿಸುತ್ತಿದ್ದಾರೆ ಇವರ ಸಮಾಜಮುಖಿ ಕೆಲಸ ಹಾಗೂ ಬಾಂಧವರೊಂದಿಗೆ ಹೊಂದಿರುವ ಅನುಬಂಧ ನಮ್ಮ ಪ್ರಗತಿಗೆ ಕಾರಣ ಎಂದು ಸಭೆಯಲ್ಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾದ ಅಧ್ಯಕ್ಷರಾದ ಎಚ್.ಎನ್ ಚಂದ್ರಶೇಖರ್, ಆರ್ಯನ್ ಹೈಸ್ಕೂಲ್ ಅಸೋಸಿಯೇಷನ್ ಕಾರ್ಯದರ್ಶಿಗಳಾದ ಆರ್.ಎನ್. ಸತ್ಯನಾರಾಯಣ, ಸಿರಿನಾಡು ಮಹಾಸಭಾ ತುಮಕೂರು ಜಿಲ್ಲಾ ಅಧ್ಯಕ್ಷರಾದ ಟಿ ಎಸ್ ಮಂಜುನಾಥ್ ಹಾಗೂ ಉಪಾಧ್ಯಕ್ಷರಾದ ಎ ಎಸ್ ರಾಜಾರಾವ್ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಸಮಾಜದ ವಿವಿಧ ಸಂಘ ಸಂಸ್ಥೆಗಳ ಮುಖಂಡರು ಹಾಗೂ ಸಹಸ್ರಾರು ಸಂಖ್ಯೆಯಲ್ಲಿ ವಿಪ್ರ ಬಾಂಧವರು ಭಾಗವಹಿಸಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಜಿ.ಎಸ್.ಶ್ರೀನಿವಾಸಮೂರ್ತಿ ಮತ್ತು ಶ್ರೀದೇವಿ ಅನಂತರಾಮು ರವರು ನಡೆಸಿಕೊಟ್ಟರು.

## ರಾಮಕೃಷ್ಣ ಸಂಗೀತ ಸೌರಭ

**ಬೆಂಗಳೂರು:** ಬಸವನಗುಡಿಯ ರಾಮಕೃಷ್ಣ ಮಠದ ವತಿಯಿಂದ ಮೂರು ದಿನಗಳ ಸಂಗೀತೋತ್ಸವ ''ಶ್ರೀ ರಾಮಕೃಷ್ಣ ಸಂಗೀತ ಸೌರಭ''ವನ್ನು ಇದೇ ಜುಲೈ 11 ರಿಂದ 13 ರವರೆಗೆ ಪ್ರತಿದಿನ ಸಂಜೆ 6 ರಿಂದ 8 ಗಂಟೆಯವರೆಗೆ ಮಠದ ಆವರಣದಲ್ಲಿರುವ ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ವಿವರ: ಶುಕ್ರವಾರ, ಜುಲೈ 11 ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ ಗಾಯನ: ಪಂಡಿತ್ ವೆಂಕಟೇಶ್ ಕುಮಾರತಬಲಾ: ಪಂಡಿತ್ ರಘುನಾಥ್ ನಾಕೋಡ್ಹಾರ್ಮೋನಿಯಮ್: ಪಂಡಿತ್ ವ್ಯಾಸಮೂರ್ತಿ ಕಟ್ಟಿ

ಶನಿವಾರ, ಜುಲೈ 12 ಕರ್ನಾಟಕ ವೀಣಾ ವಾದನ ವೀಣಾ: ವಿದ್ವಾನ್ ಡಿ. ಬಾಲಕೃಷ್ಣ, ಬಾನ್ಸುರಿ: ವಿದ್ವಾನ್ ವಿ. ವಂಶೀಧರ್ ಮೃದಂಗ: ವಿದ್ವಾನ್ ಬಿ. ಎಸ್. ಪ್ರಶಾಂತ್ ಘಟಂ: ವಿದ್ವಾನ್ ಶಮಿತ್ ಗೌಡ, ಭಾನುವಾರ, ಜುಲೈ 13ಕ್ಕೆ ಗಾಯನ ಮತ್ತು ವಾದ್ಯ ಕಛೇರಿ ಗಾಯನ: ಕುಮಾರ್ ಮೋದಕ್ ಮತ್ತು ವೃಂದ, ತಬಲಾ ಸೋಲೋ: ಕುಮಾರ್ ಪ್ರದ್ಯುಮ್ನ ಕರ್ಪೂರ್ ವೀಣಾ ವಾದನ: ಕುಮಾರ್ ಚಿನ್ಮಯ್ ಮತ್ತು ವೃಂದ, ಮೃದಂಗ: ವಿದ್ವಾನ್ ಸತ್ಯಕುಮಾರ್, ಕಾರ್ಯಕ್ರಮ ಸ್ಥಳ: ರಾಮಕೃಷ್ಣ ಮಠ, ಬುಲ್ ಟೆಂಪಲ್ ರಸ್ತೆ, ಬಸವನಗುಡಿ, ಬೆಂಗಳೂರು. ಪ್ರವೇಶ ಉಚಿತ ಇರಲಿದೆ. ಹೆಚ್ಚಿನ ಮಾಹಿತಿಗೆ ಸಂಪರ್ಕಿಸಿ: 26613429 / 26612710 ಸಂಪರ್ಕಿಸಬಹುದು.

## ಇಂದು ಕ್ಯಾನ್ಸರ್ ಚಿಕಿತ್ಸೆ ಲಭ್ಯ

**ತುಮಕೂರು:** ಬೆಂಗಳೂರಿನ ಎಂ.ಎಸ್.ರಾಮಯ್ಯ ಮೆಮೋರಿಯಲ್ ಆಸ್ಪತ್ರೆಯ ವತಿಯಿಂದ ಉಚಿತ ಕ್ಯಾನ್ಸರ್ ಓಪಿಡಿ ಚಿಕಿತ್ಸೆಯನ್ನು ಆಯೋಜಿಸಲಾಗಿದೆ. ಅನುಭವವುಳ್ಳ ಕ್ಯಾನ್ಸರ್ ವೈದ್ಯರಾದ ಡಾ.ನಿಖಿಲ್ ಗೌಡರವರು ಲಭ್ಯವಿರುತ್ತಾರೆ. ಶಿರಾರಸ್ತೆಯ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯಲ್ಲಿ ಜುಲೈ 7 ರಂದು (ಇಂದು) ಸೋಮವಾರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಹಾಗೂ ಆದರ್ಶ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಮಧ್ಯಾಹ್ನ 2 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಚಿಕಿತ್ಸೆಗೆ ಲಭ್ಯವಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಹಾಗೂ ನೋಂದಾಣೆಗಾಗಿ 6364344024 ಸಂಪರ್ಕಿಸಲಾಗಿದೆ. ರಕ್ತ ಸಂಬಂಧಿತ ಕಾಯಿಲೆಗಳಾದ ಪಾಲಿಸೈಥಿಮಿಯಾಸ್, ಕಡಿಮೆ ಅಥವಾ ಹೆಚ್ಚು ಪ್ಲೇಟ್‌ಲೆಟ್, ಬಿಳಿರಕ್ತಕಣ ಸೆಲ್‌ಗಳ ಸಂಖ್ಯೆ, ಲ್ಯೂಕೀಮಿಯಾ, ಲಿಂಫೋಮಾ, ಮಲ್ಟಿಪಲ್ ಮೈಲೋಮಾ, ರಕ್ತಸ್ರಾವ ಮತ್ತು ರಕ್ತ ಜಮಿಕೆಯ ಅಸ್ವಾಭಾವ್ಯತೆಗಳು, ಮೂಳೆಮಜ್ಜೆಯ ರೋಗಗಳು, ರಕ್ತದ ಕಣಗಳ ಉತ್ಪತ್ತಿ ಮತ್ತು ಕಾರ್ಯದಲ್ಲಿ ಅಸ್ವಾಭಾವ್ಯತೆಗಳು, ರೋಗನಿರೋಧಕ ಶಕ್ತಿಯ ಕೊರತೆ ಸಂಬಂಧಿತ ಕಾಯಿಲೆಗಳು ಚಿಕಿತ್ಸೆಗೆ ಲಭ್ಯವಿರುತ್ತಾರೆ. ಮಹಿಳೆಯರಲ್ಲಿ ಮತ್ತು ಗರ್ಭಾಧಾರಣೆಯಲ್ಲಿ ಕಾಣುವ ರಕ್ತಸಂಬಂಧಿ ಸಮಸ್ಯೆಗಳಾದ ಪುನರಾವೃತ ಗರ್ಭಪಾತ, ಡೀಪ್ ವೆನ್ ತ್ರಾಂಬೋಸಿಸ್ (ಡಿವಿಟಿ), ರಕ್ತಹೀನತೆ, ಥ್ರಾಂಬೋಸೈಟೋಪೀನಿಯಾ, ಮುಗ್ಧಾವಸ್ಥೆಯ (ಪ್ರೌಢಾವಸ್ಥೆ) ಸಮಯದ ಅಧಿಕ ರಕ್ತಸ್ರಾವ, ಎಪಿಎಲ್‌ಎ ಸಿಂಡ್ರೋಮ್, ರಕ್ತಹೀನತೆ, ರಕ್ತ ಹೊರಹಾಕುವ, ರೋಗನಿರೋಧಕ ಕೊರತೆ, ಇನ್ನೂ ಮುಂತಾದ ಕಾಯಿಲೆಗಳಿಗೆ ಸೂಕ್ತ ಚಿಕಿತ್ಸೆಗಳು ನೀಡಲಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಅಲ್ಪಸಂಖ್ಯಾತರ ನಿರ್ದೇಶನಾಲಯ ಮತ್ತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಪರಸ್ಪರ ಒಡಂಬಡಿಕೆಯೊಂದಿಗೆ ಬೆಂಗಳೂರಿನ ಹಜ್ ಭವನದಲ್ಲಿ ಪ್ರಾದೇಶಿಕ ಕೇಂದ್ರ ತೆರೆಯಲಾಗಿದ್ದು, ಬೆಂಗಳೂರು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ದೂರ ಶಿಕ್ಷಣದ ಮುಖಾಂತರ ಸ್ನಾತಕ ಪದವಿ/ಸ್ನಾತಕೋತ್ತರ ಪದವಿ, ಸರ್ಟಿಫಿಕೇಟ್ ಹಾಗೂ ಡಿಪ್ಲೋಮಾ ಶಿಕ್ಷಣ ಕ್ರಮಗಳಲ್ಲಿ ವ್ಯಾಸಂಗ ಮಾಡಬಯಸುವ ಅರ್ಹ ಅಲ್ಪಸಂಖ್ಯಾತರ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧರು, ಸಿಖ್ಖರು, ಪಾರ್ಸಿ) ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ನಿರ್ದೇಶನಾಲಯದ ಜಾಲತಾಣ https://dom.karnataka.gov.in ಅಥವಾ https://minority.ksouport.comಅಥವಾ ಖುದ್ದು ವಿಶ್ವವಿದ್ಯಾನಿಲಯದ ಮೈಸೂರು ಕೇಂದ್ರ ಕಚೇರಿಗೆ, ಹತ್ತಿರದ ಪ್ರಾದೇಶಿಕ ಕೇಂದ್ರಗಳಿಗೆ ಅಥವಾ ಹಜ್ ಭವನ, ಬೆಂಗಳೂರು ಇಲ್ಲಿಗೆ ಆಗಸ್ಟ್ 2 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ: 308, 2ನೇ ಮಹಡಿ, ಕಂದಾಯ ಭವನ, ಬೆಂಗಳೂರು ದಕ್ಷಿಣ ಜಿಲ್ಲೆ ಅಥವಾ ದೂ.ಸಂಖ್ಯೆ: 080-27271104, ಅಥವಾ ದೂ. ಸಂಖ್ಯೆ: 9900667916, 994536602, 9113512565, 9611418726, 9900506659 ನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಂಜನೇಯಸ್ವಾಮಿ ಜಾತ್ರಾ ಮಹೋತ್ಸವ

**ರಾಮನಗರ:** ಬೆಂಗಳೂರು ದಕ್ಷಿಣ ಜಿಲ್ಲೆಯ ಚನ್ನಪಟ್ಟಣ ತಾಲ್ಲೂಕಿನ ದೇವರಹೊಸಹಳ್ಳಿ ಗ್ರಾಮದ ಶ್ರೀ ಆಂಜನೇಯಸ್ವಾಮಿ (ಸಂಜೀವರಾಯಸ್ವಾಮಿ) ದೇವಾಲಯದ ಜಾತ್ರ ಕಾರ್ಯಕ್ರಮವು ಜು. 5 ರಿಂದ 9ರ ವರೆಗೆ ನಡೆಯಲಿದ್ದು, ಜು. 7 ರಂದು ಶ್ರೀ ಲಕ್ಷ್ಮೀ ವೆಂಕಟೇಶ್ವರಸ್ವಾಮಿ ಬ್ರಹ್ಮ ರಥೋತ್ಸವ ನಡೆಯಲಿದೆ. ಶ್ರೀ ಆಂಜನೇಯಸ್ವಾಮಿ (ಸಂಜೀವರಾಯಸ್ವಾಮಿ) ದೇವಸ್ಥಾನಕ್ಕೆ ಸರ್ಕಾರದಿಂದ ಯಾವುದೇ ಸೇವಾ ಸಮಿತಿ, ಅನ್ನದಾನ ಸಮಿತಿ, ಇತರೆ ಸಮಿತಿ/ಟ್ರಸ್ಟ್‌ಗಳು ರಚನೆಯಾಗಿರುವುದಿಲ್ಲ. ದೇವಸ್ಥಾನದ ಹೆಸರಿನಡಿಯಲ್ಲಿ ಜಾತ್ರಾ ಪ್ರಯುಕ್ತ ಸೇವೆ, ಉತ್ಸವಗಳ ಹೆಸರಿನಲ್ಲಿ ಸಾರ್ವಜನಿಕ ಭಕ್ತಾದಿಗಳಿಂದ ಖಾಸಗಿ ವ್ಯಕ್ತಿಗಳು ಹಣ, ಕಾಣಿಕೆ, ದೇಣಿಗೆ, ಆಭರಣ, ಇನ್ನಿತರೆ ವಸೂಲಿ ಮಾಡುವುದು ಅಕ್ಷಮ್ಯ ಅಪರಾಧವಾಗಿದೆ. ಹರಕೆ, ಹಣ, ದೇಣಿಗೆ, ಆಭರಣ, ಕಾಣಿಕೆಗಳನ್ನು ಸಲ್ಲಿಸುವ ಸಾರ್ವಜನಿಕ ಭಕ್ತಾದಿಗಳು, ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಗಳ ಬಳಿ ನೀಡಿ ಸರ್ಕಾರದ ಅಧಿಕೃತ ರಶೀದಿ ಪಡೆದು ಸೇವೆಯಲ್ಲಿ ಪಾಲ್ಗೊಳ್ಳಬೇಕು. ಖಾಸಗಿ ವ್ಯಕ್ತಿಗಳಾಗಲಿ, ಸೇವಾಸಮಿತಿ, ಸಂಘಸಂಸ್ಥೆ, ಶ್ರೀ ಆಂಜನೇಯಸ್ವಾಮಿ (ಸಂಜೀವರಾಯಸ್ವಾಮಿ) ದೇವಸ್ಥಾನದ ಹೆಸರನ್ನು ಅನುಕರಣೆ ಮಾಡಿ ಹಣ, ಆಭರಣ, ವಸೂಲಿ ಮಾಡುವ ಪ್ರಕರಣಗಳು ಕಂಡುಬಂದಲ್ಲಿ ಅಂತಹವರ ವಿರುದ್ಧ ಕಾನೂನು ರೀತ್ಯಾ ಕ್ರಮ ಜರುಗಿಸಲು ಸ್ಥಳೀಯ ಪೊಲೀಸ್ ಠಾಣಾಧಿಕಾರಿಗಳಿಗೆ ಲಿಖಿತ ದೂರು ಸಲ್ಲಿಸಬಹುದು ಎಂದು ಚನ್ನಪಟ್ಟಣ ತಾಲ್ಲೂಕಿನ ದೇವರಹೊಸಹಳ್ಳಿಯ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಗಳು (ಪ್ರಭಾರ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 7ರಂದು ನಗರದಲ್ಲಿ ಶ್ಯಾಮ್ ಪ್ರಸಾದ್ ಮುಖರ್ಜಿ ಅವರ 124ನೇ ಜನ್ಮ ದಿನಾಚರಣೆ

**ಚಾಮರಾಜನಗರ:** ಭಾರತ ಸರ್ಕಾರದ ಯುವ ಕಾರ್ಯ ಹಾಗೂ ಕ್ರೀಡಾ ಸಚಿವಾಲಯ, ನಗರದ ಮೇರಾ ಯುವ ಭಾರತ್ ಮತ್ತು ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಸಂಯುಕ್ತಾಶ್ರಯದಲ್ಲಿ ಶ್ಯಾಮ್ ಪ್ರಸಾದ್ ಮುಖರ್ಜಿ ಅವರ 124ನೇ ಜನ್ಮ ದಿನಾಚರಣೆಯನ್ನು ಜುಲೈ 7ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಚನ್ನೀಪುರದಮೋಳೆಯ ಸೇವಾ ಭಾರತಿ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ. ನಗರಸಭೆ ಉಪಾಧ್ಯಕ್ಷರಾದ ಹೆಚ್.ಎಸ್. ಮಮತಾ ಬಾಲಸುಬ್ರಮಣ್ಯ ಅವರು ಕಾರ್ಯಕ್ರಮ ಉದ್ಘಾಟಿಸುವರು. ಸೇವಾ ಭಾರತಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವಾಸುದೇವ್ ರಾವ್ ಅಧ್ಯಕ್ಷತೆ ವಹಿಸುವರು. ಸೇವಾ ಭಾರತಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಪಿ.ಬಿ. ಲೋಕೇಶ್ ಅವರು ಮುಖ್ಯಭಾಷಣ ಮಾಡುವರು. ಮೇರಾ ಯುವ ಭಾರತ್‌ನ ಜಿಲ್ಲಾ ಯುವಜನ ಅಧಿಕಾರಿಗಳಾದ ಅಭಿಷೇಕ್ ಚವರೆ, ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಅಧ್ಯಕ್ಷರಾದ ಜಿ. ಬಂಗಾರು ಅವರು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

## 9ರಂದು ನೇರ ಸಂದರ್ಶನ

**ರಾಮನಗರ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜು. 9ರ ಬುಧವಾರ ಉಚಿತ ನೇರ ಸಂದರ್ಶನ ಆಯೋಜಿಸಲಾಗಿದೆ. ನೇರ ಸಂದರ್ಶನದಲ್ಲಿ ಖಾಸಗಿ ಸಂಸ್ಥೆಯವರು ಭಾಗವಹಿಸುತ್ತಿದ್ದು, ಉದ್ಯೋಗಾಂಕ್ಷಿಗಳನ್ನು ನೇಮಕ ಮಾಡಿಕೊಳ್ಳಲಿರುವುದರಿಂದ ಖಾಸಗಿ ವಲಯದಲ್ಲಿನ ಉದ್ಯೋಗಕ್ಕೆ ಆಸಕ್ತರಿರುವ ಎಸ್‌ಎಸ್‌ಎಲ್‌ಸಿ, ಪಿಯುಸಿ ಅಥವಾ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆ/ರೆಸ್ಯೂಮ್ (ಬಯೋಡೇಟಾ), ಇತ್ಯಾದಿ ದಾಖಲೆಗಳೊಂದಿಗೆ ಜು. 7ರ ಬುಧವಾರ ಬೆಳಿಗ್ಗೆ 10.30ಕ್ಕೆ ಮೆಡ್‌ಪ್ಲಸ್, ರಾಮನಗರ ರಸ್ತೆ, ಕನಕಪುರ-562117 ಕಚೇರಿಗೆ ಭೇಟಿ ನೀಡಬಹುದಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ: 6302428675 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೌಕರರ ಕೈಕಾಲುಗಳ ಸುರಕ್ಷತೆಗೆ ನಗರಸಭೆ ಗಮನ ಹರಿಸಲಿ

**ಚಿತ್ರದುರ್ಗ:** ನಗರಸಭೆಯ ನೌಕರರು ದಿನ ನಿತ್ಯ ಚರಂಡಿ ಪಕ್ಕದಲ್ಲಿ, ಹಠಾತ್ ಆಗಿ ಗಿಡದ ಮುಳ್ಳುಗಳು, ಗ್ಲಾಸ್ ತುಂಡುಗಳು, ಕಬ್ಬಿಣದ ಮೊನಚಾದ ವಸ್ತುಗಳು, ಕೆಲವೊಂದಿಷ್ಟು ಕೀಟ ಜನ್ಯಗಳು, ವಿಷಕಾರಿ ಹಾವುಗಳು ಕೈಕಾಲುಗಳನ್ನು ಕಚ್ಚುವುದರಿಂದ, ನಗರಸಭೆಯ ನೌಕರರು ಬಹಳ ಎಚ್ಚರಿಕೆಯಿಂದ, ಕಳೆ ಕೀಳುವ ಕೆಲಸವನ್ನ, ಚರಂಡಿ ಪಕ್ಕ ಹುಲ್ಲು ಕೀಳುವ ಕೆಲಸವನ್ನ ಮುಂಜಾಗ್ರತೆ ವಹಿಸಿ ಕಾರ್ಯನಿರ್ವಹಿಸಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕರೆ ನೀಡಿದ್ದಾರೆ.

ಅವರು ಟೀಚರ್ಸ್ ಕಾಲೋನಿಯಲ್ಲಿ ಚರಂಡಿ ಪಕ್ಕ ಇರುವ ಕಸ ಕಡ್ಡಿಗಳನ್ನ, ಹುಲ್ಲನ್ನು ಕತ್ತರಿಸಿ ತೆಗೆಯುವಾಗ, ಪುರಸಭೆ ಮಹಿಳಾ ನೌಕರರ ಕೈಗೆ ಮುಳ್ಳು ಚುಚ್ಚಿ, ಅದು ಅಲರ್ಜಿಯಾಗಿ, ಗಂಟಿನ ರೂಪದಲ್ಲಿ ಉದಿಕೊಂಡಿದ್ದು, ಅದರ ನಿವಾರಣೆಗಾಗಿ ವೈದ್ಯಕೀಯ ಚಿಕಿತ್ಸೆ ಪಡೆಯಲು ಜಾಗೃತಿ ಮೂಡಿಸುತ್ತಿದ್ದರು.

ಕೆಲಸ ಮಾಡುವ ಸಂದರ್ಭದಲ್ಲಿ ಪುರಸಭಾ ನೌಕರರು ಕೈಗಳಿಗೆ, ಗ್ಲೌಸ್ ಗಳನ್ನ, ಕವಚಗಳನ್ನ, ಕಾಲಿಗೆ ಶೂಗಳನ್ನ ಧರಿಸಿ, ಮುಂಜಾಗ್ರತ ಕ್ರಮಗಳನ್ನು ವಹಿಸಿ, ಕೆಲಸ ಮಾಡಬೇಕು, ಇಲ್ಲದಿದ್ದರೆ ತಮ್ಮ ಕೈಕಾಲುಗಳಿಗೆ ಆಗುವ ಅಪಘಾತಗಳನ್ನ ತಪ್ಪಿಸಿಕೊಳ್ಳಲು ಸಾಧ್ಯವಾಗುವುದಿಲ್ಲ, ಅಪಘಾತಗಳಾದಾಗ ಸೂಕ್ತವಾಗಿ ಚಿಕಿತ್ಸೆ ಪಡೆದು ಆರೋಗ್ಯ ರಕ್ಷಣೆ ಬಗ್ಗೆಯೂ ಸಹ ಗಮನಹರಿಸಬೇಕು ಎಂದರು.

ಬಹಳಷ್ಟು ಮಹಿಳಾ ನೌಕರರು, ಗಂಡಸರು ಕತ್ತರಿಸಿ ಹಾಕಿದ ಹುಲ್ಲುಗಳನ್ನ, ಗಿಡ ಗಂಟೆಗಳನ್ನ, ಬರಿ ಕೈಗಳಿಂದ ತೆಗೆದುಹಾಕುವ ಕೆಲಸ ನಿರ್ವಹಿಸುತ್ತಿರುವಾಗ, ಕೆಲವೊಂದಿಷ್ಟು ವಿಷಕಾರಿ ಮುಳ್ಳುಗಳು, ಕೈಕಾಲುಗಳಿಗೆ ಚುಚ್ಚಿ, ಅವು ಬಹಳ ದಿವಸ ನೋವನ್ನು ಉಂಟು ಮಾಡಿ, ಚುಚ್ಚಿದ ಜಾಗದಲ್ಲಿ ಗೆಡ್ಡೆ ತರ ಚರ್ಮವನ್ನ ಗಂಟು ಮಾಡಿ, ಮುಂದೆ ಅದು ಶಸ್ತ್ರಚಿಕಿತ್ಸೆ ಮಾಡಿ ತೆಗೆಯುವವರೆಗೂ ಕಾಟ ಕೊಡುತ್ತಿರುತ್ತದೆ, ಹಾಗಾಗಿ ನೌಕರರು ಬಹಳ ಎಚ್ಚರಿಕೆಯಿಂದ ಕೆಲಸ ಮಾಡಬೇಕು, ಅವರ ಆರೋಗ್ಯದ ಬಗ್ಗೆ, ಸುರಕ್ಷತೆಯ ಬಗ್ಗೆ ನಗರಸಭೆ ಅಧಿಕಾರಿಗಳು ಅವರಿಗೆ ತರಬೇತಿಯನ್ನ ನೀಡಿ, ಸುರಕ್ಷಾ ಸಾಮಗ್ರಿಗಳನ್ನ ನೀಡಿ, ಕೆಲಸದಲ್ಲಿ ತೊಡಗಿಸಿಕೊಳ್ಳಬೇಕು ಎಂದು ವಿನಂತಿಸಿಕೊಂಡಿದ್ದಾರೆ.



ಬಹಳಷ್ಟು ನೌಕರರು ಗಿಡಗಂಟಿಗಳಲ್ಲಿ ಕೆಲಸ ಮಾಡುವರು, ರೈತರು, ತಮಗೆ ಗೊತ್ತಿಲ್ಲದಂಗೆ, ವಿಷಜಂತುಗಳನ್ನ, ಹಾವುಗಳನ್ನ ತುಳಿದು, ಕಚ್ಚಿಸಿಕೊಂಡು ಮೃತಪಟ್ಟಿರುವ ಬಹಳಷ್ಟು ಉದಾಹರಣೆಗಳು ನಮ್ಮ ದೇಶದಲ್ಲಿ ದೊರೆಯುತ್ತವೆ, ಹಾಗಾಗಿ ರೈತರಿಗೆ ಮತ್ತು ಗಿಡಗಳಲ್ಲಿ ಕೆಲಸ ಮಾಡುವಂತಹ ನೌಕರರಿಗೆ ಒಳ್ಳೆಯ ಗುಣಮಟ್ಟದ ಶೂಗಳನ್ನ ಧರಿಸಲು ಜಾಗೃತಿ ಮೂಡಿಸಬೇಕು ಎಂದರು.

ಯಾವುದಾದರೂ ದಟ್ಟವಾಗಿ ಬೆಳೆದ, ಕಳೆಯ ಮಧ್ಯೆ ಕೈ ಹಾಕುವಾಗ ಹಾವುಗಳು ಇರುತ್ತವೆ ಎಂಬುದರ ಬಗ್ಗೆ ಗಮನ ಹರಿಸಬೇಕು, ಹುಲ್ಲು ಕತ್ತರಿಸುವ ಯಂತ್ರಕ್ಕೆ ಹಾವುಗಳು ಸಹ ತುಂಡಾಗಿ ಬೀಳುವುದನ್ನ ನಾವು ದಿನನಿತ್ಯ ಉದಾಹರಣೆ ಸಮೇತ ನೋಡಬಹುದಾಗಿದೆ, ಹಾಗಾಗಿ ಪ್ರತಿಯೊಬ್ಬ ನೌಕರರ ಜೀವನ ಬಗ್ಗೆ ಗಮನ ಹರಿಸಬೇಕಾದ್ದು ಅಧಿಕಾರಿಗಳ ಕರ್ತವ್ಯವಾಗಿದೆ, ಹಾಗಾಗಿ ಕೆಲಸ ಮಾಡುವುದರ ಜೊತೆಗೆ ನೌಕರರ ಸುರಕ್ಷತೆಯ ಬಗ್ಗೆಯೂ ಸಹ ಅಧಿಕಾರಿಗಳು ಗಮನ ಹರಿಸಿ ಅವರಿಗೆ ಬೇಕಾದಂತಹ ಸೌಲಭ್ಯಗಳನ್ನ ಒದಗಿಸಿ ಕೊಡಬೇಕೆಂದು ವಿನಂತಿಸಿಕೊಂಡಿದ್ದಾರೆ.

ಕೆಲಸ ಮಾಡುವ ರಭಸದಲ್ಲಿ, ಉಮ್ಮಸ್ಸಿನಲ್ಲಿ ಕೆಲವೊಂದು ಆಳವಾದ ಚರಂಡಿಯ ಕೆಳಗಿಂದ ಕಸ ತೆಗೆಯುವುದು, ಅಲ್ಲಿ ಬಿಸಾಡಿದಂತ ಗಾಜಿನ ತುಂಡುಗಳನ್ನ ತೆಗೆದುಹಾಕುವುದು, ಕಬ್ಬಿಣದ ಸಲಾಕೆಗಳಿಂದ ಚುಚ್ಚಿಸಿಕೊಳ್ಳುವುದು, ಮುಳ್ಳುಗಳನ್ನ ತುಳಿದು ಕಾಲುಗಳಲ್ಲಿ ಗಂಟು ಮಾಡಿಕೊಳ್ಳುವುದು, ರಕ್ತಸ್ರಾವವಾಗುವುದು ಹಾಗೂ ಕೆಲವೊಮ್ಮೆ ಬಿದ್ದಿರುವ ವಿದ್ಯುತ್ ತಂತಿಗಳಿಂದ ಸ್ಪರ್ಶವಾಗಿ ಮರಣ ಹೊಂದುವುದು, ಎಲ್ಲವನ್ನು ಸಹ ನಾವು ನೌಕರರಿಗೆ ಪ್ರತಿನಿತ್ಯ ತಿಳಿಸಿ ಹೇಳಿ ಅವರನ್ನ ಜಾಗೃತವಾಗಿ ಕೆಲಸಕ್ಕೆ ಕಳಿಸಬೇಕು ಎಂದರು.

ಕೆಲವೊಂದಿಷ್ಟು ಕಲಾವಿದರುಗಳು, ಸೊಪ್ಪಿನ ಗಿಡದ ಮುಳ್ಳಿನಿಂದ ಚುಚ್ಚಿಸಿಕೊಂಡು, ಅವುಗಳಿಗೆ ಯಾವುದೇ ಚಿಕಿತ್ಸೆಯನ್ನು ಪಡೆಯದೆ, ಬಹಳ ದಿಸ ಹಾಗೆ ಬಿಟ್ಟಾಗ, ಅವು ದೇಹದಲ್ಲಿ ಅಲರ್ಜಿ ಉಂಟು ಮಾಡಿ, ವಿಷಕಾರಿಯಾಗಿ, ದೊಡ್ಡ ಪ್ರಮಾಣದಲ್ಲಿ ಬೆಳೆದಾಗ, ಕೈಕಾಲುಗಳನ್ನ ಕತ್ತರಿಸಿದ ಉದಾರಣೆಗಳು ಸಹ ನಮಗೆ ದೊರೆಯುತ್ತವೆ. ಹಾಗಾಗಿ ಸಣ್ಣ ಮಟ್ಟದಲ್ಲಿ ಯಾವುದಾದರೂ ವಿಷದ ಮುಳ್ಳುಗಳು ಚುಚ್ಚಿದಾಗ, ತಕ್ಷಣ ಅವರು ಚಿಕಿತ್ಸೆ ಪಡೆಯಬೇಕು, ದೇಹದಲ್ಲಿ ಹೊಕ್ಕಿರುವ ಆ ಮುಳ್ಳುಗಳನ್ನ ತೆಗೆಸಿ, ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ಶಾಕರಿಂದ ಗುದ್ದಲಿ ಪೂಜೆ

**ಮಂಡ್ಯ:** ನಗರದ ಪೊಲೀಸ್ ಕಾಲೋನಿಯ 9ನೇ ವಾರ್ಡಿನಲ್ಲಿ ಅಂಗನವಾಡಿ ಕಟ್ಟಡಕ್ಕೆ ಶಾಸಕ ಪಿ.ರವಿಕುಮಾರ್ಗೌಡ ಅವರು ಗುದ್ದಲಿ ಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಅವರು, 20 ಲಕ್ಷ ವೆಚ್ಚದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದ್ದೇನೆ. ನಾನು ಸಹ 25 ಕೋಟಿ ರೂಪಾಯಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾಡಿದ್ದೇವೆ, ನೀವು ಸಂಸದರಾಗಿ ಲಕ್ಷಲಕ್ಷ ಲೀಡ್ ತೆಗೆದುಕೊಂಡಿದ್ದೀರಲ್ಲ ನೀವು ಕೂಡ ಕೆಲಸ ಮಾಡಿ ಯಾರು ಬೇಡ ಎಂದವರು ಎಂದು ಹರಿಯಾಯ್ದರು.

ಮೈಷುಗರ್ ಶಾಲೆ ಕಟ್ಟಡವನ್ನೂ ಅಭಿವೃದ್ಧಿ ಪಡಿಸೋಣ, ನಾನು ಸಹ ಅಭಿವೃದ್ಧಿಗೆ ಕೈ ಜೋಡಿಸುತ್ತೇನೆ, ಶಾಲೆ ಉಳಿವಿಗೆ ಎಚ್.ಡಿ.ಕುಮಾರಸ್ವಾಮಿ, ಡಿ.ಕೆ.ಶಿವಕುಮಾರ್ ಹಾಗೂ ಸಿದ್ದರಾಮಯ್ಯ ಅವರು ಸಹ ಶಾಲೆ ಉಳಿಸಿಕೊಳ್ಳಲು ಸಹಕರಿಸಲಿ ಎಂದು ತಿಳಿಸಿದರು.

ಲಾಟರಿ ಗೀಟರಿ ನಮಗೆ ಬೇಕಾಗಿಲ್ಲ, ಅಭಿವೃದ್ಧಿಯಷ್ಟೇ ಬೇಕು. ನಿಖಿಲ್ ಹುಡುಗರು ಮಾತನಾಡುವಾಗ ಪ್ರಜ್ಞೆ ಇಟ್ಟುಕೊಂಡು ಮಾತನಾಡಲಿ, ನಾನು ಎರಡು ಸಾರಿ ಲಾಟರಿ ತೆಗೆದುಕೊಂಡೆ ಈಗ ಬಂಪರ್ ಹಾಗಿ ಹೊಡೆದಿದೆ, ನಿಮ್ಮ ನಿಖಿಲ್ ಮೂರು ಬಾರಿ ಲಾಟರಿ ತೆಗೆದುಕೊಂಡರು ಯಾಕೆ ಬಂಬರ್ ಲಾಟ್ರಿ ಒಡೆಯಲಿಲ್ಲ, ಇಷ್ಟೆಲ್ಲಾ ಮಾತನಾಡುವ ಅವಶ್ಯಕತೆ ಇದಿಯಾ, ನನಗೇನೇ ಇದ್ದರೂ ಅಭಿವೃದ್ಧಿಯೊಂದೇ ಮಂತ್ರ ನೀವು ಮಾಡಿ ನಾವು ಮಾಡೋಣ ಎಂದು ಸಲಹೆ ನೀಡಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗಂಗಾಧರಸ್ವಾಮಿ, ಡಿವೈಎಸ್ಪಿಗಳಾದ ರಾಚಯ್ಯ, ಲಕ್ಷ್ಮೀನಾರಯಣಪ್ರಸಾದ್, ನಗರಸಭೆ ಸದಸ್ಯರಾದ ಗೀತಾ ಕುಮಾರಸ್ವಾಮಿ, ಎಚ್.ಎಸ್.ಮಂಜು, ಶ್ರೀಧರ್, ಶಿವಪ್ರಕಾಶ್, ಜಾಕೀರ್ ಫಾಷ, ಮುಡಾ ಅಧ್ಯಕ್ಷ ನಯೀಮ್, ಮುಖಂಡರಾದ ಹಾಲಹಳ್ಳಿ ರುದ್ರಪ್ಪ, ಅಭಿಲಾಷ್ ಭಾಗವಹಿಸಿದ್ದರು.



# ಸಂಜೆ ಟಿಪ್ಸ್

## ಕೋಲ್ ಇಂಡಿಯಾ, ಸಿಂಗರೇನಿ ಕೊಲಿಯರೀಸ್ ಕಂಪನಿ ಲಿಮಿಟೆಡ್ ಮತ್ತು ಹರ್ಟ್‌ಫುಲ್‌ನೆಸ್ ಒಪ್ಪಂದಕ್ಕೆ

ಕೋಲ್ ಇಂಡಿಯಾ ಲಿಮಿಟೆಡ್, ದಿ ಸಿಂಗರೇನಿ ಕೊಲಿಯರೀಸ್ ಕಂಪನಿ ಲಿಮಿಟೆಡ್ (ಎಸ್ಸಿಸಿಎಲ್) ಹರ್ಟ್‌ಫುಲ್‌ನೆಸ್ ಜೊತೆ ಕೈಜೋಡಿಸಿದೆ. (ಗೌರವಾನ್ವಿತ ದಾಜಿ- ಹರ್ಟ್‌ಫುಲ್‌ನೆಸ್ ಮಾರ್ಗದರ್ಶಿಗಳು ಮತ್ತು ರಾಮಚಂದ್ರ ಮಿಷನ್ನ ಅಧ್ಯಕ್ಷರು ನೇತೃತ್ವದಲ್ಲಿ) ಕಲ್ಲಿದ್ದಲು ಮತ್ತು ಗಣಿ ಸಚಿವಾಲಯ (ರ್‍ಕಾರ) ಘೋಷಿಸಿದಂತೆ ಕ್ರಮವಾಗಿ ಎರಡು ತಿಳಿವಳಿಕೆ ಒಪ್ಪಂದಗಳಿಗೆ ಸಹಿ ಹಾಕುವ ಮೂಲಕ ಭಾರತದ ಶ್ರೀ ಜಿ. ಕಿಶನ್ ರೆಡ್ಡಿ-ಗೌರವಾನ್ವಿತ ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ, ಭಾರತ ರ್‍ಕಾರ. ಹೈದರಾಬಾದ್ನ ಹೊರವಲಯದಲ್ಲಿರುವ ಹರ್ಟ್‌ಫುಲ್‌ನೆಸ್‌ನ ಪ್ರಧಾನ ಕಛೇರಿಯಾದ ಕಾನ್ಹಾ ಶಾಂತಿ ವನಂನಲ್ಲಿ ಇಂದು ನಡೆದ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕುವ ಕರ್‍ಯಕ್ರಮದಲ್ಲಿ ಭಾರತ ಸರಕಾರವು ಭಾಗವಹಿಸಿತು. ಕೇಂದ್ರ ರ್‍ಕಾರದ ಕಲ್ಲಿದ್ದಲು ಮತ್ತು ಗಣಿ ಖಾತೆ ರಾಜ್ಯ ಸಚಿವರಾದ ಶ್ರೀ ಸತೀಶ್ ಚಂದ್ರ ದುಬೆ ಅವರು ಕೇಂದ್ರ ಸಚಿವರೊಂದಿಗೆ ಸೇರಿಕೊಂಡರು. ಭಾರತದ, ಕೋಲ್ ಇಂಡಿಯಾ ಲಿಮಿಟೆಡ್, ಎಸ್ಸಿಸಿಎಲ್ ಮತ್ತು ಹರ್ಟ್‌ಫುಲ್‌ನೆಸ್‌ನ ಹಿರಿಯ ವ್ಯವಸ್ಥಾಪಕರು ಮತ್ತು ಪ್ರತಿನಿಧಿಗಳು. ಈ ತಿಳಿವಳಿಕೆ ಒಪ್ಪಂದಗಳ ಉದ್ದೇಶವು ಪುನಃಸ್ಥಾಪನೆಯನ್ನು ಉತ್ತೇಜಿಸುವುದು, ಹಸಿರು ಹೊದಿಕೆಯನ್ನು ತರುವುದು ಮತ್ತು ಗಣಿ ಮುಚ್ಚುವ ಸ್ಥಳಗಳಲ್ಲಿ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವುದು ಹರ್ಟ್‌ಫುಲ್‌ನೆಸ್ ಇನ್ಸ್ಟಿಟ್ಯೂಟ್ ಸಂಪನ್ಮೂಲಗಳ ಮೂಲಕ ರಿಕ್ಲೈಮ್ ಉಪಕ್ರಮದೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವುದು. ರಿಕ್ಲೈಮ್ ಉಪಕ್ರಮವು ಒಂದು ಸಂಕ್ಷಿಪ್ತ ರೂಪವಾಗಿದೆ. ಇದರಲ್ಲಿ 1. ನೆರವಾಗುವುದು 2. ಕಲ್ಪನೆ 3.ಸಂಯುಕ್ತ ಮಾದರಿ 4. ಸ್ಥಳೀಕರಣ 5. ಕ್ರಮ 6. ಒಗ್ಗೂಡಿಸುವುದು 7. ಗಣಿ ಮುಚ್ಚುವಿಕೆ ಮತ್ತು ಮರುಹಂಚಿಕೆಗಾಗಿ ಸಮುದಾಯ ತೊಡಗಿಸಿಕೊಳ್ಳುವಿಕೆ ಮತ್ತು ಅಭಿವೃದ್ಧಿ ಚೌಕಟ್ಟಿನಲ್ಲಿ ನಿರ್ವಹಣೆ ಉದ್ದೇಶಿಸಲಾಗಿದೆ. ಇದು ಕ್ಷೇತ್ರದಲ್ಲಿನ ಅನುಭವ ಮತ್ತು ಐಸಿಎಂಎಂ (2022) ಸುಸ್ಥಿರ ಅಭಿವೃದ್ಧಿ ಗುರಿಗಳು ಮತ್ತು ಐಎಫ್ಸಿ ಕರ್‍ಯಕ್ಷಮತೆ ಮಾನದಂಡಗಳ ಮಾರ್ಗದರ್ಶನ ಸೇರಿದಂತೆ ಜಾಗತಿಕ ಉತ್ತಮ ಅಭ್ಯಾಸಗಳನ್ನು ಆಧರಿಸಿದೆ. ಹರ್ಟ್‌ಫುಲ್‌ನೆಸ್ ಇನ್ಸ್ಟಿಟ್ಯೂಟ್ ಮುಚ್ಚಿದ ಗಣಿಗಳ ಮೇಲೆ ಕರ್‍ಯಸಾಧ್ಯವಾದ ಹಸಿರು ಹೊದಿಕೆಯನ್ನು ರಚಿಸಲು, ಅಪಾಯಕಾರಿ ಅನಿಲಗಳನ್ನು ನಿಯಂತ್ರಿಸಲು ಮತ್ತು ಪ್ರತ್ಯೇಕಿಸಲು, ಮಣ್ಣಿನ ಪದರಗಳನ್ನು ಪುನಃ ತುಂಬಿಸಲು ಮತ್ತು ಗಣಿ ಮುಚ್ಚುವ ಸ್ಥಳಗಳಲ್ಲಿ ಸುಸ್ಥಿರ ಪರಿಸರ ವ್ಯವಸ್ಥೆಯನ್ನು ರಚಿಸಲು ಅಗತ್ಯವಾದ ತಂತ್ರಜ್ಞಾನ ಮತ್ತು ಸಂಪನ್ಮೂಲಗಳನ್ನು ಒದಗಿಸುತ್ತದೆ.

## ಮೂಲಂಗಿ ಪಾಲಾಕ್ ಪಲ್ಯ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಮೂಲಂಗಿ 2(ಕತ್ತರಿಸಿದ್ದು) ಪಾಲಾಕ್ ಸೊಪ್ಪು 2 ಕಟ್ ಬೆಳ್ಳುಳ್ಳಿ 3-4 ಎಸಳು ಈರುಳ್ಳಿ 1 ಜೀರಿಗೆ 1 ಚಮಚ ಅರಿಶಿಣ ಪುಡಿ ಅರ್ಧ ಚಮಚ ಖಾರದ ಪುಡಿ 1 ಚಮಚ ಚಿಟಿಕೆಯಷ್ಟು ಇಂಗು ಒಣ ಮಾವಿನ ಪುಡಿ 1 ಚಮಚ ಎಣ್ಣೆ

### ಮಾಡುವ ವಿಧಾನ

ಪಾಲಾಕ್ ಸೊಪ್ಪನ್ನು ಚೆನ್ನಾಗಿ ತೊಳೆದು ಸ್ವಚ್ಛ ಮಾಡಿ, ಮೂಲಂಗಿಯನ್ನು ಕತ್ತರಿಸಿ ಕೂಡ ಸ್ವಚ್ಛ ಮಾಡಿ. 10 ನಿಮಿಷದಲ್ಲಿ ಮಾಡಿ ಈ ತಾಳಿಪಟ್ಟು..! ಈ ರುಚಿ ಖಾದ್ಯ ಮತ್ತೊಂದಿಲ್ಲಾ! ಪಾತ್ರೆಯಲ್ಲಿ ಎಣ್ಣೆ ಹಾಕಿ ಅದರಲ್ಲಿ ಸಾಸಿವೆ, ಜೀರಿಗೆ ಹಾಕಿ ಅದು ಚಟಾಪಟಾ ಶಬ್ದ ಮಾಡುವಾಗ ಕತ್ತರಿಸಿದ ಈರುಳ್ಳಿ ಮತ್ತು ಬೆಳ್ಳುಳ್ಳಿ ಹಾಕಿ ಕಂದು ಬಣ್ಣ ಬರುವವರೆಗೆ ಹುರಿಯಿರಿ. ನಂತರ ಇಂಗು ಹಾಕಿ ಅರಿಶಿಣ ಪುಡಿ ಮತ್ತು ಖಾರದ ಪುಡಿ, ಒಣ ಮಾವಿನ ಪುಡಿ ಹಾಕಿ ಮಿಕ್ಸ್ ಮಾಡಿ. ಈಗ ಕತ್ತರಿಸಿದ ಮೂಲಂಗಿ ಹಾಕಿ 5 ನಿಮಿಷ ಫ್ರೈ ಮಾಡಿ, ನಂತರ ಪಾಲಾಕ್ ಸೊಪ್ಪು ಹಾಕಿ ರುಚಿಗೆ ತಕ್ಕ ಉಪ್ಪು ಹಾಕಿ ಪಾತ್ರೆಯ ಬಾಯಿ ಮುಚ್ಚಿ ಬೇಯಿಸಿ, ಹೀಗೆ ಬೇಯಿಸುವಾಗ ಆಗಾಗ ಸೌಟ್ ನಿಂದ ಆಡಿಸುತ್ತಾ ಇರಿ. ಇಷ್ಟು ಮಾಡಿದರೆ ಮೂಲಂಗಿ ಪಾಲಾಕ್ ಸೊಪ್ಪಿನ ಪಲ್ಯ ರೆಡಿ.

## ನಟಿ ಸಮಂತಾ ಕಣ್ಣೀರಿಟ್ಟ ವಿಡಿಯೋ ವೈರಲ್



ನಟಿ ಸಮಂತಾ ಅಮೆರಿಕದಲ್ಲಿ ಮೂರು ದಿನಗಳ ಕಾಲ ನಡೆಯುವ ತೆಲುಗು ಅಸೋಸಿಯೇಷನ್ ಆಫ್ ನಾರ್ತ್ ಅಮೇರಿಕ 2025 ರ ಆಚರಣೆಯಲ್ಲಿ ಭಾಗವಹಿಸಿದ್ದರು. ಅಲ್ಲಿ ವೇದಿಕೆಯಲ್ಲಿ ಮಾತನಾಡುವಾಗ ಸಮಂತಾ ಇದ್ದಕ್ಕಿದ್ದಂತೆ ಭಾವುಕರಾದರು. ಜನರ ಎದುರಲ್ಲೇ ಬಿಕ್ಕಿ ಬಿಕ್ಕಿ ಅಳುತ್ತ ಕಣ್ಣೀರು ಹಾಕಿದರು. ಇದರ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ.

ತೆಲುಗು ಅಸೋಸಿಯೇಷನ್ ಆಫ್ ನಾರ್ತ್ ಅಮೇರಿಕ 2025 ರ ವೇದಿಕೆಯಲ್ಲಿ ಸಮಂತಾ ಅವರು ಆಡಿದ ಮಾತುಗಳು ಸಖತ್ ವೈರಲ್ ಆಗಿವೆ. ಈ ವೇದಿಕೆಯಲ್ಲಿ ನಿಲ್ಲುವ ಅವಕಾಶ ಸಿಕ್ಕಿದ್ದು ನನ್ನ ಜೀವನದಲ್ಲಿ ಒಂದು ದೊಡ್ಡ ಸಂತೋಷದ ಸಮಯ ಎಂದು ನಾನು ಭಾವಿಸುತ್ತೇನೆ. ಈ ವೇದಿಕೆಯಲ್ಲಿ ನಿಲ್ಲಲು ನನಗೆ 15 ವರ್ಷಗಳು ಬೇಕಾಯಿತು. ಪ್ರತಿ ವರ್ಷ ನಾನು ತೆಲುಗು ಅಸೋಸಿಯೇಷನ್ ಆಫ್ ನಾರ್ತ್ ಅಮೇರಿಕ ಮತ್ತು ಇಲ್ಲಿನ ತೆಲುಗು ಜನರ ಬಗ್ಗೆ ಕೇಳುತ್ತಲೇ ಇರುತ್ತೇನೆ. ಆದರೆ ನಾನು ಇಲ್ಲಿಗೆ ಬಂದು ನೀವು ನನಗೆ ತೋರಿಸಿದ ಪ್ರೀತಿಗೆ ಧನ್ಯವಾದ ಹೇಳಲು ಈಗ ಸಾಧ್ಯವಾಯಿತು ಎಂದು ಹೇಳಿದರು.

ನನ್ನ ಮೊದಲ ಚಿತ್ರದೊಂದಿಗೆ ನೀವು ನನ್ನನ್ನು ಬೆಂಬಲಿಸಿದ್ದೀರಿ. ನೀವು ನನ್ನನ್ನು ನಿಮ್ಮ ಕುಟುಂಬದ ಸದಸ್ಯೆಯಾಗಿ ಸ್ವೀಕರಿಸಿದ್ದೀರಿ. ಅಂದಿನಿಂದ ನೀವು ನನಗೆ ನಿರಂತರ ಪ್ರೀತಿ ಮತ್ತು ಬೆಂಬಲವನ್ನು ನೀಡುತ್ತಿದ್ದೀರಿ. ಅದಕ್ಕಾಗಿ ನಿಮಗೆ ಧನ್ಯವಾದ ಹೇಳಲು ನನಗೆ ಇಷ್ಟು ವರ್ಷಗಳು ಬೇಕಾಯಿತು ಎಂದು ಸಮಂತಾ ತಲೆ ಬಾಗಿಸಿ ನಮಿಸಿದರು.

ನನ್ನ ವೃತ್ತಿಜೀವನದಲ್ಲಿ ನಾನು ಒಂದು ಪ್ರಮುಖ ಹಂತದಲ್ಲಿದ್ದೇನೆ. ನನ್ನ ಜೀವನದಲ್ಲಿ ನಾನು ಯಾವುದೇ ನಿರ್ಧಾರ ತೆಗೆದುಕೊಂಡರೂ ಪರವಾಗಿಲ್ಲ.. ನೀವು ನನ್ನೊಂದಿಗಿದ್ದೀರಿ ಎಂಬ ಧೈರ್ಯವಿದೆ. ನಾನು ತಲಾಲಾ ಎಂಬ ನಿರ್ಮಾಣ ಕಂಪನಿಯನ್ನು ಪ್ರಾರಂಭಿಸಿದ್ದೇನೆ. ನಿರ್ಮಾಪಕಿಯಾಗಿ ನಾನು ನನ್ನ ಮೊದಲ ಹೆಜ್ಜೆ ಇಟ್ಟಿದ್ದೇನೆ. ಉತ್ತರ ಅಮೇರಿಕದ ತೆಲುಗು ಜನರು ನನಗೆ ತುಂಬಾ ಬೆಂಬಲ ನೀಡಿದ್ದಾರೆ ಎಂದು ಸಮಂತಾ ಹೇಳಿದರು. ನಾನು ಜೀವನದಲ್ಲಿ ಯಾವುದೇ ನಿರ್ಧಾರ ತೆಗೆದುಕೊಂಡರೂ.. ನಾನು ಯಾವುದೇ ತಪ್ಪು ಮಾಡಿದರೂ.. ನೀವು ಯಾವಾಗಲೂ ನನ್ನೊಂದಿಗಿರುತ್ತೀರಿ. ನನಗೆ ಅದರ ಬಗ್ಗೆ ಹೆಮ್ಮೆ ಇದೆ. ನಾನು ಎಲ್ಲಿಗೆ ಹೋದರೂ, ನಾನು ಏನೇ ಮಾಡಿದರೂ, ನಾನು ಯಾವುದೇ ಉದ್ಯಮದಲ್ಲಿ ಕೆಲಸ ಮಾಡಿದರೂ.. ತೆಲುಗು ಪ್ರೇಕ್ಷಕರು ನನ್ನ ಬಗ್ಗೆ ಹೆಮ್ಮೆ ಪಡುತ್ತಾರೋ ಇಲ್ಲವೋ ಎಂದು ನಾನು ಯೋಚಿಸುತ್ತೇನೆ. ಇಷ್ಟು ವರ್ಷಗಳ ಕಾಲ ನನ್ನ ಪ್ರಯಾಣದಲ್ಲಿ ನನ್ನನ್ನು ಬೆಂಬಲಿಸಿದ್ದಕ್ಕಾಗಿ ಧನ್ಯವಾದಗಳು ಎಂದು ಸಮಂತಾ ಹೇಳಿದರು.

ನೀವು ನನಗೆ ಒಂದು ಗುರುತನ್ನು, ಕುಟುಂಬವನ್ನು ನೀಡಿದ್ದೀರಿ. ನಿಮ್ಮ ಕಾರಣದಿಂದಾಗಿಯೇ ಓ ಬೇಬಿ ಚಿತ್ರ ಮಿಲಿಯನ್ ಡಾಲರ್ ಕ್ಲಬ್‌ಗೆ ಸೇರಿದೆ. ಇದೆಲ್ಲವೂ ನಿಮ್ಮಿಂದ ಸಾಧ್ಯವಾಯಿತು. ನೀವು ನನ್ನಿಂದ ದೂರವಿದ್ದರೂ, ನನ್ನ ಹೃದಯದಲ್ಲಿ ನಿಮಗೆ ವಿಶೇಷ ಸ್ಥಾನವಿರುತ್ತದೆ ಎಂದು ಸಮಂತಾ ಇದ್ದಕ್ಕಿದ್ದಂತೆ ಕಣ್ಣೀರು ಹಾಕಿದ್ದಾರೆ. ಸಮಂತಾ ಅವರ ಈ ಭಾವುಕ ಮಾತುಗಳ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ.

## ಮೂತ್ರನಾಳದ ಸೋಂಕು ಏಕೆ ಬರುತ್ತದೆ?



### ಹೆಲ್ತ್ ಟಿಪ್ಸ್

ದೈಹಿಕ ಸಂಪರ್ಕದ ಸಮಯದಲ್ಲಿ ಬ್ಯಾಕ್ಟೀರಿಯಾಗಳು ಮೂತ್ರನಾಳವನ್ನು ಪ್ರವೇಶಿಸಬಹುದು. ಈ ಬ್ಯಾಕ್ಟೀರಿಯಾಗಳು ಮೂತ್ರಕೋಶವನ್ನು ತಲುಪಿ ಸೋಂಕನ್ನು ಉಂಟುಮಾಡಬಹುದು. ಮೂತ್ರನಾಳವು ಚಿಕ್ಕದಾಗಿದ್ದು, ನೇರವಾಗಿರುವುದರಿಂದ ಮಹಿಳೆಯರಲ್ಲಿ ಈ ಸಮಸ್ಯೆ ಹೆಚ್ಚಾಗಿ ಕಂಡುಬರುತ್ತದೆ.

ಸಂಭೋಗದ ನಂತರ ಮೂತ್ರ ವಿಸರ್ಜಿಸುವುದರಿಂದ ಮೂತ್ರನಾಳದ ಸೋಂಕಿನ ಅಪಾಯವನ್ನು ಕಡಿಮೆ ಮಾಡಬಹುದು. ಏಕೆಂದರೆ ಮೂತ್ರ ವಿಸರ್ಜನೆಯು ಮೂತ್ರನಾಳದಿಂದ ಬ್ಯಾಕ್ಟೀರಿಯಾವನ್ನು ತೆಗೆದುಹಾಕುತ್ತದೆ. ಮೂತ್ರನಾಳದ ಸೋಂಕು ತಡೆಗಟ್ಟಲು ಇದು ಸುಲಭ ಮತ್ತು ಪರಿಣಾಮಕಾರಿ ಮಾರ್ಗವಾಗಿದೆ.

ಲೈಂಗಿಕ ಕ್ರಿಯೆಯ ನಂತರ ತಕ್ಷಣವೇ ಮೂತ್ರ ವಿಸರ್ಜನೆ ಮಾಡುವುದು ಉತ್ತಮ. ಇದು ಮೂತ್ರನಾಳದಲ್ಲಿರುವ ಹೆಚ್ಚಿನ ಬ್ಯಾಕ್ಟೀರಿಯಾಗಳನ್ನು ತೆಗೆದುಹಾಕುತ್ತದೆ. ಮೂತ್ರ ವಿಸರ್ಜಿಸುವುದರ ಜೊತೆಗೆ ನೀವು ಇತರ ಕೆಲವು ಕ್ರಮಗಳನ್ನು ಸಹ ಪ್ರಯತ್ನಿಸಬಹುದು. ಸಾಕಷ್ಟು ನೀರು ಕುಡಿಯಿರಿ. ಇದು ಮೂತ್ರದ ಉತ್ಪಾದನೆಯನ್ನು ಹೆಚ್ಚಿಸುತ್ತದೆ ಮತ್ತು ಬ್ಯಾಕ್ಟೀರಿಯಾವನ್ನು ಹೊರಹಾಕಲು ಸಹಾಯ ಮಾಡುತ್ತದೆ.

ಹತ್ತಿ ಒಳ ಉಡುಪುಗಳನ್ನು ಧರಿಸಿ. ಸಂಶ್ಲೇಷಿತ ಬಟ್ಟೆಗಳು ಬೆವರು ಹೀರಿಕೊಳ್ಳುವುದಿಲ್ಲ ಮತ್ತು ಬ್ಯಾಕ್ಟೀರಿಯಾದ ಬೆಳವಣಿಗೆಯನ್ನು ಉತ್ತೇಜಿಸುತ್ತವೆ.ಸಂಭೋಗದ ನಂತರ ನಿಮ್ಮ ಅಂಗಾಂಗಗಳನ್ನು ಸ್ವಚ್ಛಗೊಳಿಸಿಕೊಳ್ಳಿ. ಬೆಚ್ಚಗಿನ ನೀರು ಮತ್ತು ಸೋಪಿನಿಂದ ಸ್ವಚ್ಛಗೊಳಿಸಿಕೊಳ್ಳಿ. ಸಕ್ಕರೆಯನ್ನು ಕಡಿಮೆ ಸೇವಿಸಿ. ಹೆಚ್ಚಿನ ಸಕ್ಕರೆ ಮಟ್ಟವು ಮೂತ್ರದಲ್ಲಿ ಬ್ಯಾಕ್ಟೀರಿಯಾದ ಬೆಳವಣಿಗೆಯನ್ನು ಉತ್ತೇಜಿಸುತ್ತದೆ.ನಿಮಗೆ ಪದೇ ಪದೇ ಮೂತ್ರ ವಿಸರ್ಜನೆಯ ಸಮಸ್ಯೆ ಇದ್ದರೆ, ಮೂತ್ರ ವಿಸರ್ಜಿಸುವಾಗ ಸುಡುವ ಸಂವೇದನೆ ಇದ್ದರೆ, ಮೂತ್ರದ ಬಣ್ಣ ಬದಲಾಗಿದ್ದರೆ ಅಥವಾ ಮೂತ್ರದಲ್ಲಿ ರಕ್ತವಿದ್ದರೆ, ನೀವು ವೈದ್ಯರನ್ನು ಸಂಪರ್ಕಿಸಬೇಕು. ಇವು ಮೂತ್ರನಾಳದ ಸೋಂಕಿನ ಲಕ್ಷಣಗಳಾಗಿರಬಹುದು.

## ಇನೋವಸ್ಥಾನ್ ಅಭಿಯಾನಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಚಾಲನೆ



ಪ್ರಪಂಚದಾದ್ಯಂತ ಸ್ಪರ್ಧೆಯು ಉತ್ತುಂಗದಲ್ಲಿರುವ ಇಂದಿನ ಸಮಯದಲ್ಲಿ, ಭಾರತವನ್ನು ಸ್ವಾವಲಂಬಿಯನ್ನಾಗಿ ಮತ್ತು ಜಾಗತಿಕ ನಾಯಕನನ್ನಾಗಿ ಮಾಡಲು ನಾವೀನ್ಯತೆಯ ಶಕ್ತಿಯ ಮೂಲಕ ಮಾತ್ರ ಸಾಧ್ಯ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನಲ್ಲಿ ಕೈಗಾರಿಕಾ ನಾವೀನ್ಯತೆ ಮತ್ತು ಸಂಶೋಧನಾ ಮಂಡಳಿ ಮತ್ತು ಜೈನ್ ಡೀಮ್ಡ್ ವಿಶ್ವವಿದ್ಯಾಲಯ ಬೆಂಗಳೂರು ಆಯೋಜಿಸಿದ್ದ ಆವಿಷ್ಕಾರ, ಬೌದ್ಧಿಕ ಸಂಪತ್ತು ಮತ್ತು ಉದ್ಯಮಾಧಾರಿತ ಬೆಳವಣಿಗೆಗೆ ರಾಷ್ಟ್ರಮಟ್ಟದ ಆಂದೋಲನ ಇನೋವಸ್ಥಾನ್ ?ವಿಚಾರದಿಂದ ವಿಕಾಸ ಯಾತ್ರೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಭಾರತದಲ್ಲಿ ನಾವೀನ್ಯತೆ ಕೇವಲ ಪ್ರಯೋಗಾಲಯಕ್ಕೆ ಸೀಮಿತವಾಗಿಲ್ಲ, ಬದಲಾಗಿ ನಾವು ಅದನ್ನು ನೀತಿ, ಶಿಕ್ಷಣ, ಕೈಗಾರಿಕೆ ಮತ್ತು ಸಮಾಜದ ಭಾಗವಾಗಿಸುತ್ತಿದ್ದೇವೆ. ಭಾರತವು ವಿಶ್ವದ ಪ್ರಮುಖ ನಾವೀನ್ಯತೆಯ ರಾಷ್ಟ್ರಗಳ ಪಟ್ಟಿಯಲ್ಲಿ ಸೇರ್ಪಡೆಗೊಳ್ಳಬೇಕಾದರೆ, ನಮ್ಮ ಉನ್ನತ ಶಿಕ್ಷಣ ಸಂಸ್ಥೆಗಳು, ನವೋದ್ಯಮಗಳು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು, ಕಾರ್ಪೊರೇಟ್ ವಲಯ ಮತ್ತು ಸರ್ಕಾರಿ ನೀತಿ ಸಂಸ್ಥೆಗಳು ಎಲ್ಲವೂ ಒಂದೇ ವೇದಿಕೆಯಲ್ಲಿ ಒಟ್ಟಾಗಿ ಕೆಲಸ ಮಾಡುವುದು, ಸಮನ್ವಯಗೊಳಿಸುವುದು ಮತ್ತು ನಾವೀನ್ಯತೆಯನ್ನು ರಾಷ್ಟ್ರೀಯ ಆದ್ಯತೆಯನ್ನಾಗಿ ಮಾಡುವುದು ಅವಶ್ಯಕ ಎಂದು ಹೇಳಿದರು.

ನಮ್ಮ ಭಾರತ ದೇಶವು ಯಾವಾಗಲೂ ವಿಚಾರಗಳ ಭೂಮಿಯಾಗಿದೆ. ತಕ್ಷಶಿಲ ಮತ್ತು ನಳಂದದಂತಹ ವಿಶ್ವವಿದ್ಯಾಲಯಗಳು ಜ್ಞಾನದ ಬೆಳಕನ್ನು ಹರಡಿದ, ಚರಕ ಮತ್ತು ಸುಶ್ರುತರಂತಹ ವಿದ್ವಾಂಸರು ವೈದ್ಯಕೀಯ ವಿಜ್ಞಾನದಲ್ಲಿ ಕ್ರಾಂತಿಯನ್ನುಂಟು ಮಾಡಿದ ಮತ್ತು ಆರ್ಯಭಟರಂತಹ ಗಣಿತಜ್ಞರು ಶೂನ್ಯವನ್ನು ಕಂಡುಹಿಡಿದ ರಾಷ್ಟ್ರವಾಗಿದೆ. ಚಿಂತನೆ, ತತ್ವಶಾಸ್ತ್ರ ಮತ್ತು ನಾವೀನ್ಯತೆ ಯಾವಾಗಲೂ ಭಾರತದ ಆತ್ಮದ ತಿರುಳಾಗಿವೆ. ಇಂದಿನ ಯುಗವು ಕೇವಲ ಯೋಚಿಸುವುದರ ಬಗ್ಗೆ ಅಲ್ಲ, ಆ ಆಲೋಚನೆಗಳನ್ನು ವಾಸ್ತವಕ್ಕೆ ಪರಿವರ್ತಿಸುವುದರ ಬಗ್ಗೆ. ಭಾರತವು ಜಾಗತಿಕ ನಾವೀನ್ಯತೆ ಸೂಚ್ಯಂಕದಲ್ಲಿ ಐತಿಹಾಸಿಕ ಪ್ರಗತಿಯನ್ನು ಸಾಧಿಸಿದೆ. 2015 ರಲ್ಲಿ, ದೇಶವು 81 ನೇ ಸ್ಥಾನದಲ್ಲಿತ್ತು, ಆದರೆ 2023 ರ ದತ್ತಾಂಶದ ಪ್ರಕಾರ, ಅದು 40 ನೇ ಸ್ಥಾನವನ್ನು ತಲುಪಿದೆ ಎಂದು ತಿಳಿಸಿದರು.

ಭಾರತದಂತಹ ಯುವ ರಾಷ್ಟ್ರದಲ್ಲಿ ನಾವೀನ್ಯತೆಯ ಸಾಧ್ಯತೆಗಳು ಅಪಾರವಾಗಿವೆ. ಸ್ಟಾರ್ಟ್‌ಅಪ್ ಸಂಸ್ಕೃತಿ, ಡಿಜಿಟಲೀಕರಣ, ಆತ್ಮನಿರ್ಭರ ಭಾರತ್ ಮತ್ತು 'ಮೇಕ್ ಇನ್ ಇಂಡಿಯಾ' ನಂತಹ ಅಭಿಯಾನಗಳು ನಾವೀನ್ಯತೆಗೆ ಹೊಸ ದಿಕ್ಕನ್ನು ನೀಡುತ್ತಿವೆ. ಶಾಲೆಗಳು, ಕಾಲೇಜುಗಳು, ವಿಶ್ವವಿದ್ಯಾಲಯಗಳು ಮತ್ತು ಕೈಗಾರಿಕೆಗಳಂತಹ ಎಲ್ಲಾ ಹಂತಗಳಲ್ಲಿ ನಾವೀನ್ಯತೆಯನ್ನು ಪ್ರೋತ್ಸಾಹಿಸಲಾಗುತ್ತಿದೆ. ಸರ್ಕಾರವು ರಾಷ್ಟ್ರೀಯ ಬೌದ್ಧಿಕ ಆಸ್ತಿ ನೀತಿಯ ಮೂಲಕ ನಾವೀನ್ಯಕಾರರನ್ನು ಬೆಂಬಲಿಸುತ್ತಿದೆ. ವಿಶ್ವವಿದ್ಯಾಲಯಗಳು ತಮ್ಮ ಬೌದ್ಧಿಕ ಆಸ್ತಿಗಳನ್ನು ನಿರ್ವಹಿಸಲು ಮತ್ತು ವಾಣಿಜ್ಯೀಕರಣಗೊಳಿಸಲು ಐಪಿ ಕೇಂದ್ರಗಳು ಮತ್ತು ನೀತಿಗಳನ್ನು ಸ್ಥಾಪಿಸಲು ಪ್ರೋತ್ಸಾಹಿಸಬೇಕಾಗಿದೆ ಎಂದು ಹೇಳಿದರು.

ಪೇಟೆಂಟ್ ವಾರ್ಷಿಕ ವರದಿ 2022-23 ರ ಪ್ರಕಾರ, ಕರ್ನಾಟಕ ರಾಜ್ಯದಿಂದ 6,500 ಕ್ಕೂ ಹೆಚ್ಚು ಪೇಟೆಂಟ್ ಅರ್ಜಿಗಳನ್ನು ಸ್ವೀಕರಿಸಲಾಗಿರುವುದು ಶ್ಲಾಘನೀಯ. ಈ ಸಂಖ್ಯೆಯನ್ನು ಇನ್ನೂ ವೇಗವಾಗಿ ಹೆಚ್ಚಿಸಬೇಕಾಗಿದೆ. ಇದಕ್ಕಾಗಿ, ವಿಶೇಷವಾಗಿ ನಮ್ಮ ಉನ್ನತ ಶಿಕ್ಷಣ ಸಂಸ್ಥೆಗಳು, ನವೋದ್ಯಮಗಳು ಮತ್ತು ಒಖಒಇ ಗಳು ಬೌದ್ಧಿಕ ಆಸ್ತಿಯನ್ನು ಗಂಭೀರವಾಗಿ ಪರಿಗಣಿಸಬೇಕಾಗುತ್ತದೆ. ಪ್ರಸ್ತುತ ಭಾರತವು ವಿಶ್ವದ ಮೂರನೇ ಅತಿದೊಡ್ಡ ನವೋದ್ಯಮ ಪರಿಸರ ವ್ಯವಸ್ಥೆಯಾಗಿದ್ದು, ಒಂದು ಲಕ್ಷಕ್ಕೂ ಹೆಚ್ಚು ನವೋದ್ಯಮಗಳು ಮತ್ತು 110 ಯುನಿಕಾರ್ನ್ ಕಂಪನಿಗಳನ್ನು ಹೊಂದಿದೆ. ಆದರೂ, ಕೇವಲ ಒಂದು ಸಣ್ಣ ಶೇಕಡಾವಾರು ಜನರು ಮಾತ್ರ ಬೌದ್ಧಿಕ ಆಸ್ತಿ ರಕ್ಷಣೆಯನ್ನು ಹೊಂದಿದ್ದಾರೆ. ಭಾರತದಲ್ಲಿ ಬೌದ್ಧಿಕ ಆಸ್ತಿ ಮತ್ತು ಅದರ ಕಾರ್ಯತಂತ್ರದ ಬಳಕೆಯ ತಿಳುವಳಿಕೆಯನ್ನು ಮತ್ತಷ್ಟು ಬಲಪಡಿಸುವ ಅವಶ್ಯಕತೆಯಿದೆ ಎಂದು ತಿಳಿಸಿದರು.

ಇನ್ನೋವೇಟ್ ಪ್ರೊಟೆಕ್ಟ್-ಸ್ಕೇಲ್' ಸಂಸ್ಕೃತಿಯನ್ನು ನಾವು ಅಳವಡಿಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ. ಸರ್ಕಾರವು ಪ್ರಾರಂಭಿಸಿದ ಸ್ಟಾರ್ಟ್‌ಅಪ್ ಇಂಡಿಯಾ, ಆತ್ಮನಿರ್ಭರ ಭಾರತ್, ಇನ್ನೋವೇಶನ್ ಮಿಷನ್, ಮೇಕ್ ಇನ್ ಇಂಡಿಯಾದಂತಹ ವಿವಿಧ ಕಾರ್ಯಕ್ರಮಗಳು ಈ ಪ್ರಯಾಣದ ಭಾಗವಾಗಿದೆ. ಇಂದು ಐಐಟಿಗಳು, ಐಐಎಂಎಸ್, ಎನ್‌ಐಟಿಎಸ್ ಮತ್ತು ನಾವೀನ್ಯತೆ ಕೇಂದ್ರಗಳಲ್ಲಿ ಸಾವಿರಾರು ಯುವಕರು ಹೊಸ ಪರಿಹಾರಗಳು, ಹೊಸ ಅಪ್ಲಿಕೇಶನ್ ಗಳು, ಹೊಸ ಉತ್ಪನ್ನಗಳು ಮತ್ತು ಸೇವೆಗಳನ್ನು ಅಭಿವೃದ್ಧಿಪಡಿಸುತ್ತಿದ್ದಾರೆ. ಪ್ರತಿಯೊಂದು ಸಣ್ಣ ವಿಚಾರವೂ ದೊಡ್ಡ ಬದಲಾವಣೆಯನ್ನು ತರಬಹುದು. ಜೀವನವನ್ನು ಸುಲಭಗೊಳಿಸುವ ಅಪ್ಲಿಕೇಶನ್, ಯಂತ್ರ, ಸಾಫ್ಟ್‌ವೇರ್ ಕೇವಲ ತಾಂತ್ರಿಕ ಉತ್ಪನ್ನವಲ್ಲ, ಅದು ಅಭಿವೃದ್ಧಿಯ ವಾಹನವಾಗುತ್ತದೆ ಎಂದು ಹೇಳಿದರು.

ಬೆಂಗಳೂರು ನಗರವು ತಂತ್ರಜ್ಞಾನ, ಆರ್ಥಿಕ ಅಭಿವೃದ್ಧಿ, ಶಿಕ್ಷಣ ಮತ್ತು ಸಾಂಸ್ಕೃತಿಕ ವೈವಿಧ್ಯತೆಯ ಕೇಂದ್ರವಾಗಿದೆ. ಬೆಂಗಳೂರಿನಲ್ಲಿ ಅನೇಕ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಿವೆ, ಅವುಗಳಲ್ಲಿ ಒಂದು ಜೈನ್ ಡೀಮ್ಡ್ ವಿಶ್ವವಿದ್ಯಾಲಯವಾಗಿದ್ದು, ಇದು ಬೆಂಗಳೂರನ್ನು ಶಿಕ್ಷಣದ ಕೇಂದ್ರವನ್ನಾಗಿ ಮಾಡುವಲ್ಲಿ ಗಣನೀಯ ಕೊಡುಗೆ ನೀಡಿದೆ ಎಂದು ರಾಜ್ಯಪಾಲರು ಶ್ಲಾಘಿಸಿದರು.

ಇನ್ನೋವೇಶನ್‌ಸ್ಥಾನ ಎಂಬುದು ಉನ್ನತ ಶಿಕ್ಷಣ ಸಂಸ್ಥೆಗಳು, ಕೈಗಾರಿಕೆಗಳು ಮತ್ತು ನವೋದ್ಯಮಗಳಲ್ಲಿ ನಾವೀನ್ಯತೆಯನ್ನು ವೇಗಗೊಳಿಸಲು ಮತ್ತು ಸಾಂಸ್ಥೀಕರಣಗೊಳಿಸಲು ಒಂದು ರಾಷ್ಟ್ರೀಯ ಅಭಿಯಾನವಾಗಿದೆ. ಕರ್ನಾಟಕದಿಂದ ಪ್ರಾರಂಭವಾದ ಈ ವಿಚಾರದಿಂದ ವಿಕಾಸ ಯಾತ್ರೆ, ನಮ್ಮ ಗೌರವಾನ್ವಿತ ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಅವರ ಸ್ವಾವಲಂಬಿ ಭಾರತ ಮತ್ತು ನಾವೀನ್ಯತೆ ಆಧಾರಿತ ರಾಷ್ಟ್ರವನ್ನು ನಿರ್ಮಿಸುವ ಸಂಕಲ್ಪದಿಂದ ಪ್ರೇರಿತವಾಗಿದೆ. ಆದ್ದರಿಂದ ಇನ್ನೋವೆಸ್ತಾನ್ ಆಂದೋಲನವು ಭಾರತವನ್ನು ಪರಿಣಾಮದ ಆಲೋಚನೆಗಳ ಕಡೆಗೆ ಕೊಂಡೊಯ್ಯುವ ಚಿಂತನೆಯ ಚಳುವಳಿಯಾಗಿದೆ. ಅಲ್ಲಿ ಪ್ರತಿಯೊಬ್ಬ ನಾಗರಿಕನೂ ನಾವೀನ್ಯಕಾರನಾಗಬಹುದು. ಹಾಗಾಗಿ, ನಾವೆಲ್ಲರೂ ಒಟ್ಟಾಗಿ ಭಾರತವನ್ನು ಚಿಂತನಶೀಲ, ನವೀನ ಮತ್ತು ಬಲಿಷ್ಠ ರಾಷ್ಟ್ರವನ್ನಾಗಿ ಮಾಡೋಣ ಎಂದು ರಾಜ್ಯಪಾಲರು ಕರೆ ನೀಡಿದರು.

## ರೇಷ್ಮೆಯಂತಹ ಕೂದಲನ್ನು ಹೊಂದಲು ಉಪಾಯಗಳು

### ಬ್ಯೂಟಿ ಟಿಪ್ಸ್



ನಯವಾದ ಹಾಗೂ ಮೃದುವಾದ ಕೂದಲನ್ನು ಹೊಂದಲು ಎಲ್ಲರೂ ಬಯಸುತ್ತಾರೆ. ಆದರೆ ಆನುವಂಶಿಕತೆ, ಮಾಲಿನ್ಯ, ಔಷಧಗಳ ಅಡ್ಡ ಪರಿಣಾಮ, ಅನುಚಿತವಾದ ಆರೈಕೆ ಸೇರಿದಂತೆ ಅನೇಕ ಕಾರಣಗಳಿಂದಾಗಿ ಕೂದಲು ಉದುರುವುದು, ಒರಟಾಗುವುದು, ಬಹುಬೇಗ ಬಣ್ಣ ಬದಲಾಗುವಂತಹ ಸಮಸ್ಯೆ ಕಾಡುವುದು. ಇಂತಹ ಸಮಸ್ಯೆಗಳಿಂದ ದೂರ ಇರಲು ಕೆಲವು ಕ್ರಮವನ್ನು ಅನುಸರಿಸಬೇಕು. ಆಗ ನಿಮ್ಮ ಬಯಕೆಯಂತೆ ಆರೋಗ್ಯಕರ ಹಾಗೂ ಆಕರ್ಷಕ ಕೂದಲನ್ನು ಹೊಂದಬಹುದು. ವಿವಿಧ ಬಗೆಯ ತರಕಾರಿ, ಹಣ್ಣುಗಳು ಮತ್ತು ಧಾನ್ಯಗಳನ್ನು ಒಳಗೊಂಡಿರುವ ಆಹಾರ ಪದಾರ್ಥಗಳನ್ನು ಸೇವಿಸಬೇಕು. ಅಧಿಕ ನೀರು ಸೇವನೆ, ಆರೋಗ್ಯಕರ ಕೊಬ್ಬಿನ ಆಹಾರಗಳು ನಮ್ಮ ಆರೋಗ್ಯ ಹಾಗೂ ದೇಹಕ್ಕೆ ಅಗತ್ಯವಾದ ಪೋಷಕಾಂಶ ನೀಡುವುದರ ಮೂಲಕ ಆರೈಕೆಯನ್ನು ಮಾಡುವುದು. ನಿಮ್ಮ ಆಹಾರದಲ್ಲಿ ಮೀನು, ಆವಕಾಡೊ, ಆಲಿವ್ ಎಣ್ಣೆ, ಒಮೆಗಾ ಕೊಬ್ಬು, ಕರಗಬಲ್ಲ ಜೀವಸತ್ವಗಳನ್ನು ಸೇವಿಸುತ್ತಾ ಬಂದರೆ ಕೂದಲು ನೈಸರ್ಗಿಕವಾಗಿಯೇ ದಟ್ಟವಾಗಿ ಬೆಳೆಯುವುದು. ಜೊತೆಗೆ ಮೃದು ಹಾಗೂ ಕಾಂತಿಯಿಂದ ಕಂಗೊಳಿಸುವುದು. ಕೂದಲು ಆರೋಗ್ಯಕರವಾಗಿರಲು ಕೆಲವು ನೈಸರ್ಗಿಕ ಉತ್ಪನ್ನಗಳ ಲೇಪನ ಹಾಗೂ ಆರೈಕೆಯನ್ನು ಮಾಡಬೇಕು. ಆಗ ಕೂದಲು ಹೊಳಪಿನಿಂದ ಕೂಡಿರುತ್ತದೆ. ವಾರದಲ್ಲಿ ಒಮ್ಮೆಯಾದರೂ ತೆಂಗಿನೆಣ್ಣೆ, ಆಲೋವೆರಾ, ದಾಸವಾಳ ಹೂ ಅಥವಾ ಎಲೆಯ ರಸದ ಲೇಪನ, ಹೊಂದಬೇಕು. ಮಾರುಕಟ್ಟೆಯಲ್ಲಿ ದೊರೆಯುವ ಹೇರ್ ಕಂಡೀಷನರ್ ಬಳಸುವ ಬದಲು ಮನೆಯಲ್ಲಿಯೇ ಇರುವ ನೈಸರ್ಗಿಕ ಉತ್ಪನ್ನಗಳನ್ನು ಬಳಸಿಕೊಂಡು ಲೇಪನವನ್ನು ಅನ್ವಯಿಸಿ. ಆಗ ಕೂದಲು ನೈಸರ್ಗಿಕವಾಗಿಯೇ ದಟ್ಟವಾಗಿ ಬೆಳೆಯುವುದು. ಜೊತೆಗೆ ಮೃದುವಾಗಿ ಕಂಗೊಳಿಸುವುದು. ಕೂದಲ ಆರೋಗ್ಯ ಕಾಪಾಡಬೇಕು ಎಂದರೆ ಅದರ ಸ್ವಚ್ಛತೆಯ ಕಡೆಗೆ ಹೆಚ್ಚಿನ ಗಮನ ನೀಡಬೇಕು. ಕೂದಲು ಆರೋಗ್ಯಕರವಾಗಿರಲು ಹಾಗೂ ಕಾಂತಿಯಿಂದ ಹೊಳೆಯಲು ಸ್ವಚ್ಛತೆ ಅತ್ಯಗತ್ಯ. ಇಲ್ಲವಾದರೆ ಸೋಂಕುಗಳಿಂದಾಗಿ ಹೊಟ್ಟು, ಹೇನು, ಕೂದಲು ಒರಟಾಗುವುದು, ಒಡೆಯುವ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಸೂಕ್ತವಾದ ಆರೈಕೆಯನ್ನು ಮಾಡುತ್ತಾ ಬಂದರೆ ಕೂದಲು ಆರೋಗ್ಯವಾಗಿ ಹಾಗೂ ದಟ್ಟವಾಗಿ ಬೆಳೆಯುವುದು. ನಿತ್ಯ ನಾವು ಸೇವಿಸುವ ನೀರು ಮತ್ತು ನಿದ್ರೆಯ ಪ್ರಮಾಣವು ನಮ್ಮ ಕೂದಲ ಆರೋಗ್ಯವನ್ನು ನಿರ್ಧರಿಸುತ್ತವೆ. ಕೂದಲಿನ ಒಂದೇ ಎಳೆಯು ಶೇ.25 ರಷ್ಟು ನೀರನ್ನು ಯಾಚಿಸುವುದು. ಅಧಿಕ ನೀರನ್ನು ಸೇವಿಸಿದಾಗ ಕೂದಲು ಹೆಚ್ಚು ಹೈಡ್ರೇಟ್ ಆಗುವುದು. ಜೊತೆಗೆ ಆರೋಗ್ಯಕರ ನೆತ್ತಿಯನ್ನು ಉತ್ತೇಜಿಸುವುದು. ಕೂದಲುಗಳ ಕೋಶಕ್ಕೆ ಶಕ್ತಿಯನ್ನು ನೀಡುವುದರ ಮೂಲಕ ಕೂದಲು ಹೊಳಪು ಹಾಗೂ ಮೃದುವಾದ ವಿನ್ಯಾಸದಿಂದ ಕೂಡಿರುವಂತೆ ಮಾಡುತ್ತದೆ. ಹಾಗಾಗಿ ಸೂಕ್ತ ನಿದ್ರೆ ಮತ್ತು ನೀರನ್ನು ಕುಡಿಯುವುದರಿಂದ ಸಮಸ್ಯೆಯನ್ನು ಸುಲಭವಾಗಿ ನಿಯಂತ್ರಿಸಬಹುದು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ರಾಜ ವಿರೋಧ, ಯತ್ನ ಕಾರ್ಯಭಂಗ, ಕುಟುಂಬದಲ್ಲಿ ಅಸೌಖ್ಯ, ಹಣದ ಅಡಚಣೆ, ವಾಹನ ಅಪಘಾತ, ಅಗ್ನಿಯಿಂದ ಭೀತಿ.

**ವೃಷಭ:** ಸ್ತ್ರೀ ಸಂಬಂಧ ವ್ಯವಹಾರಗಳಿಂದ ಚಿಂತೆ, ಶತ್ರು ಭಾದೆ, ವ್ಯರ್ಥ, ಧನ ಹಾನಿ.

**ಮಿಥುನ:** ಪ್ರಿಯ ಜನರ ಭೇಟಿ, ಭ್ರಾತ್ರುಗಳಿಂದ ತೊಂದರೆ,ಸ್ಥಳ ಬದಲಾವಣೆ, ಮಂಗಳ ಕಾರ್ಯಗಳಲ್ಲಿ ಭಾಗಿ, ಸ್ಥಿರಾಸ್ತಿ ಮಾರಾಟ.

**ಕಟಕ:** ಆದಾಯಕ್ಕಿಂತ ಖರ್ಚು ಜಾಸ್ತಿ, ಅನಾರೋಗ್ಯ, ವಿದ್ಯಾಭ್ಯಾಸದಲ್ಲಿ ಹಿನ್ನಡೆ, ಕಾರ್ಯ ವಿಘಾತ, ಸಂತಾನ ಪ್ರಾಪ್ತಿ.

**ಸಿಂಹ:** ಹೊಸ ವ್ಯವಹಾರಗಳಿಂದ ನಷ್ಟ, ಅಕಾಲ ಭೋಜನ, ಅನ್ಯ ಜನರಲ್ಲಿ ದ್ವೇಷ, ದುಃಖದಾಯಕ ಪ್ರಸಂಗಗಳು.

**ಕನ್ಯಾ:** ವ್ಯಾಸಂಗಕ್ಕೆ ತೊಂದರೆ, ದಾಯಾದಿ ಕಲಹ, ದುಷ್ಟಬುದ್ಧಿ, ಯತ್ನ ಕಾರ್ಯಗಳಲ್ಲಿ ಜಯ, ಸಲ್ಲದ ಅಪವಾದ ಎಚ್ಚರದಿಂದಿರಿ.

**ತುಲಾ:** ನಾನಾ ರೀತಿಯ ಸಂಪಾದನೆ, ಉದ್ಯೋಗದಲ್ಲಿ ಬಡ್ತಿ, ಸ್ನೇಹಿತರಿಂದ ಸಹಾಯ, ವಿವಾಹ ಯೋಗ, ಅಧಿಕ ತಿರುಗಾಟ, ಋಣ ವಿಮೋಚನೆ.

**ವೃಶ್ಚಿಕ:** ಸ್ಥಾನ ಬದಲಾವಣೆ, ಅತಿಯಾದ ಕೋಪ, ಋಣಭಾದೆ, ನಿಷ್ಠೂರ, ಕುಟುಂಬದಲ್ಲಿ ಅಹಿತಕರ ವಾತಾವರಣ.

**ಧನಸ್ಸು:** ಕೈ ಹಾಕಿದ ಕೆಲಸಗಳಲ್ಲಿ ಜಯ, ವ್ಯಾಪಾರ ವ್ಯವಹಾರದಲ್ಲಿ ಏರುಪೇರು, ಉದ್ಯೋಗದಲ್ಲಿ ಸ್ವಲ್ಪ ತೊಂದರೆ.

**ಮಕರ:** ವಿರೋಧಿಗಳಿಂದ ತೊಂದರೆ, ಅನಾರೋಗ್ಯ, ವಿವಾಹಕ್ಕೆ ಅಡಚಣೆ, ಮನಸ್ತಾಪ, ಪರಸ್ಥಳ ವಾಸ, ಷೇರು ವ್ಯವಹಾರಗಳಲ್ಲಿ ಲಾಭ.

**ಕುಂಭ:** ಕಾರ್ಯ ವಿಘಾತ, ಸ್ಥಳ ಬದಲಾವಣೆ, ಪಾಪ ಕಾರ್ಯಾಸಕ್ತಿ, ದಾಯಾದಿ ಕಲಹ, ವಿಪರೀತ ಖರ್ಚು, ತಾಯಿ ಕಡೆ ಬಂಧುಗಳಿಂದ ಕಿರಿಕಿರಿ.

**ಮೀನ:** ಬಹು ಸೌಖ್ಯ, ಐಶ್ವರ್ಯ ವೃದ್ಧಿ, ಸ್ವಗೃಹ ವಾಸ, ಸೇವಕರಿಂದ ಸಹಾಯ, ಕೀರ್ತಿ ಲಾಭ, ಶತ್ರುಗಳನ್ನು ಸದೆ ಬಡಿಯುವಿರಿ.

## ವಿಶ್ವ ಚಾಕೊಲೇಟ್ ದಿನ

ಕೆಲವರಿಗೆ ಇದು ಗಾಢ ಮತ್ತು ಕಹಿ ರುಚಿಯನ್ನು ಇಷ್ಟಪಡುತ್ತದೆ, ಇನ್ನು ಕೆಲವರಿಗೆ ನಯವಾದ ಮತ್ತು ಸಿಹಿ ರುಚಿ ಇಷ್ಟವಾಗುತ್ತದೆ, ಆದರೆ ಜುಲೈ 7 ರಂದು ನಡೆಯುವ ಈ ವಿಶ್ವ ಚಾಕೊಲೇಟ್ ದಿನದಂದು ನಿಮ್ಮ ರುಚಿ ಏನೇ ಇರಲಿ, ನಮ್ಮೊಂದಿಗೆ ಸೇರಿ ಸವಿಯಿರಿ. ಕೋಕೋ ಬೀನ್ಸ್ ಮೆಕ್ಸಿಕೊ ಮತ್ತು ದಕ್ಷಿಣ ಮತ್ತು ಮಧ್ಯ ಅಮೆರಿಕಕ್ಕೆ ಸ್ಥಳೀಯವಾಗಿದೆ ಆದರೆ ಈ ಸವಿಯಾದ ಪದಾರ್ಥಕ್ಕಾಗಿ ಹೆಚ್ಚಿನ ಗ್ರಾಹಕರ ಬೇಡಿಕೆಯನ್ನು ಹೊಂದಿಸಲು ಇದನ್ನು ಯುಎಸ್ ಮತ್ತು ಕೆಲವು ಯುರೋಪಿಯನ್ ದೇಶಗಳಿಗೆ ಸ್ಥಳಾಂತರಿಸಲಾಗಿದೆ. ಇದನ್ನು ಇತರ ಕ್ಯಾಂಡಿ ಮತ್ತು ಬೀಜಗಳನ್ನು ಲೇಪಿಸಲು ಬಳಸಲಾಗುತ್ತದೆಯೋ, ಹಣ್ಣಿನ ಮೇಲೆ ಕರಗಿಸಲಾಗುತ್ತದೆಯೋ ಅಥವಾ ಗೌರ್ಮೆಟ್ ಸಿಹಿತಿಂಡಿಯ ಮೇಲೆ ಶೇವ್ ಮಾಡಲಾಗಿದೆಯೋ, ಚಾಕೊಲೇಟ್ ಯಾವಾಗಲೂ ಸೂಕ್ತವಾಗಿರುತ್ತದೆ. ಪ್ರಪಂಚದಾದ್ಯಂತ ಸುಮಾರು 1 ಬಿಲಿಯನ್ ಜನರು ಪ್ರತಿದಿನ ಚಾಕೊಲೇಟ್‌ಗಳನ್ನು ತಿನ್ನುತ್ತಾರೆ. ಇದರ ಉತ್ತಮ ರುಚಿಯ ಜೊತೆಗೆ, ಇದು ಟನ್‌ಗಳಷ್ಟು ಆರೋಗ್ಯ ಪ್ರಯೋಜನಗಳನ್ನು ಹೊಂದಿದೆ. ಚಾಕೊಲೇಟ್‌ಗಳನ್ನು ಕೊಬ್ಬು ಹೆಚ್ಚಿಸುವ ಅಂಶವೆಂದು ಗುರುತಿಸಲಾಗಿದ್ದರೂ, ಆಶ್ಚರ್ಯಕರವಾಗಿ ಅವು ತೂಕ ನಷ್ಟಕ್ಕೆ ಸಹಾಯ ಮಾಡುತ್ತವೆ ಮತ್ತು ಮಧ್ಯಮವಾಗಿ ಸೇವಿಸಿದರೆ ತೂಕವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. 2009 ರಲ್ಲಿ ಸ್ಥಾಪನೆಯಾದ ವಿಶ್ವ ಚಾಕೊಲೇಟ್ ದಿನವು ಈ ಐಕಾನಿಕ್ ಸಿಹಿತಿಂಡಿ 1550 ರಲ್ಲಿ ಯುರೋಪ್‌ಗೆ ಮೊದಲ ಬಾರಿಗೆ ಪ್ರವೇಶಿಸಿದ ದಿನದ ವಾರ್ಷಿಕೋತ್ಸವವನ್ನು ಸೂಚಿಸುತ್ತದೆ. ಈ ದಿನಾಂಕದಂದು ಪ್ರಪಂಚದಾದ್ಯಂತ, ಕ್ಯಾಂಡಿ ಅಂಗಡಿಗಳು ಮತ್ತು ಸ್ಥಳೀಯ ಪೂರೈಕೆದಾರರು ತಮ್ಮ ಅತ್ಯಂತ ಪ್ರೀತಿಯ ಸರಕುಗಳನ್ನು ಮಾರಾಟಕ್ಕೆ ಇಡುತ್ತಾರೆ, ಇದರಿಂದಾಗಿ ಯುವಕರು ಮತ್ತು ಹಿರಿಯರು ಎಲ್ಲರೂ ಈ ವಸ್ತುವನ್ನು ಸವಿಯಬಹುದು. ಚಾಕೊಲೇಟ್ ಥಿಯೋಬ್ರೊಮಾ ಕೋಕೋ ಮರದ ಬೀಜದಿಂದ ಬರುತ್ತದೆ. ಕೋಕೋ ಮೆಕ್ಸಿಕೊ, ಮಧ್ಯ ಅಮೆರಿಕ ಮತ್ತು ಉತ್ತರ ದಕ್ಷಿಣ ಅಮೆರಿಕಾದಲ್ಲಿ ಬೆಳೆಯುತ್ತದೆ, ಅಲ್ಲಿ ಇದನ್ನು ಕನಿಷ್ಠ ಮೂರು ಸಹಸ್ರಮಾನಗಳಿಂದ ಬೆಳೆಸಲಾಗುತ್ತಿದೆ. ಆದಾಗ್ಯೂ, ಆಫ್ರಿಕಾವು ಇಂದು ಜಗತ್ತಿನಲ್ಲಿ ಬೆಳೆಯುತ್ತಿರುವ ಕೋಕೋ ಮರಗಳಲ್ಲಿ 70% ಅನ್ನು ಹೊಂದಿದೆ. ಕೋಕೋ ಬೀಜಗಳನ್ನು ಬಳಸುವ ಬಗ್ಗೆ ತಿಳಿದಿರುವ ಆರಂಭಿಕ ಅವಲೋಕನವು ಸುಮಾರು 1100 ಃಅ ಯಿಂದ ಬಂದಿದೆ. ಮರದ ಬೀಜಗಳು ತುಂಬಾ ಗಂಭೀರವಾದ, ಕಹಿ ರುಚಿಯನ್ನು ಹೊಂದಿರುತ್ತವೆ ಮತ್ತು ಪರಿಮಳವನ್ನು ಅಭಿವೃದ್ಧಿಪಡಿಸಲು ಹುದುಗಿಸಬೇಕು. ಚಾಕೊಲೇಟ್ ಬಾರ್ ತಯಾರಿಸಲು, ಕೋಕೋ ಮರದ ಬೀಜಗಳನ್ನು ಬಾಳೆ ಎಲೆಗಳಿಂದ ಮುಚ್ಚಿ ಹುದುಗಿಸಲು ಬಿಡಲಾಗುತ್ತದೆ, ಆ ಸಮಯದಲ್ಲಿ ಅವುಗಳನ್ನು ಕೋಕೋ ಬೀನ್ಸ್ ಎಂದು ಕರೆಯಲಾಗುತ್ತದೆ. ಕೋಕೋ ಬೀನ್ಸ್ ತಮ್ಮ ಸಂಸ್ಕರಣಾ ಘಟಕಕ್ಕೆ ಬಂದ ನಂತರ, ಅವುಗಳನ್ನು ಕಡಿಮೆ ತಾಪಮಾನದಲ್ಲಿ ನಿಧಾನವಾಗಿ ಹುರಿಯಲಾಗುತ್ತದೆ. ನಂತರ ಚಿಪ್ಪುಗಳನ್ನು ನಿಬ್‌ಗಳಿಂದ ಬೇರ್ಪಡಿಸುವ ಸಮಯ, ಇದರಿಂದ ನಿಬ್‌ಗಳನ್ನು ಕೋಕೋ ಲಿಕ್ಕರ್ ಎಂಬ ಸೂಕ್ಷ್ಮ ಪುಡಿಗೆ ಪುಡಿಮಾಡಬಹುದು, ಇದು ಒರಟಾದ ರೂಪದಲ್ಲಿ ಶುದ್ಧ ಚಾಕೊಲೇಟ್ ಆಗಿರುತ್ತದೆ. ನಂತರ ಚಾಕೊಲೇಟ್ ಮದ್ಯವನ್ನು ಎರಡು ಘಟಕಗಳಾಗಿ ಸಂಸ್ಕರಿಸಲಾಗುತ್ತದೆ - ಕೋಕೋ ಬೆಣ್ಣೆ ಮತ್ತು ಕೋಕೋ ಘನವಸ್ತುಗಳು.

# ಬ್ರಿಕ್ಸ್‌ಶೃಂಗಸಭೆಗೆ ಕ್ಸಿಜಿಂಪಿಂಗ್ ಗೈರು



**ಬ್ರಸೀಲಿಯಾ:** ಬ್ರೆಝಿಲ್ ನ ರಿಯೊಡಿ ಜನ್ಯೆರೋದಲ್ಲಿ ರವಿವಾರ ಆರಂಭಗೊಂಡಿರುವ ಬ್ರಿಕ್ಸ್ ಶೃಂಗಸಭೆಗೆ ಚೀನಾ ಅಧ್ಯಕ್ಷ ಕ್ಸಿ ಜಿಂಪಿಂಗ್ ಗೈರು ಹಾಜರಾಗಿರುವುದು ಚೀನಾದಲ್ಲಿ ಅಧಿಕಾರ ಬದಲಾವಣೆಯ ಸಾಧ್ಯತೆಯಿದೆ ಎಂಬ ವರದಿಗೆ ಪುಷ್ಟಿ ನೀಡಿದೆ.

ಜಿಂಪಿಂಗ್ 12 ವರ್ಷದಲ್ಲಿ ಇದೇ ಮೊದಲ ಬಾರಿಗೆ ಬ್ರಿಕ್ಸ್ ಶೃಂಗಸಭೆಯಲ್ಲಿ ಪಾಲ್ಗೊಳ್ಳುತ್ತಿಲ್ಲ. ಚೀನಾದ ಪ್ರೀಮಿಯರ್ ಲಿ ಕ್ವಿಯಾಂಗ್ ಚೀನಾದ ಉನ್ನತ ಮಟ್ಟದ ನಿಯೋಗದ ನೇತೃತ್ವ ವಹಿಸಿದ್ದಾರೆ ಎಂದು ಚೀನಾದ ಕಮ್ಯುನಿಸ್ಟ್ ಪಕ್ಷದ ಹೇಳಿಕೆ ತಿಳಿಸಿದೆ. ಆಡಳಿತರೂಢ ಕಮ್ಯುನಿಸ್ಟ್ ಪಾರ್ಟಿ ಆಫ್ ಚೀನಾದ(ಸಿಪಿಸಿ) 24 ಸದಸ್ಯರ ಪ್ರಬಲ ಪೊಲಿಟಿಕಲ್ ಬ್ಯೂರೋ ಜೂನ್ 30ರ ಸಭೆಯಲ್ಲಿ ಪಕ್ಷದ ಸಂಸ್ಥೆಗಳ ಕೆಲಸದ ಕುರಿತು ಹೊಸ ನಿಯಮಗಳನ್ನು ಪರಿಶೀಲಿಸಿದೆ ಎಂದು ಸರ್ಕಾರಿ ಸ್ವಾಮ್ಯದ ಕ್ಸಿನ್ಹುವಾ ಸುದ್ದಿಸಂಸ್ಥೆ ವರದಿ ಮಾಡಿದೆ. ಈ ಮಧ್ಯೆ, ರಶ್ಯ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರೂ ಬ್ರಿಕ್ಸ್ ಶೃಂಗಸಭೆಗೆ ಗೈರು ಹಾಜರಾಗಿರುವುದಾಗಿ ರಶ್ಯದ ಮಾಧ್ಯಮಗಳು ವರದಿ ಮಾಡಿವೆ.

# ಪ್ರಧಾನಿ ಮೋದಿಗೆ ಭವ್ಯ ಸ್ವಾಗತ

**ನವದೆಹಲಿ:** ಭಾನುವಾರ ಬ್ರೆಜಿಲ್‌ನ ರಿಯೊ ಡಿ ಜನೈರೊಗೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಭಾರತೀಯ ಸಮುದಾಯದಿಂದ ಭವ್ಯ ಸ್ವಾಗತ ದೊರೆಯಿತು. ಪ್ರಧಾನಿ ಮೋದಿ ತಮ್ಮ ನಾಲ್ಕು ದಿನಗಳ ಭೇಟಿಯನ್ನು ಪ್ರಾರಂಭಿಸಿದ್ದಾರೆ, ಈ ಸಮಯದಲ್ಲಿ ಅವರು 17 ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಿ ರಾಜ್ಯ ಭೇಟಿಯನ್ನು ಕೈಗೊಳ್ಳಲಿದ್ದಾರೆ.



ಭಾನುವಾರ ಪ್ರಧಾನಿ ಮೋದಿ ಅವರನ್ನು ಬ್ರೆಜಿಲ್ ಗೆ ಸ್ವಾಗತಿಸುತ್ತಾ ಭಾರತೀಯ ವಲಸಿಗರು ಸಾಂಸ್ಕೃತಿಕ ನೃತ್ಯ ಮತ್ತು ಜಾನಪದ ಗೀತೆಗಳನ್ನು ಪ್ರದರ್ಶಿಸಿದರು. ಕಾರ್ಯಕ್ರಮದ ವೀಡಿಯೊವನ್ನು ಸುದ್ದಿ ಸಂಸ್ಥೆ ಎಎನ್‌ಐ ನಲ್ಲಿ ಹಂಚಿಕೊಂಡಿದೆ.ಒಂದು ನೃತ್ಯ ಪ್ರದರ್ಶನವು ಆಪರೇಷನ್ ಸಿಂಧೂರ್ ಥೀಮ್ ಅನ್ನು ಆಧರಿಸಿತ್ತು, 'ಯೇ ದೇಶ್ ನ್ಹಿ ಮಿಟ್ನೆ ಡುಂಗಾ' ಸ್ಥಳದಲ್ಲಿ ಪ್ರತಿಧ್ವನಿಸಿತು.

# ಕೇರಳ ಬಿಟ್ಟು ಹೊರಡದ ಎಫ್-35 ಫೈಟರ್ ಜೆಟ್!

**ತಿರುವನಂತಪುರಂ(ಕೇರಳ):** ತಾಂತ್ರಿಕ ಸಮಸ್ಯೆಯಿಂದಾಗಿ ಇಲ್ಲೇ ಸಿಲುಕಿರುವ ಬ್ರಿಟಿಷ್ ರಾಯಲ್ ನೇವಿ ಫೈಟರ್ ಜೆಟ್ (ಈ-35 ಬಿ) ಅನ್ನು ಇಂದು ಇಲ್ಲಿನ ಗೊತ್ತುಪಡಿಸಿದ ಸೌಲಭ್ಯಕ್ಕೆ ಸ್ಥಳಾಂತರಿಸಲಾಯಿತು. ಇಲ್ಲಿ ಬ್ರಿಟಿಷ್ ಎಂಜಿನಿಯರ್ ಗಳು ಫೈಟರ್ ಜೆಟ್ ನ ತಾಂತ್ರಿಕ ತೊಂದರೆಗಳನ್ನು ಪರೀಕ್ಷಿಸಲಿದ್ದಾರೆ ಎಂದು ವಿಮಾನ ನಿಲ್ದಾಣದ ಮೂಲಗಳು ಮಾಹಿತಿ ನೀಡಿವೆ.ಸುಮಾರು ಒಂದು ತಿಂಗಳ ಹಿಂದೆ ತಿರುವನಂತಪುರಂ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ತುರ್ತು ಲ್ಯಾಂಡಿಂಗ್ ಆದ ಎಫ್-35 ಬಿ ಲೈಟ್ನಿಂಗ್ ಫೈಟರ್ ಜೆಟ್ ನ ಸಮಸ್ಯೆ ನಿರ್ಣಯಿಸುವುದು ಮತ್ತು ದುರಸ್ತಿಗೆ ಯುಕೆಯ ಎಂಜಿನಿಯರಿಂಗ್ ತಂಡ ಇಂದು ತಿರುವನಂತಪುರಂ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದೆ. ಈ ವಿಚಾರವನ್ನು ಬ್ರಿಟಿಷ್ ಹೈಕಮಿಷನ್ ವಕ್ತಾರರು ದೃಢಪಡಿಸಿದ್ದಾರೆ. ತಿರುವನಂತಪುರಂ ವಿಮಾನ ನಿಲ್ದಾಣದ ನಿರ್ವಹಣೆ ದುರಸ್ತಿ ಮತ್ತು ಪರೀಕ್ಷಾ (ಎಂಆರ್‌ಒ) ಸೌಲಭ್ಯದಲ್ಲಿ ಫೈಟರ್ ಜೆಟ್ ದುರಸ್ತಿ ಕಾರ್ಯಕ್ಕೆ ಅಗತ್ಯ ಸ್ಥಳಾವಕಾಶ ನೀಡಿರುವುದನ್ನು ಯುಕೆ ಒಪ್ಪಿಕೊಂಡಿದೆ. ಇದಕ್ಕಾಗಿ ಸಂಬಂಧಿಸಿದ ಅಧಿಕಾರಿಗಳೊಂದಿಗೆ ವ್ಯವಸ್ಥೆಗಳನ್ನು ಅಂತಿಮಗೊಳಿಸುವ ಕುರಿತು ಮಾತುಕತೆ ನಡೆಯುತ್ತಿದೆ ಎಂದು ಹೇಳಿದೆ. ಭಾರತೀಯ ಅಧಿಕಾರಿಗಳು ಮತ್ತು ಇಲ್ಲಿನ ವಿಮಾನ ನಿಲ್ದಾಣದ ಅಧಿಕಾರಿಗಳ ನಿರಂತರ ಬೆಂಬಲ ಮತ್ತು ಸಹಕಾರಕ್ಕಾಗಿ ಯುಕೆ ಕೃತಜ್ಞತೆ ತಿಳಿಸುತ್ತಿದೆ ಎಂದು ಬ್ರಿಟಿಷ್ ಹೈಕಮಿಷನ್ ಹೇಳಿಕೆ ಬಿಡುಗಡೆ ಮಾಡಿದೆ.

ಜೂನ್ 14ರಂದು ತಿರುವನಂತಪುರಂ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಎಫ್-35 ತುರ್ತು ಭೂಸ್ಪರ್ಶ ಮಾಡಿತ್ತು. ತಾಂತ್ರಿಕ ದೋಷದ ಹಿನ್ನೆಲೆಯಲ್ಲಿ ಟೇಕಾಫ್ ಆಗದೇ ದುರಸ್ತಿಗಾಗಿ ವಿಮಾನ ನಿಲ್ದಾಣದಲ್ಲೇ ಠಿಕಾಣಿ ಹೂಡಿದೆ. ಫೈಟರ್ ಜೆಟ್ ಕೇರಳದಲ್ಲೇ ಬಾಕಿ ಉಳಿದಿರುವುದು ಸಾಕಷ್ಟು ಟ್ರೋಲ್ ಗೂ ಆಹಾರವಾಗುತ್ತಿದೆ.



# ಟೆಕ್ಸಾಸ್ ಭೀಕರ ಪ್ರವಾಹ: 51 ಮಂದಿ ಸಾವು



ಕರ್ವಿಲ್ (ಅಮೆರಿಕ):ಕೇಂದ್ರ ಟೆಕ್ಸಾಸ್‌ನಲ್ಲಿ ಹಠಾತ್ ಪ್ರವಾಹದಿಂದ ಬುಡಮೇಲಾಗಿರುವ ಮರಗಳು. ಪಲ್ಟಿಗೊಂಡಿರುವ ಕಾರುಗಳು ಕೆಸರು ತುಂಬಿದ ಅವಶೇಷಗಳ ಮಧ್ಯೆ ರಕ್ಷಣಾ ಕಾರ್ಯಾಚರಣೆ ಮುಂದುವರೆದಿದೆ. ಕ್ರಿಶ್ಚಿಯನ್ ಬೇಸಿಗೆ ಶಿಬಿರ ಕ್ಯಾಂಪ್‌ನಲ್ಲಿದ್ದ 27 ಹುಡುಗಿಯರು ನಾಪತ್ತೆಯಾಗಿದ್ದು ಅವರನ್ನು ಪತ್ತೆ ಹಚ್ಚುವ ಶೋಧ ನಡೆಯುತ್ತಿದೆ.

ಕೇರ್‌ಕೌಂಟಿಯಲ್ಲಿ ಕನಿಷ್ಠ 43 ಜನರು ಸಾವನ್ನಪ್ಪಿದ್ದು, ಇದರಲ್ಲಿ 15 ಮಕ್ಕಳು ಸೇರಿದ್ದಾರೆ. ಇದೇ ಪ್ರದೇಶದ ಸುತ್ತ ಮುತ್ತಲಿನಲ್ಲಿ 8 ಜನರು ಮೃತಪಟ್ಟಿದ್ದಾರೆ. ಹೆಲಿಕಾಪ್ಟರ್, ಬೋಟ್, ಡ್ರೋನ್‌ಗಳನ್ನು ಬಳಸಿ ಸಂತ್ರಸ್ತರನ್ನು ರಕ್ಷಿಸಲಾಗುತ್ತಿದೆ.

ಗವರ್ನರ್ ಗ್ರೆಗ್ ಅಬಾಟ್, ಈ ಭಾನುವಾರ ಪ್ರತಿಯೊಬ್ಬ ಟೆಕ್ಸಾಸ್ ನಿವಾಸಿ ನನ್ನೊಂದಿಗೆ ಸಂತ್ರಸ್ತರಿಗಾಗಿ, ಪ್ರಾಣ ಕಳೆದುಕೊಂಡವರಿಗಾಗಿ, ಇನ್ನೂ ಕಾಣೆಯಾಗಿರುವವರ ಸುರಕ್ಷತೆಗಾಗಿ ಪ್ರಾರ್ಥನೆಯಲ್ಲಿ ಪಾಲ್ಗೊಳ್ಳಬೇಕೆಂದು ನಾನು ಮನವಿ ಮಾಡಿಕೊಳ್ಳುತ್ತಿದ್ದೇನೆ ಎಂದು ಹೇಳಿದ್ದಾರೆ.

ಕೇಂದ್ರ ಟೆಕ್ಸಾಸ್‌ನ ಗ್ವಾಡಾಲುಪೆ ನದಿಯ ಉದ್ದಕ್ಕೂ ಇಲ್ಲಿ ಬೆಟ್ಟಗಳಿದ್ದು, ಈ ಪ್ರದೇಶ ಯುವ ಶಿಬಿರ, ಕ್ಯಾಂಪ್‌ಗಳಿಗೆ ಪ್ರಸಿದ್ಧಿ. ಅದರಲ್ಲೂ ಈ ತಿಂಗಳ ಆರಂಭದಲ್ಲಿ ರಜಾ ದಿನಗಳಿದ್ದು, ಸಮಯ ಕಳೆಯಲೆಂದು ಪ್ರವಾಸಿಗರು, ವಿದ್ಯಾರ್ಥಿಗಳು ಹೆಚ್ಚಾಗಿ ಆಗಮಿಸುತ್ತಾರೆ. ಇದೇ ಸಮಯಕ್ಕೆ ಪ್ರವಾಹ ಬಂದೊದಗಿದ್ದು, ಕಾಣೆಯಾದವರ ಸಂಖ್ಯೆಯನ್ನು ಅಂದಾಜು ಮಾಡುವುದು ಕ್ಲಿಷ್ಟಕರವಾಗಿದೆ.

ಪ್ರತ್ಯಕ್ಷದರ್ಶಿ 13 ವರ್ಷದ ಎಲಿನಾರ್ ಲೆಸ್ಟರ್ ಅಲ್ಲಿನ ಭಯಾನಕತೆಯನ್ನು ಬಿಚ್ಚಿಟ್ಟಿದ್ದಾರೆ. ಶಿಬಿರವು ಪ್ರವಾಹಕ್ಕೆ ಸಂಪೂರ್ಣ ನಾಶವಾಯಿತು. ಒಂದು ಹೆಲಿಕಾಪ್ಟರ್ ಬಂದು ಜನರನ್ನು ಕರೆದೊಯ್ಯಲು ಪ್ರಾರಂಭಿಸಿತು. ಅದು ನಿಜವಾಗಿಯೂ ಭಯಾನಕವಾಗಿತ್ತು. ರಕ್ಷಣಾ ಕಾರ್ಯಕರ್ತರು ಬಂದಾಗ, ಕಾಲುಗಳ ಸುತ್ತ ನೀರು ರಭಸವಾಗಿ ಹರಿಯುತ್ತಿತ್ತು. ಸೇತುವೆಯನ್ನು ದಾಟಲು ಹಗ್ಗವನ್ನು ಕಟ್ಟಲಾಯಿತು ಎಂದು ಅವರು ವಿವರಿಸಿದ್ದಾರೆ.

## ಅಮೆರಿಕ ವಿರೋಧಿ ನೀತಿಗಳ ಬೆಂಬಲಿಸುವ ದೇಶಗಳ ಮೇಲೆ ಶೇ.10 ಹೆಚ್ಚುವರಿ ಸುಂಕ

# ಬ್ರಿಕ್ಸ್ ರಾಷ್ಟ್ರಗಳಿಗೆ ಟ್ರಂಪ್ ಎಚ್ಚರಿಕೆ

**ಬ್ರೆಜಿಲ್:** ಬ್ರೆಜಿಲ್ ನಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆ ಬಳಿಕ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಬ್ರಿಕ್ಸ್ ದೇಶಗಳಿಗೆ ದೊಡ್ಡ ಎಚ್ಚರಿಕೆ ನೀಡಿದ್ದಾರೆ. ಬ್ರಿಕ್ಸ್ ದೇಶಗಳು ಅಮೆರಿಕ ವಿರೋಧಿ ನೀತಿಯನ್ನು ಬೆಂಬಲಿಸಿದರೆ, ಆ ದೇಶಗಳ ಮೇಲೆ ಹೆಚ್ಚುವರಿಯಾಗಿ ಶೇ.10ರಷ್ಟು ಸುಂಕವನ್ನು ವಿಧಿಸಲಾಗುವುದು ಎಂದು ಹೇಳಿದ್ದಾರೆ.



ಬ್ರಿಕ್ಸ್ ಶೃಂಗಸಭೆಯಲ್ಲಿ ಇರಾನ್ ಮೇಲಿನ ಅಮೆರಿಕ ಮತ್ತು ಇಸ್ರೇಲ್ ದಾಳಿಯನ್ನು ಖಂಡಿಸಿದ ಬಳಿ ಅಸಮಾಧಾನ ವ್ಯಕ್ತಪಡಿಸಿದ ಟ್ರಂಪ್ ಬ್ರಿಕ್ಸ್ ದೇಶಗಳಿಗೆ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ. ಅಮೆರಿಕ ವಿರೋಧಿ ನೀತಿಗಳನ್ನು ಬೆಂಬಲಿಸುವ ಯಾವುದೇ ದೇಶಕ್ಕೆ ಹೆಚ್ಚುವರಿಯಾಗಿ ಶೇ. 10 ಹೆಚ್ಚುವರಿ ಸುಂಕ ವಿಧಿಸಲಾಗುತ್ತದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಟ್ರೂತ್ ಸೋಷಿಯಲ್‌ನಲ್ಲಿ ಬರೆದಿದ್ದಾರೆ. ಇದಕ್ಕೆ ಯಾವುದೇ ವಿನಾಯಿತಿ ಇರುವುದಿಲ್ಲ ಎಂದು ಬರೆದಿದ್ದಾರೆ.

ಟ್ರಂಪ್ ಈ ಹೇಳಿಕೆಯಲ್ಲಿ ಅಮೆರಿಕ ವಿರೋಧಿ ನೀತಿಗಳು ಎಂದರೆ ಏನೆಲ್ಲಾ ಅಡಕವಾಗಿರುತ್ತದೆ ಎಂಬುದನ್ನು ಸ್ಪಷ್ಟಪಡಿಸಿಲ್ಲ. ಡೊನಾಲ್ಡ್ ಟ್ರಂಪ್ ಹೇಳಿಕೆ ನೀಡುವ ಒಂದು ದಿನದ ಮೊದಲು ಬ್ರಿಕ್ಸ್ (ಬ್ರೆಜಿಲ್, ರಷ್ಯಾ, ಭಾರತ, ಚೀನಾ, ದಕ್ಷಿಣ ಆಫ್ರಿಕಾ)ನಾಯಕರು ಅಮೆರಿಕದ ಅನಿಯಂತ್ರಿತ ಸುಂಕ ನೀತಿಯನ್ನು ಟೀಕಿಸಿದ್ದರು. ಮಧ್ಯಪ್ರಾಚ್ಯದಲ್ಲಿ ಇಸ್ರೇಲ್‌ನ ಮಿಲಿಟರಿ ಕ್ರಮವನ್ನು ಟೀಕಿಸಲಾಯಿತು.

ಶೃಂಗಸಭೆಯ ಮೊದಲು, ಬ್ರಿಕ್ಸ್ ದೇಶಗಳು ಅಮೆರಿಕದ ಮೇಲೆ ನೇರವಾಗಿ ದಾಳಿ ಮಾಡಲಿಲ್ಲ ಆದರೆ ಹೆಚ್ಚುತ್ತಿರುವ ಸುಂಕವು ಜಾಗತಿಕ ವ್ಯಾಪಾರದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ ಮತ್ತು ಅದು ಡಬ್ಲ್ಯುಟಿಒ ನಿಯಮಗಳಿಗೆ ವಿರುದ್ಧವಾಗಿದೆ ಎಂದು ಅವರು ಹೇಳಿದರು. ಬ್ರೆಜಿಲ್ ಅಧ್ಯಕ್ಷ ಲುಲಾ ಡ ಸಿಲ್ವಾ ಮಿಲಿಟರಿ ವೆಚ್ಚವನ್ನು ಹೆಚ್ಚಿಸುವ ನ್ಯಾಟೋ ನಿರ್ಧಾರವನ್ನು ಟೀಕಿಸಿದರು.

ಈ ಬಾರಿಯ ಬ್ರಿಕ್ಸ್ ಶೃಂಗಸಭೆಯನ್ನು ಬ್ರೆಜಿಲ್ ಆಯೋಜಿಸಿದ್ದು ಗಮನಿಸಬೇಕಾದ ಸಂಗತಿ, ಇದರಲ್ಲಿ ಹಳೆಯ 5 ದೇಶಗಳಲ್ಲದೆ (ಬ್ರೆಜಿಲ್, ರಷ್ಯಾ, ಭಾರತ, ಚೀನಾ, ದಕ್ಷಿಣ ಆಫ್ರಿಕಾ), ಹೊಸ ಸದಸ್ಯ ರಾಷ್ಟ್ರಗಳಾದ ಈಜಿಪ್ಟ್, ಇಥಿಯೋಪಿಯಾ, ಇರಾನ್, ಯುಎಇ ಮತ್ತು ಇಂಡೋನೇಷ್ಯಾ ಭಾಗವಹಿಸಿದ್ದವು. ಜನವರಿ 1, 2025 ರಂದು ಬ್ರೆಜಿಲ್ ಬ್ರಿಕ್ಸ್‌ನ ಅಧ್ಯಕ್ಷತೆಯನ್ನು ವಹಿಸಿಕೊಂಡಿತ್ತು.

2009 ರಲ್ಲಿ ನಡೆದ ತನ್ನ ಮೊದಲ ಶೃಂಗಸಭೆಯಲ್ಲಿ ಬ್ರೆಜಿಲ್, ರಷ್ಯಾ, ಭಾರತ ಮತ್ತು ಚೀನಾದ ನಾಯಕರನ್ನು ಒಟ್ಟುಗೂಡಿಸಿತು. ಬಳಿಕ ಇದಕ್ಕೆ ದಕ್ಷಿಣ ಆಫ್ರಿಕಾ ಸೇರಿಕೊಂಡಿತು. ಕಳೆದ ವರ್ಷ ಈಜಿಪ್ಟ್, ಇಥಿಯೋಪಿಯಾ, ಇಂಡೋನೇಷ್ಯಾ, ಇರಾನ್, ಸೌದಿ ಅರೇಬಿಯಾ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ಮತ್ತು ಇಂಡೋನೇಷ್ಯಾವನ್ನು ಸದಸ್ಯರನ್ನಾಗಿ ಸೇರಿಸಿತು.

# ಹೊಸ ರಾಜಕೀಯ ಪಕ್ಷ ಘೋಷಿಸಿದ ಉದ್ಯಮಿ ಎಲಾನ್ ಮಸ್ಕ್!

**ವಾಷಿಂಗ್ಟನ್(ಅಮೆರಿಕ):** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮಾಜಿ ಬೆಂಬಲಿಗ ಉದ್ಯಮಿ ಎಲಾನ್ ಮಸ್ಕ್ ಹೊಸ ರಾಜಕೀಯ ಪಕ್ಷವನ್ನು ಘೋಷಿಸಿದ್ದಾರೆ.



ನಿಮ್ಮ ಸ್ವಾತಂತ್ರ್ಯವನ್ನು ಮರಳಿ ನಿಮಗೆ ನೀಡುವ ಉದ್ದೇಶದಿಂದ ಅಮೆರಿಕ ಪಾರ್ಟಿಯನ್ನು ಸ್ಥಾಪಿಸಲಾಗಿದೆ. ನಿಮಗೆ ಹೊಸ ರಾಜಕೀಯ ಪಕ್ಷ ಅಗತ್ಯವಿದೆ. ಖಂಡಿತ ಅದು ಆಗುತ್ತದೆ. ನಮ್ಮ ದೇಶವನ್ನು ವ್ಯರ್ಥ ಮತ್ತು ಭ್ರಷ್ಟಾಚಾರದಿಂದ ದಿವಾಳಿ ಮಾಡುತ್ತಿರುವುದನ್ನು ಗಮನಿಸಿದರೆ, ನಾವು ಪ್ರಜಾಪ್ರಭುತ್ವದಲ್ಲಿ ಅಲ್ಲ, ಏಕಪಕ್ಷ ಆಡಳಿತ ವ್ಯವಸ್ಥೆಯಲ್ಲಿದ್ದೇವೆ ಎಂದನಿಸುತ್ತದೆ. ಹೀಗಾಗಿ, ಇಂದು ನಿಮ್ಮ ಸ್ವಾತಂತ್ರ್ಯವನ್ನು ನಿಮಗೆ ಮರಳಿ ನೀಡಲು ಅಮೆರಿಕ ಪಕ್ಷ ಸ್ಥಾಪಿಸಲಾಗಿದೆ ಎಂದು ಎಕ್ಸ್ ಪೋಸ್ಟ್‌ನಲ್ಲಿ ಎಲಾನ್ ಮಸ್ಕ್ ಪ್ರಕಟಿಸಿದ್ದಾರೆ.

ಇದರ ಜೊತೆಗೆ ಮಸ್ಕ್ ಎರಡು ತಲೆಯ ಹಾವನ್ನು ತೋರಿಸುವ ಮೀಮ್ ಮತ್ತು ಏಕಪಕ್ಷ ಆಡಳಿತವನ್ನು ಕೊನೆಗೊಳಿಸಿ ಎಂಬ ಶೀರ್ಷಿಕೆಯನ್ನು ಸಹ ಹಂಚಿಕೊಂಡಿದ್ದಾರೆ.

ಇದಕ್ಕೂ ಮುನ್ನ ಜುಲೈ 4ರಂದು ಅಮೆರಿಕದ ಸ್ವಾತಂತ್ರ್ಯ ದಿನಾಚರಣೆ ಸಂದರ್ಭದಲ್ಲಿ ಅಪ್‌ಲೋಡ್ ಮಾಡಲಾದ ಸಮೀಕ್ಷೆಯನ್ನು ಮಸ್ಕ್ ಉಲ್ಲೇಖಿಸಿದ್ದಾರೆ. ಎರಡು ಶತಮಾನಗಳಿಂದ ಅಮೆರಿಕದ ರಾಜಕೀಯದಲ್ಲಿ ಪ್ರಾಬಲ್ಯ ಹೊಂದಿರುವ ದ್ವಿಪಕ್ಷೀಯ ವ್ಯವಸ್ಥೆ (ಕೆಲವರು ಏಕಪಕ್ಷ ಎಂದೂ ಕರೆಯುತ್ತಾರೆ)ಯಿಂದ ಸ್ವಾತಂತ್ರ್ಯ ಬಯಸುತ್ತೀರಾ ಎಂದು ಕೇಳಿದ್ದರು. ಹೌದು ಅಥವಾ ಇಲ್ಲ ಎಂಬ ಈ ಸಮೀಕ್ಷೆಗೆ 1.2 ಮಿಲಿಯನ್‌ಗಿಂತಲೂ ಹೆಚ್ಚು ಪ್ರತಿಕ್ರಿಯೆ ಬಂದಿತ್ತು. ವಿಶ್ವದ ಅತ್ಯಂತ ಶ್ರೀಮಂತ ವ್ಯಕ್ತಿ ಮತ್ತು 2024ರಲ್ಲಿ ಟ್ರಂಪ್ ಪ್ರಚಾರಕ್ಕೆ ಅತ್ಯಧಿಕ ದೇಣಿಗೆ ನೀಡಿದ್ದ ಮಸ್ಕ್, ಫೆಡರಲ್ ವೆಚ್ಚವನ್ನು ಕಡಿತಗೊಳಿಸುವ ಮತ್ತು ಸರ್ಕಾರಿ ಉದ್ಯೋಗಗಳನ್ನು ತೆಗೆಯುವ ಉದ್ದೇಶದ ಸರ್ಕಾರಿ ಕ್ಷಮತಾ ಇಲಾಖೆ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸಿದ್ದರು. ಬಳಿಕ ಭಿನ್ನಾಭಿಪ್ರಾಯದಿಂದ ಟ್ರಂಪ್ ಅವರಿಂದ ಇತ್ತೀಚೆಗೆ ದೂರವಾಗಿದ್ದರು.

# ಚಂದ್ರಚೂಡ್ ಅವರಿಗೆ ಬಂಗಲೆ ಖಾಲಿ ಮಾಡುವಂತೆ ಸುಪ್ರೀಂ ಪತ್ರ

**ನವದೆಹಲಿ:** ಇಲ್ಲಿನ ಕೃಷ್ಣ ಮೆನನ್ ರಸ್ತೆಯಲ್ಲಿರುವ ಮುಖ್ಯ ನ್ಯಾಯಮೂರ್ತಿಗಳ ನಿವಾಸದಲ್ಲಿ ಮಾಜಿ ಸಿಜೆಐ ಡಿ. ವೈ. ಚಂದ್ರಚೂಡ್ ಅವರು ಅನುಮತಿಸಲಾದ ಅವಧಿ ಮೀರಿ ವಾಸಿಸುತ್ತಿರುವುದನ್ನು ಗಮನಿಸಿರುವ ಸುಪ್ರೀಂಕೋರ್ಟ್ ಆಡಳಿತ, ನಿವಾಸ ಖಾಲಿ ಮಾಡಿಸುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದೆ. 2022 ನವೆಂಬರ್‌ನಿಂದ 2024 ನವೆಂಬರ್ ನಡುವೆ 50ನೇ ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿರುವ ಚಂದ್ರಚೂಡ್, ನಿವೃತ್ತಿಯಾಗಿ ಸುಮಾರು ಎಂಟು ತಿಂಗಳ ಕಳೆದರೂ ಸಿಜೆಐ ಅಧಿಕೃತ ನಿವಾಸದಲ್ಲಿ ವಾಸಿಸುತ್ತಿದ್ದಾರೆ. ಚಂದ್ರಚೂಡ್ ಅವರ ನಂತರ ಅಧಿಕಾರ ವಹಿಸಿಕೊಂಡಿದ್ದ ಮಾಜಿ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ತಮ್ಮ ಆರು ತಿಂಗಳ ಅಧಿಕಾರಾವಧಿಯಲ್ಲಿ ಸಿಜೆಐ ಅಧಿಕೃತ ನಿವಾಸಕ್ಕೆ ಸ್ಥಳಾಂತರಗೊಳ್ಳದಿರಲು ನಿರ್ಧರಿಸಿದರು. ಹಾಲಿ ಸಿಜೆಐ ಬಿ.ಆರ್. ಗವಾಯಿ ಕೂಡ ಹಿಂದೆ ಹಂಚಿಕೆಯಾದ ಬಂಗಲೆಯಲ್ಲಿ ಇರಲು ನಿರ್ಧರಿಸಿದ್ದರು.ಮೂಲಗಳ ಪ್ರಕಾರ, ಸುಪ್ರೀಂಕೋರ್ಟ್ ಆಡಳಿತವು ಜುಲೈ 1 ರಂದು ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯಕ್ಕೆ (ಎಂಒಎಚ್‌ಯುಎ) ಬರೆದ ಪತ್ರದಲ್ಲಿ, ಕೃಷ್ಣ ಮೆನನ್ ರಸ್ತೆಯಲ್ಲಿರುವ ಹಾಲಿ ಸಿಜೆಐ ನಿವಾಸವಾದ ಬಂಗಲೆ ಸಂಖ್ಯೆ 5 ಅನ್ನು ಖಾಲಿ ಮಾಡಿ ನ್ಯಾಯಾಲಯದ ವಸತಿ ಪೂಲ್‌ಗೆ ಹಿಂತಿರುಗಿಸಬೇಕೆಂದು ತಿಳಿಸಿದೆ. ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳ ನಿಯಮಗಳು, 2022ರ ನಿಯಮ 3ಃ ಅಡಿಯಲ್ಲಿ, ಭಾರತದ ನಿವೃತ್ತ ಮುಖ್ಯ ನ್ಯಾಯಮೂರ್ತಿಗಳು ಕೃಷ್ಣ ಮೆನನ್ ಮಾರ್ಗದ ನಿವಾಸದ ಕೆಳಗಿನ 8ನೇ ಬಂಗಲೆಯನ್ನು ನಿವೃತ್ತಿಯ ನಂತರ ಗರಿಷ್ಠ ಆರು ತಿಂಗಳ ಕಾಲ ಇರಬಹುದು. ಸದ್ಯ ಈ ಅವಧಿ ಮುಗಿದಿರುವುದರಿಂದ ಸುಪ್ರೀಂಕೋರ್ಟ್ ಆಡಳಿತವು ಯಾವುದೇ ವಿಳಂಬವಿಲ್ಲದೆ ಮಾಜಿ ಸಿಜೆಐ ಅವರಿಂದ ಬಂಗಲೆಯನ್ನು ಸ್ವಾಧೀನಪಡಿಸಿಕೊಳ್ಳುವಂತೆ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿಗೆ ಸೂಚಿಸಿದೆ. ವಾಸ್ತವ್ಯ ಇರಲು ಚಂದ್ರಚೂಡ್ ಅವರಿಗೆ ನೀಡಲಾದ ಅನುಮತಿಯು 2025 ಮೇ 31ಕ್ಕೆ ಮುಕ್ತಾಯಗೊಂಡಿದೆ. 2022 ರ ನಿಯಮಗಳ ಅಡಿಯಲ್ಲಿ ಆರು ತಿಂಗಳ ಕಾಲ ವಾಸ್ತವ್ಯ ಅವಧಿಯು 2025 ಮೇ 10ಕ್ಕೆ ಮುಕ್ತಾಯಗೊಂಡಿದೆ ಎಂದು ಹೇಳಿದೆ.

# ದಲಿತ ವ್ಯಕ್ತಿಯ ಮೇಲೆ ಹಲ್ಲೆ, ಅರೆನಗ್ನ ಮೆರವಣಿಗೆ

**ಲುದಿಯಾನ:** ಲುದಿಯಾನದ ಹಳ್ಳಿಯೊಂದರಲ್ಲಿ ದಲಿತ ಯುವಕನ ಮೇಲೆ ಹಲ್ಲೆನಡೆಸಿ, ಬಲವಂತವಾಗಿ ಕಪ್ಪು ಬಣ್ಣ ಬಳಿದು ಅರೆನಗ್ನವಾಗಿ ಮೆರವಣಿಗೆ ಮಾಡಲಾಗಿರುವ ಘಟನೆ ವರದಿಯಾಗಿದೆ. ಮಂಗಳವಾರ ಲುಧಿಯಾನದ ಹೊರವಲಯದಲ್ಲಿರುವ ಸೀದಾ ಗ್ರಾಮದಲ್ಲಿ ನಡೆದ ಘಟನೆಯ ವೈರಲ್ ವಿಡಿಯೋ ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದೆ. ಘಟನೆಗೆ ಸಂಬಂಧಿಸಿದಂತೆ ಒಬ್ಬ ವ್ಯಕ್ತಿಯನ್ನು ಬಂಧಿಸಲಾಗಿದ್ದು, ಭಾಗಿಯಾಗಿರುವ ಇತರರನ್ನು ಬಂಧಿಸಲು ಪ್ರಯತ್ನಗಳು ನಡೆಯುತ್ತಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ದಂಪತಿಗಳು ಓಡಿಹೋಗಲು ಹರ್ಜೋತ್ ಸಿಂಗ್ ಸಹಾಯ ಮಾಡಿದ್ದಾರೆಂದು ಶಂಕಿಸಿದ ನಂತರ ಮಹಿಳೆಯ ಕುಟುಂಬದವರು ಆತನ ಮೇಲೆ ದಾಳಿ ನಡೆಸಿದ್ದಾರೆ. ಹರ್ಜೋತ್ ಅವರ ಸ್ನೇಹಿತ ಮತ್ತು ಮಹಿಳೆ ಜೂನ್ 19 ರಂದು ವಿವಾಹವಾಗಿದ್ದರು. ಇದರ ನಂತರ ಗ್ರಾಮದಲ್ಲಿ ಉದ್ವಿಗ್ನತೆ ಮುಂದುವರೆಯಿತು.

# ಅವಳಿ ಮಕ್ಕಳಿಗೆ ಇಬ್ಬರು ತಂದೆಯರು!

**ಬ್ರೆಝಿಲ್:** ಒಂದೇ ಗರ್ಭದಲ್ಲಿ ಜನಿಸಿದ ಅವಳಿ ಮಕ್ಕಳಿಗೆ ಇಬ್ಬರು ಬೇರೆ ಬೇರೆ ತಂದೆಯರಿರಲು ಸಾಧ್ಯವೇ? ಇದು ಯಾವುದೋ ಸಿನೆಮಾ ಕಥೆಯಲ್ಲ, ಬದಲಿಗೆ ಬ್ರೆಝಿಲ್‌ನಲ್ಲಿ ನಡೆದ ನೈಜ ಘಟನೆ. 19 ವರ್ಷದ ಯುವತಿಯೊಬ್ಬಳು ಇಂತಹದ್ದೊಂದು ವಿರಳಾತಿವಿರಳ ಅವಳಿ ಮಕ್ಕಳಿಗೆ ಜನ್ಮ ನೀಡಿದ್ದು, ಈ ಘಟನೆ ವೈದ್ಯಕೀಯ ಲೋಕವನ್ನೇ ಬೆರಗುಗೊಳಿಸಿದೆ. ಬ್ರೆಝಿಲ್‌ನ ಗೊಯಾಸ್ ಪ್ರಾಂತ್ಯದ ಮಿನೆರಿಯೊಸ್ ನಗರದ ನಿವಾಸಿಯಾಗಿರುವ 19 ವರ್ಷದ ಯುವತಿ, ತಾನು ಒಂದೇ ದಿನ ಇಬ್ಬರು ವಿಭಿನ್ನ ಪುರುಷರೊಂದಿಗೆ ಲೈಂಗಿಕ ಸಂಪರ್ಕ ಬೆಳೆಸಿದ್ದಾಗಿ ಹೇಳಿಕೊಂಡಿದ್ದಾರೆ. 'ಡೈಲಿ ಮೇಲ್' ವರದಿಯ ಪ್ರಕಾರ, ಈ ಘಟನೆಯ ನಂತರ ಗರ್ಭಿಣಿಯಾದಾಗ, ತನ್ನ ಮಕ್ಕಳ ನಿಜವಾದ ತಂದೆ ಯಾರೆಂಬುದನ್ನು ಖಚಿತಪಡಿಸಿಕೊಳ್ಳಲು ಡಿಎನ್‌ಎ ಪರೀಕ್ಷೆ ನಡೆಸಲು ನಿರ್ಧರಿಸಿದ್ದರು. ಆದರೆ ಡಿಎನ್‌ಎ ಪರೀಕ್ಷೆಯ ವರದಿ ಬಂದಾಗ ಸ್ವತಃ ವೈದ್ಯರೇ ಒಂದು ಕ್ಷಣ ದಂಗಾಗಿ ಹೋಗಿದ್ದರು. ಕಾರಣ, ಅವಳಿ ಮಕ್ಕಳ ತಂದೆಯರು ಬೇರೆ ಬೇರೆಯಾಗಿದ್ದರು! ವೈದ್ಯಕೀಯ ಪರಿಭಾಷೆಯಲ್ಲಿ ಈ ವಿದ್ಯಮಾನವನ್ನು 'ಹೆಟೆರೊಪೇರೆಂಟಲ್ ಸೂಪರ್‌ಫೆಕಂಡೇಶನ್' ಎಂದು ಕರೆಯಲಾಗುತ್ತದೆ. ಯುವತಿಗೆ ಚಿಕಿತ್ಸೆ ನೀಡಿದ ವೈದ್ಯ ತುಲಿಯೊ ಜಾರ್ಜ್ ಫ್ರಾಂಕೊ ಅವರ ಪ್ರಕಾರ, ಇದು ಅತ್ಯಂತ ಅಪರೂಪದ ಘಟನೆಯಾಗಿದೆ. ಮಹಿಳೆಯ ಅಂಡಾಶಯದಿಂದ ಒಂದೇ ಋತುಚಕ್ರದಲ್ಲಿ ಬಿಡುಗಡೆಯಾದ ಎರಡು ಪ್ರತ್ಯೇಕ ಅಂಡಾಣುಗಳು, ಇಬ್ಬರು ವಿಭಿನ್ನ ಪುರುಷರ ವೀರ್ಯಾಣುಗಳಿಂದ ಫಲೀಕರಣಗೊಂಡಾಗ ಈ ರೀತಿ ಸಂಭವಿಸುತ್ತದೆ. ಈ ಶಿಶುಗಳು ಪ್ರತ್ಯೇಕ ಜರಾಯು ಅಥವಾ ಪ್ಲಾಸೆಂಟಾದಲ್ಲಿ ಬೆಳೆದಿವೆ ಎಂದು ಡಾ. ಫ್ರಾಂಕೊ ವಿವರಿಸಿದ್ದಾರೆ. ಅವರ ಪ್ರಕಾರ, ಇದು ಎಷ್ಟೊಂದು ವಿರಳವೆಂದರೆ, ಇಡೀ ವಿಶ್ವದಲ್ಲಿ ಈವರೆಗೆ ಕೇವಲ 20 ಇಂತಹ ಪ್ರಕರಣಗಳು ಮಾತ್ರ ದಾಖಲಾಗಿವೆ.

# ವಿಮಾನ ಟೇಕ್‌ಆಫ್ ಮುನ್ನ ಮೊಳಗಿದ ಅಲರ್ಟ್

**ಮ್ಯಾಡ್ರಿಡ್:** ಕಳೆದ ತಿಂಗಳು ಗುಜರಾತ್ ನಲ್ಲಿ ಏರ್ ಇಂಡಿಯಾ ವಿಮಾನ ಪತನವಾಗಿ 260ಕ್ಕೂ ಹೆಚ್ಚು ಮಂದಿ ಮೃತಪಟ್ಟ ಘಟನೆಯ ಶಾಕ್‌ನಿಂದ ಇನ್ನೂ ಜಗತ್ತು ಹೊರಬಂದಿಲ್ಲ. ಈ ಮಧ್ಯೆ ಸ್ಪೇನ್‌ನಲ್ಲಿ ಟೇಕ್‌ಆಫ್ ಮುನ್ನ ವಿಮಾನದಲ್ಲಿ ಬೆಂಕಿಯ ಸೂಚನೆ ಮೊಳಗಿದ್ದು, ಪ್ರಯಾಣಿಕರು ಭಯಭೀತರಾಗಿ ಹೊರಗೆ ಜಿಗಿದಿರುವ ಘಟನೆ ನಡೆದಿದೆ. ಈ ವೇಳೆ ಸುಮಾರು 18 ಮಂದಿಗೆ ಸಣ್ಣ ಪುಟ್ಟ ಗಾಯವಾಗಿದ್ದು, ದೊಡ್ಡ ದುರಂತವೊಂದು ತಪ್ಪಿದಂತಾಗಿದೆ. ಸ್ಪೇನ್‌ನ ಪಾಲ್ಮಾ ಡಿ ಮಲ್ಲೋರ್ಕಾ ವಿಮಾನ ನಿಲ್ದಾಣದಲ್ಲಿ ಈ ಘಟನೆ ನಡೆದಿದೆ. ರಯಾನ್‌ಏರ್ ಬೋಯಿಂಗ್ 737 ವಿಮಾನವು ಮ್ಯಾಂಚೆಸ್ಟರ್‌ಗೆ ಹಾರಲು ತಯಾರಿ ನಡೆಸುತ್ತಿದ್ದಾಗ, ಟೇಕ್‌ಆಫ್ ವೇಳೆ ಬೆಂಕಿಯ ಅಲರ್ಟ್ ಮೊಳಗಿತು. ಇದರಿಂದಾಗಿ ಪ್ರಯಾಣಿಕರು ತುರ್ತು ನಿರ್ಗಮನದ ಮೂಲಕ ವಿಮಾನದ ರೆಕ್ಕೆಗಳ ಮೇಲೆ ಹತ್ತಿ ಅಲ್ಲಿಂದ ಕಳಗೆ ಹಾರಿದರು.




ಸದ್ಯ ಪ್ರಯಾಣಿಕರು ವಿಮಾನದಿಂದ ಜಿಗಿಯುತ್ತಿರುವ ವಿಡಿಯೊ ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದ್ದು, ವೈರಲ್ ಆಗಿದೆ. ಅರಬ್ ಟೈಮ್ಸ್ ವರದಿ ಪ್ರಕಾರ, ಘಟನೆ ಬಗ್ಗೆ ತಕ್ಷಣ ತುರ್ತು ವಿಭಾಗಕ್ಕೆ ತಿಳಿಸಲಾಯಿತು ಮತ್ತು ಅವರು ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ. ಹೆಚ್ಚಿನ ಅನಾಹುತ ಸಂಭವಿಸಿಲ್ಲ ಎಂದು ಮೂಲಗಳು ತಿಳಿಸಿವೆ. ಗಾಯಗೊಂಡ 18 ಮಂದಿಗೆ ಚಿಕಿತ್ಸೆ ನೀಡಲಾಗುತ್ತಿದೆ.

ಜು. 4ರಂದು ಪಾಲ್ಮಾದಿಂದ ಮ್ಯಾಂಚೆಸ್ಟರ್‌ಗೆ ಹಾರುತ್ತಿದ್ದ ವಿಮಾನದಲ್ಲಿ ಬೆಂಕಿಯ ಅಲರ್ಟ್ ಮೊಳಗಿತು. ಹೀಗಾಗಿ ಟೇಕ್‌ಆಫ್ ಆಗುತ್ತಿದ್ದ ವಿಮಾನವನ್ನು ತಡೆಹಿಡಿಯಲಾಯಿತು ಎಂದು ವಿಮಾನಯಾನ ಸಂಸ್ಥೆ ದೃಢಪಡಿಸಿದೆ. ಈ ಬಗ್ಗೆ ತನಿಖೆ ನಡೆಸಲು ಆದೇಸ ಹೊರಡಿಸಲಾಗಿದೆ.

# ರೈಲ್ವೇ ಪ್ಲಾಟ್ ಫಾರಂನಲ್ಲೇ ತುರ್ತು ಹೆರಿಗೆ ಮಾಡಿಸಿದ ಸೇನಾ ವೈದ್ಯ

**ಝೂನ್ಸಿ(ಉತ್ತರ ಪ್ರದೇಶ):** ಭಾರತೀಯ ಸೇನೆಯ ಯುವ ವೈದ್ಯರೊಬ್ಬರು ರೈಲ್ವೇ ಪ್ಲಾಟ್ ಫಾರ್ಮ್ ನಲ್ಲೇ ಮಹಿಳೆಗೆ ತುರ್ತು ಹೆರಿಗೆ ಮಾಡಿಸಿದ್ದಾರೆ. ಕೂದಲಿನ ಕ್ಲಿಪ್ ಮತ್ತು ಪಾಕೆಟ್ ಚಾಕು ಬಳಸಿಯೇ ಅವರು ಈ ಹೆರಿಗೆ ಮಾಡಿಸಿದ್ದು ವಿಶೇಷ. ಇದೀಗ ತಾಯಿ ಮತ್ತು ಹೆಣ್ಣು ಮಗು ಆರೋಗ್ಯವಾಗಿದ್ದಾರೆ.



ಅತ್ಯಂತ ತುರ್ತು ಸಂದರ್ಭದಲ್ಲಿ ನೆರವಿಗೆ ಬಂದ ಸೇನಾ ವೈದ್ಯರನ್ನು ಸ್ಥಳದಲ್ಲಿದ್ದವರು ಮನತುಂಬಿ ಶ್ಲಾಘಿಸಿದ್ದಾರೆ. ಅಷ್ಟೇ ಅಲ್ಲದೇ, ಕನಿಷ್ಠ ಸಂಪನ್ಮೂಲಗಳನ್ನು ಬಳಸಿಕೊಂಡು ಅವರು ನಡೆಸಿದ ಸುರಕ್ಷಿತ ಹೆರಿಗೆಯೂ ಜನರಲ್ಲಿ ಅಚ್ಚರಿ ಉಂಟು ಮಾಡಿತು.

ಝೂನ್ಸಿ ರೈಲ್ವೇ ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ಮನೋಜ್ ಕುಮಾರ್ ಸಿಂಗ್ ಈ ಕುರಿತು ಪ್ರತಿಕ್ರಿಯಿಸಿ, ಶನಿವಾರ ಮಧ್ಯಾಹ್ನ ಪನ್ವೇಲ್-ಗೋರಖ್‌ಪುರ ಎಕ್ಸ್‌ಪ್ರೆಸ್ ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಗರ್ಭಿಣಿಗೆ ತೀವ್ರ ಹೆರಿಗೆ ನೋವು ಕಾಣಿಸಿಕೊಂಡಿತು. ನಂತರ ಅವರನ್ನು ಝೂನ್ಸಿ ನಿಲ್ದಾಣದಲ್ಲಿ ಇಳಿಸಲಾಯಿತು. ಗಂಭೀರ ಪರಿಸ್ಥಿತಿಯನ್ನು ಗಮನಿಸಿ, ಮಹಿಳಾ ಟಿಕೆಟ್ ಪರಿಶೀಲನಾ ಸಿಬ್ಬಂದಿ ಮತ್ತು ಸೇನಾ ವೈದ್ಯಾಧಿಕಾರಿಯೊಬ್ಬರು ಕೂಡಲೇ ಕಾರ್ಯಪ್ರವೃತ್ತರಾಗಿ ಮಹಿಳೆಯ ನೆರವಿಗೆ ಧಾವಿಸಿ ಬಂದರು ಎಂದು ತಿಳಿಸಿದರು. ಸೇನಾ ವೈದ್ಯಕೀಯ ದಳದ ವೈದ್ಯಾಧಿಕಾರಿ ಮೇಜರ್ ಡಾ.ರೋಹಿತ್ ಬಚ್ವಾಲಾ (31) ಅವರು ತಮ್ಮ ರೈಲಿಗಾಗಿ ಝೂನ್ಸಿ ನಿಲ್ದಾಣದಲ್ಲಿ ಕಾಯುತ್ತಿದ್ದರು. ಈ ಸಂದರ್ಭದಲ್ಲಿ, ರೈಲ್ವೆ ಉದ್ಯೋಗಿಯೊಬ್ಬರು ವೀಲ್ ಚೇರ್‌ನಲ್ಲಿ ಸಂಕಷ್ಟದಲ್ಲಿರುವ ಗರ್ಭಿಣಿಯೊಬ್ಬರನ್ನು ಅತ್ಯಂತ ತುರ್ತಾಗಿ ಕರೆದೊಯ್ಯುತ್ತಿರುವುದನ್ನು ನೋಡಿದ್ದಾರೆ. ಈ ದೃಶ್ಯ ಗಮನಿಸಿ ತಕ್ಷಣ ಪ್ರತಿಕ್ರಿಯಿಸಿದ ವೈದ್ಯಾಧಿಕಾರಿ, ರೈಲ್ವೆ ಸಿಬ್ಬಂದಿಯ ಸಹಾಯದಿಂದ ಪ್ಲಾಟ್‌ಫಾರ್ಮ್‌ನಲ್ಲಿಯೇ ಮಹಿಳೆಗೆ ಹೆರಿಗೆ ಮಾಡಿಸಲು ನೆರವಾದರು.

ಆ ಸಂದರ್ಭದಲ್ಲಿ ತಕ್ಷಣಕ್ಕೆ ಸರಿಯಾದ ಆಪರೇಷನ್ ಥಿಯೇಟರ್ ಸಿಗಲಿಲ್ಲ. ತಾಯಿ ಮತ್ತು ಮಗು ಬಹಳ ಅನಿಶ್ಚಿತ ಸ್ಥಿತಿಯಲ್ಲಿದ್ದರು. ಆಗ ಪ್ರತೀ ಸೆಕೆಂಡ್ ಕೂಡಾ ಮುಖ್ಯವಾಗಿತ್ತು. ಹೀಗಾಗಿ, ನಾನು ನನ್ನ ಬಳಿ ಇದ್ದ ಉಪಕರಣಗಳನ್ನೇ ಅವಲಂಬಿಸಬೇಕಾಯಿತು. ಮೊದಲು ಹೊಕ್ಕುಳಬಳ್ಳಿಯನ್ನು ಬಿಗಿಗೊಳಿಸಲು ನಾನು ಕೂದಲಿನ ಕ್ಲಿಪ್ ಬಳಸಿದೆ. ತಾಯಿ ಮತ್ತು ಮಗುವಿನ ಆರೋಗ್ಯ ಸ್ಥಿರವಾಗಿದೆ ಎಂಬುದನ್ನು ಖಚಿತಪಡಿಸಿಕೊಂಡು ಹೊಕ್ಕುಳಬಳ್ಳಿ ಕತ್ತರಿಸಲು ನನ್ನಲ್ಲಿದ್ದ ಪಾಕೆಟ್ ಚಾಕು ಬಳಸಿದೆ ಎಂದು ಹೇಳಿದರು.

# ಮೊದಲ ಬಾರಿಗೆ ಸಾರ್ವಜನಿಕವಾಗಿ ಕಾಣಿಸಿಕೊಂಡ ಇರಾನ್ ನಾಯಕ ಖಮೇನಿ

**ಇರಾನ್:** ಇಸ್ರೇಲ್ ಜೊತೆಗಿನ ಯುದ್ಧ ಆರಂಭವಾದ ಬಳಿಕ ಮೊದಲ ಬಾರಿಗೆ ಇರಾನ್ ನ ಸರ್ವೋಚ್ಚ ನಾಯಕ ಅಯತೊಲ್ಲಾ ಖಮೇನಿ ಅವರು ಸಾರ್ವಜನಿಕವಾಗಿ ಕಾಣಿಸಿಕೊಂಡರು. ಮೊಹರಂನ ಹತ್ತನೇ ದಿನವಾದ ಆಶುರಾದ ಹಿಂದಿನ ದಿನವಾದ ಜುಲೈ 5 ರ ಶನಿವಾರದಂದು ಟೆಹ್ರಾನ್‌ನಲ್ಲಿರುವ ಇಮಾಮ್ ಖಮೇನಿ ಮಸೀದಿಯಲ್ಲಿ ನಡೆದ ಸಮಾರಂಭದಲ್ಲಿ ಭಾಗವಹಿಸಿದ ಅವರು ಮಸೀದಿ ಬರುತ್ತಿರುವವರನ್ನು ಸ್ವಾಗತಿಸುತ್ತಿರುವ ದೃಶ್ಯಗಳನ್ನು ಮಾಧ್ಯಮಗಳು ಸೆರೆಹಿಡಿದಿವೆ. ಕಪ್ಪು ಬಟ್ಟೆ ಧರಿಸಿ ವೇದಿಕೆ ಏರಿದ ಖಮೇನಿಯನ್ನು ನೋಡಿ ಜನಸಮೂಹವು ಕೈಗಳನ್ನು ಎತ್ತಿ ನಮ್ಮ ನಾಯಕನಿಗೆ ನಮ್ಮ ರಕ್ತ! ಎಂಬ ಘೋಷಣೆಗಳನ್ನು ಕೂಗಿದರು.

ಇಸ್ರೇಲ್ ಮತ್ತು ಇರಾನ್ ನಡುವೆ ಸಂಘರ್ಷ ಆರಂಭವಾದ ಬಳಿಕ ಇದೇ ಮೊದಲ ಬಾರಿಗೆ ಇರಾನ್‌ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರು ಸಾರ್ವಜನಿಕವಾಗಿ ಕಾಣಿಸಿಕೊಂಡಿದ್ದಾರೆ. ಜುಲೈ 5ರ ಶನಿವಾರ ಸಾರ್ವಜನಿಕವಾಗಿ ಕಾಣಿಸಿಕೊಂಡ 86 ವರ್ಷದ ನಾಯಕ ಖಮೇನಿ ಯುದ್ಧದ ಆತಂಕದ ನಡುವೆ ದೇಶದ ಜನರಲ್ಲಿ ಉತ್ಸಾಹ ತುಂಬಲು ಮತ್ತೆ ಮರಳಿದ್ದಾರೆ ಎನ್ನಲಾಗುತ್ತಿದೆ.

ಅವರ ಅನುಪಸ್ಥಿತಿಯಿಂದ ಹೆಚ್ಚುತ್ತಿದ್ದ ಪ್ರಾದೇಶಿಕ ಉದ್ವಿಗ್ನತೆ ಇದರಿಂದ ಕಡಿಮೆಯಾಗುವ ನಿರೀಕ್ಷೆ ಇದೆ. ಶಿಯಾ ಹಬ್ಬವಾದ ಅಶುರಾ ಮುನ್ನಾದಿನದಂದು ನಡೆದ ಸಮಾರಂಭದಲ್ಲಿ ಟೆಹ್ರಾನ್‌ನ ಇಮಾಮ್ ಖಮೇನಿ ಮಸೀದಿಯಲ್ಲಿ ಅವರು ಭಕ್ತರನ್ನು ಶನಿವಾರ ಸ್ವಾಗತಿಸಿದರು.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಆ ಸ್ಟಾರ್ ನಟನ ಸಿನಿಮಾನಲ್ಲಿ ನಟಿಸಿ ತಪ್ಪು ಮಾಡಿದೆ

ದಕ್ಷಿಣ ಭಾರತದ ಸ್ಟಾರ್ ನಟಿ ನಯನತಾರಾ ತೆಲುಗು, ತಮಿಳು, ಕನ್ನಡ, ಮಲಯಾಳಂ ಇತ್ತೀಚೆಗೆ ಹಿಂದಿ ಸಿನಿಮಾಗಳಲ್ಲಿಯೂ ನಟಿಸಿದ್ದು, ಪ್ಯಾನ್ ಇಂಡಿಯಾ ನಟಿ ಎನಿಸಿಕೊಂಡಿದ್ದಾರೆ. ದಶಕಗಳಿಂದಲೂ ಸ್ಟಾರ್ ನಾಯಕಿಯಾಗಿ ಗುರುತಿಸಿಕೊಂಡಿರುವ ನಯನತಾರಾ ದಕ್ಷಿಣದ ಹಲವಾರು ಸ್ಟಾರ್ ನಟರುಗಳೊಟ್ಟಿಗೆ ನಾಯಕಿಯಾಗಿ ನಟಿಸಿದ್ದಾರೆ. ನಯನತಾರಾ, ತಮ್ಮ ಶಿಸ್ತು ಜೊತೆಗೆ ಯಾವುದೇ ಅಂಜಿಕೆ ಇಲ್ಲದೆ ಅಭಿಪ್ರಾಯ ಹೇಳುವುದಕ್ಕೆ ಜನಪ್ರಿಯರು. ಒಬ್ಬ ಸ್ಟಾರ್ ನಟನ ಜೊತೆಗೆ ಸಿನಿಮಾದಲ್ಲಿ ನಟಿಸಿ ದೊಡ್ಡ ತಪ್ಪು ಮಾಡಿದೆ ಎಂದು ಕೆಲ ವರ್ಷಗಳ ಹಿಂದೆ ನಯನತಾರಾ ಹೇಳಿಕೊಂಡಿದ್ದರು. ಆ ವಿಡಿಯೋ ಇದೀಗ ಮತ್ತೆ ವೈರಲ್ ಆಗುತ್ತಿದೆ.

ತಮಿಳಿನ ಸ್ಟಾರ್ ನಟ ಸೂರ್ಯ ಜೊತೆಗೆ 'ಗಜಿನಿ' ಸಿನಿಮಾನಲ್ಲಿ ನಯನತಾರಾ ನಟಿಸಿದ್ದರು. 'ಗಜಿನಿ' ಸಿನಿಮಾ ಬ್ಲಾಕ್ ಬಸ್ಟರ್ ಆಗಿತ್ತು. ಸಿನಿಮಾದಲ್ಲಿ ಕೆಲಸ ಮಾಡಿರುವ ಎಲ್ಲರಿಗೂ ಬಹಳ ಒಳ್ಳೆಯ ಹೆಸರು ಗಳಿಸಿಕೊಟ್ಟಿತ್ತು. ಹಾಗಿದ್ದರೂ ಸಹ ನಯನತಾರಾಗೆ 'ಗಜಿನಿ' ಸಿನಿಮಾನಲ್ಲಿ ನಟಿಸಿದ್ದು ತುಸುವೂ ಇಷ್ಟ ಆಗಲಿಲ್ಲವಂತೆ. ಅದಕ್ಕೆ ಕಾರಣವನ್ನೂ ಸಹ ನಟಿ ನಯನತಾರಾ ಹಳೆಯ ಸಂದರ್ಶನದಲ್ಲಿ ಹೇಳಿಕೊಂಡಿದ್ದಾರೆ.



'ಗಜಿನಿ ಸಿನಿಮಾನಲ್ಲಿ ನಟಿಸಿದ್ದು ನನ್ನ ವೃತ್ತಿ ಜೀವನದ ಅತ್ಯಂತ ಕೆಟ್ಟ ನಿರ್ಧಾರ. ಆ ಸಿನಿಮಾದಲ್ಲಿ ನನ್ನ ಪಾತ್ರ ಕೆಟ್ಟದಾಗಿತ್ತು. ಶೂಟಿಂಗ್‌ಗೆ ಮುಂಚೆ ನನಗೆ ಹೇಳಿದಂತೆ ಆ ಪಾತ್ರವನ್ನು ತೋರಿಸಲಿಲ್ಲ. ನನ್ನನ್ನು ಅತ್ಯಂತ ಕೆಟ್ಟದಾಗಿ ಆ ಸಿನಿಮಾನಲ್ಲಿ ತೋರಿಸಲಾಗಿದೆ. ಆದರೆ ಆಗ ನಾನು ಆ ಬಗ್ಗೆ ಮಾತನಾಡಲಿಲ್ಲ. ಅದು ವೃತ್ತಿಪರತೆ ಅಲ್ಲ ಎಂದು ಸುಮ್ಮನಿದ್ದೆ. ಆದರೆ ಆ ಸಿನಿಮಾ ಅನ್ನು ನಾನು ಒಪ್ಪಿಕೊಳ್ಳಲೇ ಬಾರದಿತ್ತು. ಅದೊಂದು ಅತ್ಯಂತ ಕೆಟ್ಟ ನಿರ್ಧಾರ ಆಗಿತ್ತು' ಎಂದಿದ್ದಾರೆ ನಯನತಾರಾ.

'ಗಜಿನಿ' ಸಿನಿಮಾನಲ್ಲಿ ನಯನತಾರಾ ಎರಡನೇ ನಾಯಕಿ. ಮೊದಲ ನಾಯಕಿ ಅಸಿನ್. ನಯನತಾರಾ ಅವರ ಪಾತ್ರಕ್ಕೂ ಸಿನಿಮಾನಲ್ಲಿ ಸಾಕಷ್ಟು ಮಹತ್ವ ಇತ್ತು. ಆದರೆ ಅಸಿನ್ ಸಿನಿಮಾದ ನಿಜವಾದ ನಾಯಕಿ. ಬಹುಷಃ ನಯನತಾರಾಗೆ ಅದು ಇಷ್ಟ ಆಗಿಲ್ಲ ಅನಿಸುತ್ತದೆ. ಈ ಹಿಂದೆ ರಜನೀಕಾಂತ್ ನಟನೆಯ 'ಕುಸೇಲನ್' ಸಿನಿಮಾನಲ್ಲಿ ಬೇರೊಬ್ಬ ನಾಯಕಿ ಹಾಡೊಂದರಲ್ಲಿ ನಟಿಸಿದರೆಂದು ನಯನತಾರಾ ಆ ಹಾಡನ್ನೇ ಕಟ್ ಮಾಡುವಂತೆ ಮಾಡಿದ್ದರು. ತಮ್ಮ ಪಾತ್ರಕ್ಕಿಂತಲೂ ಇನ್ನೊಬ್ಬ ನಾಯಕಿಯ ಪಾತ್ರಕ್ಕೆ ಪ್ರಾಮುಖ್ಯತೆ ಇದೆಯೆಂದರೆ ನಯನತಾರಾ ಅದನ್ನು ಸಹಿಸುವುದಿಲ್ಲ. 'ಚಂದ್ರಮುಖಿ' ಸಿನಿಮಾ ಸಮಯದಲ್ಲಿಯೂ ನಯನತಾರಾ ಅಸಮಾಧಾನ ಹೊರಹಾಕಿದ್ದರಂತೆ.

'ಗಜಿನಿ' ಸಿನಿಮಾ ಅನ್ನು ಮುರುಗದಾಸ್ ನಿರ್ದೇಶನ ಮಾಡಿದ್ದರು. ನಯನತಾರಾ ಹೇಳಿಕೆ ಬಗ್ಗೆ ಮಾತನಾಡಿದ್ದ ಮುರುಗದಾಸ್, 'ಒಮ್ಮೊಮ್ಮೆ, ನಾವು ಇಷ್ಟ ಪಡುವ ನಟ-ನಟಿಯರಿಗೆ ಚಿಕ್ಕ ರೋಲ್ ಕೊಡಬೇಕಾಗುತ್ತದೆ. ಕೆಲವೊಮ್ಮೆ ವೈಯಕ್ತಿಕವಾಗಿ ನಮಗೆ ಆತ್ಮೀಯವಲ್ಲದ ನಟರಿಗೆ ದೊಡ್ಡ ಪಾತ್ರಗಳನ್ನು ನೀಡಬೇಕಾಗುತ್ತದೆ. ಇದೆಲ್ಲ ಸಾಮಾನ್ಯ' ಎಂದಿದ್ದರು. ಅದಾದ ಬಳಿಕ ಮುರುಗದಾಸ್ ನಿರ್ದೇಶನದ 'ದರ್ಬಾರ್' ಸಿನಿಮಾನಲ್ಲಿ ನಯನತಾರಾ ನಟಿಸಿದರು.

# ಕೊಡಗಿನಿಂದ ಬಂದು ಚಿತ್ರರಂಗದಲ್ಲಿ ಮಿಂಚಿದ ಮೊದಲ ನಟಿ ರಶ್ಮಿಕಾ ಮಂದಣ್ಣ ಅಲ್ಲ

ಕೊಡಗಿನಿಂದ ಬಂದ ಅನೇಕರು ಚಿತ್ರರಂಗದಲ್ಲಿ ಸಾಧನೆ ಮಾಡಿದ್ದಾರೆ. ಅವರ ಸಾಲಿನಲ್ಲಿ ನಟಿ ರಶ್ಮಿಕಾ ಮಂದಣ್ಣ ಕೂಡ ಇದ್ದಾರೆ. ಆದರೆ ಇತ್ತೀಚೆಗೆ ರಶ್ಮಿಕಾ ಅವರು ಸಂದರ್ಶನವೊಂದರಲ್ಲಿ ಮಾತನಾಡುವಾಗ, 'ಕೊಡಗಿನಿಂದ ಚಿತ್ರರಂಗಕ್ಕೆ ಬಂದ ಮೊದಲ ನಟಿ ನಾನು' ಎಂದು ಹೇಳಿದರು. ಆ ಹೇಳಿಕೆಗೆ ಜನರಿಂದ ಟೀಕೆ ವ್ಯಕ್ತವಾಗಿದೆ. ಈ ಮೊದಲು ಕೂಡ ರಶ್ಮಿಕಾ ಮಂದಣ್ಣ ಅವರು ನೀಡಿದ ಹೇಳಿಕೆಗಳು ವಿವಾದ ಉಂಟು ಮಾಡಿದ್ದವು. ಈಗ ಅವರ ಹೊಸ ಹೇಳಿಕೆಗೆ ಚಿತ್ರರಂಗದ ಅನೇಕರು ಪ್ರತಿಕ್ರಿಯಿಸುತ್ತಿದ್ದಾರೆ. ನಿರ್ದೇಶಕಿ ಸುಮನ್ ಕಿತ್ತೂರು ಅವರು ಈ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿದ್ದಾರೆ.

'ಕಲಾವಿದೆ ರಶ್ಮಿಕಾ ಮಂದಣ್ಣ ಸಂದರ್ಶನ ಒಂದರಲ್ಲಿ, ಕೊಡವ ಜನಾಂಗದ ಮೊದಲ ನಟಿ ತಾವೇ ಎಂದು ಹೇಳಿಕೆ ನೀಡಿದ್ದಾರೆ! ರಶ್ಮಿಕಾ ಅವರ ಯಶಸ್ಸಿಗೆ ಮತ್ತು ಖ್ಯಾತಿಗೆ ಭಾರಿ ಪ್ರಶಂಸೆ ಸಲ್ಲಿದರೂ, ಆಗಿನ ಶಶಿಕಲಾ ಎನ್ನುವ ಕಲಾವಿದೆಯಿಂದ ಹಿಡಿದು, ಈಗಿನ ಕೊಡವ ಮಹಿಳಾ ನಟಿಯರ ತನಕದ ಚಿತ್ರರಂಗದ ನಂಟಿನ ಇತಿಹಾಸವು ಬಹಳ ದೊಡ್ಡದಿದೆ' ಎಂದು ಸುಮನ್ ಕಿತ್ತೂರು ಅವರು ಈ ಬರಹ ಆರಂಭಿಸಿದ್ದಾರೆ.

'ರಶ್ಮಿಕಾ ಅವರಿಗಿಂತಲೂ ಮುಂಚೆ ತೆಲುಗು ನಾಡಲ್ಲಿ ನಟಿಸಿ, ಸೂಪರ್ ಸ್ಟಾರ್ ಆಗಿದ್ದವರು ನಮ್ಮ ಕ್ರೀಡಾಪಟು



ಕೊಡಗಿನ ಅಶ್ವಿನಿ ನಾಚಪ್ಪ. ಇವರು ಕೆಲವು ತೆಲುಗು ಚಲನಚಿತ್ರಗಳಲ್ಲಿ ನಟಿಸಿದ್ದು ಮಾತ್ರವಲ್ಲ, ಅವರ ಸ್ವಂತ ಜೀವನಚರಿತ್ರೆಯನ್ನು ಆಧರಿಸಿದ 'ಅಶ್ವಿನಿ' ತೆಲುಗು ಚಿತ್ರಕ್ಕಾಗಿ ಅತ್ಯುತ್ತಮ ಚೊಚ್ಚಲ ನಟಿ ರಾಜ್ಯ ನಂದಿ ಪ್ರಶಸ್ತಿಯನ್ನು ಕೂಡ ಪಡೆದುಕೊಂಡಿದ್ದಾರೆ.'

'ಇನ್ನು, ಒಂದು ಕಾಲದಲ್ಲಿ ಕನ್ನಡ ಚಿತ್ರರಂಗವನ್ನು ಆಳಿದ ಪ್ರೇಮಾ, ಕೊಡಗಿನ ಮುರ್ನಾಡುವಿನ ನೆರವಂಡ ಕುಟುಂಬದ ಹುಡುಗಿ. ಆ ಕಾಲದಲ್ಲೇ ಕನ್ನಡ, ತೆಲುಗು, ಮಲಯಾಳಂ ಮತ್ತು ತಮಿಳು ಭಾಷೆಗಳಲ್ಲಿ ನಟಿಸಿದ ದಕ್ಷಿಣ ಭಾರತದ ನಟಿ. 'ಓಂ' ಚಿತ್ರದ ನಟನೆಗೆ ಕರ್ನಾಟಕ ರಾಜ್ಯ ಸರ್ಕಾರ ನೀಡುವ ಅತ್ಯುತ್ತಮ ನಟಿ ರಾಜ್ಯ ಪ್ರಶಸ್ತಿ ಕೂಡ ಪಡೆದಿದ್ದಾರೆ.'

'ಪ್ರೇಮಾ ಅವರ ನಂತರ ಹಲವಾರು ಕೊಡಗಿನ ಹುಡುಗಿಯರು ಚಿತ್ರರಂಗ ಪ್ರವೇಶಿಸಿದ್ದಿದೆ. ಕನ್ನಡ ಮತ್ತು ಹಿಂದಿ ಭಾಷೆಯ ಚಿತ್ರಗಳಲ್ಲೂ ನಟಿಸಿರುವ ನಿಧಿ ಸುಬ್ಬಯ್ಯ, ಹರ್ಷಿಕಾ ಪೂಣಚ್ಚ, ಡೈಸಿ ಬೋಪಣ್ಣ, ಸಣ್ಣುವಂಡ ನಯನಾ ಕಾವೇರಪ್ಪ, ರೀಷ್ಮಾ ನಾಣಯ್ಯ, ವರ್ಷಾ ಬೊಳ್ಳಮ್ಮ, ಶ್ವೇತಾ ಚೆಂಗಪ್ಪ, ತಸ್ವಿನಿ ಕರುಂಬಯ್ಯ? ಸದ್ಯ, ನನಗೆ ನೆನಪಾದ ಹೆಸರುಗಳಿವು. ಆದರೆ ಪಟ್ಟಿ ದೊಡ್ಡದಿದೆ, ಬೆಳೆಯುತ್ತಲೇ ಹೋಗುತ್ತದೆ.'

'ಈಗಂತೂ ಕಿರುತೆರೆಯಲ್ಲೂ ಕೊಡಗಿನ ಕಲಾವಿದೆಯರು ಮಾತ್ರವಲ್ಲ, ಕಲಾವಿದರ ಸಂಖ್ಯೆಯೂ ಹೆಚ್ಚಿದೆ. ರಶ್ಮಿಕಾ ಮಂದಣ್ಣ ಇಂದು ರಾಷ್ಟ್ರಮಟ್ಟದಲ್ಲಿ ಖ್ಯಾತಿಯನ್ನು ಗಳಿಸಿರುವುದು ಹೆಮ್ಮೆಯ ವಿಷಯ. ಆದರೆ 'ಮೊದಲ ಕೊಡವ ನಟಿ' ಎಂಬ ಗೌರವ ಅವರ ಹಿರಿಯರಿಗೂ ಸಲ್ಲುತ್ತದೆ ಎಂಬುದು ಅಂಶವಷ್ಟೆ' ಎಂದು ಸುಮನ್ ಕಿತ್ತೂರು ಅವರು ಬರಹ ಪೂರ್ಣಗೊಳಿಸಿದ್ದಾರೆ.

# 'ಕುಬೇರ' ನಿರಾಕರಿಸಿ ಹಿಟ್ ಮಿಸ್ ಮಾಡಿಕೊಂಡ ಫ್ಲಾಪ್ ನಟ ಯಾರು ಗೊತ್ತೆ?

ಧನುಶ್ ನಟನೆಯ 'ಕುಬೇರ' ಸಿನಿಮಾ ದೊಡ್ಡ ಹಿಟ್ ಆಗಿದೆ. ಬಿಡುಗಡೆ ಆದ ಕೆಲವೇ ವಾರಗಳಲ್ಲಿ ಸಿನಿಮಾ 100 ಕೋಟಿ ಕಲೆಕ್ಷನ್ ದಾಟಿದ್ದು, 150 ಕೋಟಿ ಕಲೆಕ್ಷನ್ ಕಡೆಗೆ ದಾಪುಗಾಲು ಹಾಕಿದೆ. ಸಿನಿಮಾದಲ್ಲಿ ನಟಿಸಿರುವ ಎಲ್ಲರ ನಟನೆ ಬಗ್ಗೆ ಧನಾತ್ಮಕ ಅಭಿಪ್ರಾಯ ವ್ಯಕ್ತವಾಗಿದೆ. ವಿಶೇಷವಾದ ನಟ ಧನುಶ್‌ಗೆ ಮತ್ತೊಂದು ರಾಷ್ಟ್ರಪ್ರಶಸ್ತಿ ಸಿಗಲಿದೆ ಎಂಬ ಮಟ್ಟಿಗೆ ವಿಮರ್ಶಕರು ಅವರ ನಟನೆಯನ್ನು ಕೊಂಡಾಡಿದ್ದಾರೆ. ಆದರೆ ಇಂಥಹಾ ಒಂದು ಒಳ್ಳೆಯ ಸಿನಿಮಾ ಅವಕಾಶವನ್ನು ಕಳೆದುಕೊಂಡಿದ್ದು ಯಾರು ಗೊತ್ತೆ?

ಶೇಖರ್ ಕಮ್ಮುಲ, 'ಕುಬೇರ' ಸಿನಿಮಾದ ಕತೆ ರೆಡಿ ಆದಾಗ ಮೊದಲಿಗೆ ಸಂಪರ್ಕ ಮಾಡಿದ್ದು ವಿಜಯ್ ದೇವರಕೊಂಡ ಅವರನ್ನು. ಸತತ ಫ್ಲಾಪ್‌ಗಳಿಂದ ಕಂಗಾಲಾಗಿರುವ ವಿಜಯ್ ದೇವರಕೊಂಡ ಅವರಿಗೆ 'ಕುಬೇರ' ಸಿನಿಮಾದ ಕತೆಯನ್ನು ಶೇಖರ್ ಕಮ್ಮುಲ ಹೇಳಿದ್ದರಂತೆ. ಆದರೆ ಮಾಸ್ ಹೀರೋ ಆಗುವ, 'ಸ್ಟಾರ್' ಆಗುವ ದೂರಾಲೋಚನೆ ಹೊಂದಿರುವ ವಿಜಯ್ ದೇವರಕೊಂಡ, ಯಾವ ರೀತಿಯ ಗ್ಲಾಮರ್



ಇಲ್ಲದ ಭಿಕ್ಷುಕನ ಪಾತ್ರದಲ್ಲಿ ನಟಿಸುವುದಿಲ್ಲ ಎಂದು ಅವಕಾಶವನ್ನು ನಿರಾಕರಿಸಿದರಂತೆ.

ವಿಜಯ್ ದೇವರಕೊಂಡ ನಟಿಸಿರುವ ಸಿನಿಮಾ ಒಂದು ಹಿಟ್ ಆಗಿ ವರ್ಷಗಳೆ ಆಗಿಬಿಟ್ಟಿವೆ. ಹಾಗಿದ್ದರೂ ಸಹ ವಿಜಯ್, ಶೇಖರ್ ಕಮ್ಮುಲ ಅಂಥಹಾ ಹಿಟ್ ಸಿನಿಮಾ ನಿರ್ದೇಶಕನಿಗೆ ನೋ ಎಂದು ಈಗ ನಿರಾಸೆ ಅನುಭವಿಸಿದ್ದಾರೆ. ಅಂದಹಾಗೆ ವಿಜಯ್ ದೇವರಕೊಂಡ ನಟಿಸಿದ ಎರಡನೇ ಸಿನಿಮಾ ಶೇಖರ್ ಕಮ್ಮುಲ ಅವರ 'ಲೈಫ್ ಈಸ್ ಬ್ಯೂಟಿಫುಲ್'. ಆ ಸಿನಿಮಾದಲ್ಲಿ ನಟಿಸಲು ಅರ್ಜಿ ಹಾಕಿದ್ದ 16 ಸಾವಿರ ನಟರುಗಳಲ್ಲಿ ವಿಜಯ್ ದೇವರಕೊಂಡ ಸಹ ಒಬ್ಬರಂತೆ. ತಮಗೆ ಆರಂಭದಲ್ಲಿ ಅವಕಾಶ ಕೊಟ್ಟ ನಿರ್ದೇಶಕರಿಗೇ ನೋ ಎಂದಿದ್ದಾರೆ ವಿಜಯ್ ದೇವರಕೊಂಡ.

ಅಂದಹಾಗೆ ವಿಜಯ್ ದೇವರಕೊಂಡ ಅವರ ಕೊನೆಯ ಹಿಟ್ ಸಿನಿಮಾ 2018 ರಲ್ಲಿ ಬಿಡುಗಡೆ ಆದ 'ಗೀತಾ ಗೋವಿಂದಂ' ಆ ಸಿನಿಮಾದ ಬಳಿಕ ವಿಜಯ್ ನಟಿಸಿದ ಇನ್ಯಾವುದೇ ಸಿನಿಮಾ ಹಿಟ್ ಎನಿಸಿಕೊಂಡಿಲ್ಲ. 'ನೋಟಾ', 'ಟ್ಯಾಕ್ಸಿವಾಲ', 'ಡಿಯರ್ ಕಾಮ್ರೆಡ್', 'ವರ್ಲ್ಡ್ ಫೇಮಸ್ ಲವ್ವರ್', 'ಲೈಗರ್', 'ಖುಷಿ', 'ದಿ ಫ್ಯಾಮಿಲಿ ಸ್ಟಾರ್' ಇಷ್ಟೂ ಸಿನಿಮಾಗಳು ಒಂದರ ಹಿಂದೊಂದರಂತೆ ಸೋಲುಂಡಿವೆ. ಈಗ ಅವರ ನಟನೆಯ 'ಕಿಂಗ್‌ಡಮ್' ಸಿನಿಮಾ ಬಿಡುಗಡೆಗೆ ಸಜ್ಜಾಗಿದ್ದು, ಆ ಸಿನಿಮಾದ ಭವಿಷ್ಯ ಏನಾಗಲಿದೆಯೋ ಕಾದು ನೋಡಬೇಕಿದೆ. 'ಕಿಂಗ್‌ಡಮ್' ಬಳಿಕ ರಶ್ಮಿಕಾ ಮಂದಣ್ಣ ಜೊತೆಗೆ 'ಗೀತಾ ಗೋವಿಂದಂ 2' ಸಿನಿಮಾದಲ್ಲಿ ವಿಜಯ್ ನಟಿಸಲಿದ್ದಾರೆ.

# 'ಎಕ್ಕ' ಸಿನಿಮಾ ರಿಲೀಸ್‌ಗೆ ದಿನಗಣನೆ

ಎಕ್ಕ ಸಿನಿಮಾ ಬಿಡುಗಡೆಗೆ ದಿನಗಣನೆ ಹಿನ್ನೆಲೆ ನಟ ಯುವ ರಾಜ್ ಕುಮಾರ್ ಟೆಂಪಲ್ ರನ್ ನಡೆಸಿದ್ದಾರೆ. ಮಂತ್ರಾಲಯದಲ್ಲಿ ಗುರುರಾಯರ ದರ್ಶನ ಪಡೆದು, ಬಳಿಕ ರಾಯಚೂರಿನ ಹನುಮಾನ್ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಈ ವೇಳೆ ರಾಯಚೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಾವು ಹೊಸ ಕೆಲಸ ಶುರು ಮಾಡೋದಕ್ಕೂ ಮುನ್ನ ಮಂತ್ರಾಲಯ ರಾಯರ ದರ್ಶನ ಮಾಡ್ತೇವೆ. ಎಕ್ಕ ಸಿನಿಮಾ ಶುರುವಾಗೋ ಮುನ್ನ ಕೂಡಾ ಮಂತ್ರಾಲಯದಲ್ಲಿ ಪೂಜೆ ಮಾಡಿಸಲಾಗಿತ್ತು. ರಾಯರೇ ದೊಡ್ಡ ಧೈರ್ಯ ನಮಗೆ. ರಾಯಚೂರಿನಲ್ಲಿ ಆಂಜನೇಯ ಸ್ವಾಮಿ ದರ್ಶನ ಸಹ ಪಡೆದಿದ್ದೇನೆ ಎಂದಿದ್ದಾರೆ.



ಮಂತ್ರಾಲಯ ರಾಯರ ದರ್ಶನ ಪಡೆದ ಯುವ ರಾಜ್‌ಕುಮಾರ್

ಮನುಷ್ಯನಲ್ಲಿ ಒಳ್ಳೆತನ ಕಾಪಾಡಿಕೊಳ್ಳಬೇಕು ಅನ್ನೋದೇ ಎಕ್ಕ ಸಿನಿಮಾದ ಸಂದೇಶ. ಜಾಕಿ ಸಿನಿಮಾ ಪಾತ್ರಗಳಿಂದ ಪ್ರೇರಿತರಾಗಿ ಈ ಚಿತ್ರವನ್ನು ಮಾಡಿದ್ದೇವೆ. ಬ್ಯಾಂಗಲ್ ಬಂಗಾರಿ ಹಾಡು ಹಿಟ್ ಆಗಿದೆ, ಇದಕ್ಕೆಲ್ಲಾ ದೇವರ ಆಶೀರ್ವಾದವೇ ಕಾರಣ ಸಂತಸ ವ್ಯಕ್ತಪಡಿಸಿದ್ದಾರೆ.

ಎಕ್ಕ ಸಿನಿಮಾದ ಬ್ಯಾಂಗಲ್ ಬಂಗಾರಿ ಹಾಡು ಸೋಷಿಯಲ್ ಮೀಡಿಯಾದಲ್ಲಿ ಸಕ್ಕತ್ ಸೌಂಡ್ ಮಾಡುತ್ತಿದೆ. ಈ ಹಾಡಿನ ಹುಕ್ ಸ್ಟೆಪ್‌ಗೆ ಭರ್ಜರಿ ರೆಸ್ಪಾನ್ ಸಿಕ್ಕಿದೆ. ಇನ್ನೂ ನಟ ಯುವ ರಾಜ್‌ಕುಮಾರ್ ಹಾಗೂ ನಟಿ ಸಂಜನಾ ಆನಂದ್ ಅಭಿನಯದ ಎಕ್ಕ ಸಿನಿಮಾ ಇದೇ ಜುಲೈ 18ರಂದು ರಾಜ್ಯದಾದ್ಯಂತ ತೆರೆ ಕಾಣಲಿದೆ.

## ಆಕಾಶ್ ದೀಪ್ ಬೆಂಕಿ ಬೌಲಿಂಗ್

# ಭಾರತಕ್ಕೆ 336 ರನ್‌ಗಳ ಭರ್ಜರಿ ಜಯ

**ಎಜ್ಬಾಸ್ಟನ್:** ಕಾಶ್ ದೀಪ್ ಅವರ ಮಾರಕ ಬೌಲಿಂಗ್ ನೆರವಿನಿಂದ ಇಂಗ್ಲೆಂಡ್ ವಿರುದ್ಧದ ಎರಡನೇ ಟೆಸ್ಟ್ ಪಂದ್ಯವನ್ನು ಭಾರತ 336 ರನ್‌ಗಳಿಂದ ಗೆದ್ದುಕೊಂಡಿದೆ. ಈ ಮೂಲಕ 5 ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಇತ್ತಂಡಗಳು ಒಂದೊಂದು ಪಂದ್ಯವನ್ನು ಗೆದ್ದುಕೊಂಡತಾಗಿದೆ.

ಎರಡನೇ ಇನ್ನಿಂಗ್ಸ್‌ನಲ್ಲಿ 608 ರನ್‌ಗಳ ಗುರಿಯನ್ನು ಪಡೆದ ಇಂಗ್ಲೆಂಡ್ 5ನೇ ದಿನದಾಟದಲ್ಲಿ ಒಟ್ಟು 68.1 ಓವರ್‌ಗಳಲ್ಲಿ 271 ರನ್‌ಗಳಿಸಿ ಸರ್ವಪತನ ಕಂಡಿತು. 336 ರನ್‌ಗಳ ಜಯ ಭಾರತದ ಹೊರಗಡೆ ಟೀಂ ಇಂಡಿಯಾಗೆ ಸಿಕ್ಕಿದ ದೊಡ್ಡ ಜಯವಾಗಿದ್ದು ಶುಭಮನ್ ನಾಯಕತ್ವದ ಎರಡನೇ ಪಂದ್ಯದಲ್ಲಿ ಈ ಸಾಧನೆ ಮಾಡಿರುವುದು ವಿಶೇಷ.

4ನೇ ದಿನದ ಅಂತ್ಯದಲ್ಲಿ 3 ವಿಕೆಟ್ ನಷ್ಟಕ್ಕೆ 72 ರನ್‌ಗಳಿಸಿದ್ದ ಇಂಗ್ಲೆಂಡ್ ಇಂದು 7 ವಿಕೆಟ್ ಸಹಾಯದಿಂದ ಒಟ್ಟು 199 ರನ್ ಗಳಿಸಿತು. ಇಂದು ಬೆನ್ ಸ್ಟೋಕ್ ಮತ್ತು ಜೇಮಿ ಸ್ಮಿತ್ 115 ಎಸೆತಗಳಲ್ಲಿ 70 ರನ್ ಜೊತೆಯಾಟವಾಡಿದರು.

ಬೆನ್‌ಸ್ಟೋಕ್ 33 ರನ್ ಗಳಿಸಿ ಔಟಾದರೆ ಸ್ಮಿತ್ 88 ರನ್(99 ಎಸೆತ, 9 ಬೌಂಡರಿ, 4 ಸಿಕ್ಸ್) ಹೊಡೆದು



ಔಟಾದರು. ಹ್ಯಾರಿ ಬ್ರೂಕ್ 23 ರನ್, ಕ್ರಿಸ್ ವೋಕ್ಸ್ 7 ರನ್, ಜೋಶ್ ಟಂಗ್ 2 ರನ್

ಭಾರತದ ಪರ ಆಕಾಶ್ ದೀಪ್ ಮೊದಲ ಬಾರಿಗೆ 6 ವಿಕೆಟ್ ಕಿತ್ತರು. ಮೊಹಮ್ಮದ್ ಸಿರಾಜ್, ಪ್ರಸಿದ್ಧ್ ಕೃಷ್ಣ, ರವೀಂದ್ರ ಜಡೇಜಾ, ವಾಷಿಂಗ್ಟನ್ ಸುಂದರ್ ತಲಾ ಒಂದೊಂದು ವಿಕೆಟ್ ಪಡೆದರು.

### ಸಂಕ್ಷಿಪ್ತ ಸ್ಕೋರ್

- ಭಾರತ ಮೊದಲ ಇನ್ನಿಂಗ್ಸ್ -587/10
- ಇಂಗ್ಲೆಂಡ್ ಮೊದಲ ಇನ್ನಿಂಗ್ಸ್ -407/10
- ಭಾರತ ಎರಡನೇ ಇನ್ನಿಂಗ್ಸ್ - 427/6 ಡಿಕ್ಲೇರ್
- ಇಂಗ್ಲೆಂಡ್ ಎರಡನೇ ಇನ್ನಿಂಗ್ಸ್ - 271/10

# ಸೋಲಿನ ಬೆನ್ನಲ್ಲೇ ಲಾರ್ಡ್ಸ್ ಟೆಸ್ಟ್‌ಗೆ ತಂಡ ಪ್ರಕಟಿಸಿದ ಇಂಗ್ಲೆಂಡ್

ಎಡ್ಜ್‌ಬಾಸ್ಟನ್ ಟೆಸ್ಟ್ ಪಂದ್ಯದ ಸೋಲಿನ ಬೆನ್ನಲ್ಲೇ ಆತಿಥೇಯ ಇಂಗ್ಲೆಂಡ್ ತಂಡ ಜುಲೈ 10 ರಿಂದ ಕ್ರಿಕೆಟ್ ಕಾಶಿ ಲಾರ್ಡ್ಸ್ ಮೈದಾನದಲ್ಲಿ ನಡೆಯಲ್ಲಿರುವ ಸರಣಿಯ ಮೂರನೇ ಪಂದ್ಯಕ್ಕೆ ತನ್ನ ತಂಡವನ್ನು ಪ್ರಕಟಿಸಿದೆ. ಇಂಗ್ಲೆಂಡ್ ಆಯ್ಕೆಮಾಡಿರುವ ಈ 16 ಸದಸ್ಯರ ಪಟ್ಟಿಯಲ್ಲಿ ಯಾವುದೇ ಬದಲಾವಣೆಗಳಾಗದಿದ್ದರೂ, ಮತ್ತೊಬ್ಬ ವೇಗಿಯನ್ನು ತಂಡಕ್ಕೆ ಸೇರಿಸಿಕೊಳ್ಳಲಾಗಿದೆ. ಎಡ್ಜ್ ಬಾಸ್ಟನ್ ಟೆಸ್ಟ್ ಮುಗಿದ ಕೆಲವೇ ನಿಮಿಷಗಳಲ್ಲಿ ಮೂರನೇ ಟೆಸ್ಟ್ ಪಂದ್ಯಕ್ಕೆ ತಂಡವನ್ನು ಪ್ರಕಟಿಸಿರುವ ಇಂಗ್ಲೆಂಡ್ ಮಂಡಳಿ ವೇಗದ ಬೌಲರ್ ಗಸ್ ಅಟ್ಕಿನ್ಸನ್ ಅವರನ್ನು ತಂಡಕ್ಕೆ ಸೇರಿಸಿಕೊಂಡಿರುವುದಾಗಿ ಘೋಷಿಸಿದೆ. ಹಾಗೆಯೇ ಕೌಟುಂಬಿಕ ಕಾರಣದಿಂದಾಗಿ ಎರಡನೇ ಟೆಸ್ಟ್ ಪಂದ್ಯಕ್ಕೆ ಆಯ್ಕೆಯಾಗಿದ್ದರೂ, ಕೊನೆಯ ಕ್ಷಣದಲ್ಲಿ ಪಂದ್ಯದಿಂದ ಹೊರಬಿದ್ದಿದ್ದ ಜೋಫ್ರಾ ಆರ್ಚರ್ ಗೂ ತಂಡದಲ್ಲಿ ಸ್ಥಾನ ನೀಡಲಾಗಿದೆ. ಅಂದರೆ ಮುಂದಿನ ಪಂದ್ಯದಲ್ಲಿ ಅವರು ಆಡುವುದನ್ನು ನಾವು ಕಾಣಬಹುದಾಗಿದೆ. ಹೀಗಾಗಿ 3ನೇ ಟೆಸ್ಟ್ ಪಂದ್ಯದಲ್ಲಿ ಇಂಗ್ಲೆಂಡ್ ಆಡುವ ಹನ್ನೊಂದರ ಬಳಗದಲ್ಲಿ ನಾವು ಬದಲಾವಣೆಗಳನ್ನು ನಿರೀಕ್ಷಿಸಬಹುದಾಗಿದೆ.

ವಾಸ್ತವವಾಗಿ ಇಂಗ್ಲೆಂಡ್ ತಂಡ ಮೊದಲ ಪಂದ್ಯವನ್ನು ಐದು ವಿಕೆಟ್ ಗಳಿಂದ ಗೆದ್ದುಕೊಂಡಿತ್ತಾದರೂ, ಬೌಲಿಂಗ್‌ನಿಂದ ಯಾವುದೇ ಪರಿಣಾಮಕಾರಿ ಪ್ರದರ್ಶನ ಕಂಡುಬರಲಿಲ್ಲ.

### ಗಸ್ ಅಟ್ಕಿನ್ಸನ್ ಆಗಮನ



**ಗಾಯದ ಕಾರಣದಿಂದಾಗಿ ಈ ಸರಣಿಯ ಮೊದಲ ಎರಡು ಪಂದ್ಯಗಳಿಂದ ಹೊರಗುಳಿದಿದ್ದ ವೇಗದ ಬೌಲರ್ ಗಸ್ ಅಟ್ಕಿನ್ಸನ್ ಅವರನ್ನು ಮೂರನೇ ಟೆಸ್ಟ್‌ಗೆ ತಂಡದಲ್ಲಿ ಸೇರಿಸಿಕೊಳ್ಳಲಾಗಿದೆ. ಮೇ ತಿಂಗಳಲ್ಲಿ ಜಿಂಬಾಬ್ವೆ ವಿರುದ್ಧದ ಟೆಸ್ಟ್ ಪಂದ್ಯದ ಸಮಯದಲ್ಲಿ ಅಟ್ಕಿನ್ಸನ್ ಗಾಯಗೊಂಡಿದ್ದರು. ಇದರಿಂದಾಗಿ ಅವರು ಲೀಡ್ಸ್ ಮತ್ತು ಎಡ್ಜ್‌ಬಾಸ್ಟನ್ ಟೆಸ್ಟ್‌ಗಳಲ್ಲಿ ಆಡಲು ಸಾಧ್ಯವಾಗಲಿಲ್ಲ. ಅವರ ಅನುಪಸ್ಥಿತಿಯಲ್ಲಿ, ಇಂಗ್ಲೆಂಡ್ ಜೋಶ್ ಟಂಗ್‌ಗೆ ಆಡುವ ಹನ್ನೊಂದರಲ್ಲಿ ಅವಕಾಶ ನೀಡಿತು.**

ಹೀಗಾಗಿ ಟೀಂ ಇಂಡಿಯಾ ಒಂದೇ ಪಂದ್ಯದಲ್ಲಿ ಐದು ಶತಕಗಳನ್ನು ದಾಖಲಿಸಿತು. ಒಂದು ವೇಳೆ ಈ ಪಂದ್ಯದಲ್ಲಿ ಭಾರತ ತಂಡದ ಫೀಲ್ಡಿಂಗ್ ಹಾಗೂ ಬೌಲಿಂಗ್ ಉತ್ತಮವಾಗಿದಿದ್ದರೆ, ಆ ಪಂದ್ಯದ ಫಲಿತಾಂಶವೇ ಬೇರೆಯದ್ದಾಗಿರುತ್ತಿತ್ತು. ಆದಾಗ್ಯೂ ಬ್ಯಾಟ್ಸ್‌ಮನ್ ಗಳ ಅಬ್ಬರದ ಬ್ಯಾಟಿಂಗ್ ನಿಂದಾಗಿ ಇಂಗ್ಲೆಂಡ್ ತಂಡ ಗೆಲುವು ದಾಖಲಿಸಿತ್ತು.

ಎಡ್ಜ್‌ಬಾಸ್ಟನ್ ಟೆಸ್ಟ್‌ನಲ್ಲಿ ಇಂಗ್ಲೆಂಡ್ ತಂಡದ ಬೌಲಿಂಗ್ ಜೊತೆಗೆ ಬ್ಯಾಟಿಂಗ್ ಕೂಡ ಪರಿಣಾಮಕಾರಿಯಾಗಿರಲಿಲ್ಲ. ಅದರಲ್ಲೂ ಬೌಲರ್ ಗಳು ರನ್ ಗಳಿಗೆ ಕಡಿವಾಣ ಹಾಕುವಲ್ಲಿ ವಿಫಲರಾದರು. ಹೀಗಾಗಿ ಟೀಂ ಇಂಡಿಯಾ ಮೊದಲ ಇನ್ನಿಂಗ್ಸ್‌ನಲ್ಲಿ 587 ರನ್ ಕಲೆಹಾಕಿದರೆ, ಎರಡನೇ ಇನ್ನಿಂಗ್ಸ್‌ನಲ್ಲಿ 427 ರನ್ ಬಾರಿಸಿತು. ಇದು ಇಂಗ್ಲೆಂಡ್ ತಂಡದ ಸೋಲಿಗೆ ಪ್ರಮುಖ ಕಾರಣವಾಗಿತ್ತು. ಹೀಗಾಗಿ ಮೊದಲೆರಡು ಪಂದ್ಯಗಳಲ್ಲಿ ದುಬಾರಿಯಾಗಿರುವ ಬೌಲಿಂಗ್ ವಿಭಾಗದಲ್ಲಿ ಸರ್ಜರಿ ಮಾಡಲು ಮುಂದಾಗಿರುವ ಮಂಡಳಿ ಅಂತಿಮವಾಗಿ ತನ್ನ ಬೌಲಿಂಗ್ ವಿಭಾಗವನ್ನು ಬಲಪಡಿಸಲು ನಿರ್ಧರಿಸಿದೆ.

ಸರಣಿಯ ಮೂರನೇ ಟೆಸ್ಟ್ ಪಂದ್ಯ ಜುಲೈ 10 ರಿಂದ ಲಾರ್ಡ್ಸ್‌ನಲ್ಲಿ ಆರಂಭವಾಗಲಿದ್ದು, ಅಟ್ಕಿನ್ಸನ್ ಆಡುವ ಹನ್ನೊಂದರ ಬಳಗದಲ್ಲಿ ಸ್ಥಾನ ಪಡೆಯುವುದು ಖಚಿತವಾಗಿದೆ. ಈ ಮೈದಾನದಲ್ಲಿ ಅಟ್ಕಿನ್ಸನ್ ದಾಖಲೆಯೂ ಅತ್ಯುತ್ತಮವಾಗಿದೆ. ಅವರು ಈ ಮೈದಾನದಲ್ಲಿ ಕೇವಲ 2 ಪಂದ್ಯಗಳನ್ನು ಆಡಿದ್ದಾರಾದರೂ 19 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಇದು ಮಾತ್ರವಲ್ಲದೆ, ಬ್ಯಾಟಿಂಗ್ ನಲ್ಲೂ ಮಿಂಚಿರುವ ಅವರು ಒಂದು ಶತಕವನ್ನು ಬಾರಿಸಿದ್ದಾರೆ. ಒಟ್ಟಾರೆಯಾಗಿ, ಅಟ್ಕಿನ್ಸನ್ ಕೇವಲ 12 ಪಂದ್ಯಗಳ ತಮ್ಮ ಸಣ್ಣ ಟೆಸ್ಟ್ ವೃತ್ತಿಜೀವನದಲ್ಲಿ ಒಟ್ಟು 55 ವಿಕೆಟ್‌ಗಳನ್ನು ಕಬಳಿಸಿದ್ದಾರೆ.

# ಶಾಲೆಗಳಲ್ಲಿ ಮಕ್ಕಳಿಗೆ ಆರೋಗ್ಯ ತಪಾಸಣೆಗೆ ಸಚಿವ ರಾಜಣ್ಣ ಸೂಚನೆ

**ಹಾಸನ:** ಜಿಲ್ಲೆಯಲ್ಲಿ ಹೃದಯಾಘಾತದಿಂದ ಸಾವಿನ ಪ್ರಕರಣಗಳು ಹೆಚ್ಚಳವಾಗುತ್ತಿವೆ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿ ಜಯದೇವ ಹೃದ್ರೋಗ ಆಸ್ಪತ್ರೆಯ ನಿರ್ದೇಶಕ ಡಾ. ರವೀಂದ್ರನಾಥ್ ನೇತೃತ್ವದಲ್ಲಿ ಅಧ್ಯಯನಕ್ಕಾಗಿ ತಾಂತ್ರಿಕ ಸಲಹಾ ಸಮಿತಿ ರಚಿಸಿತ್ತು. ಈ ಸಮಿತಿ ಶನಿವಾರ ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಈ ಮಧ್ಯ ಬಾನುವಾರ ಜಿಲ್ಲೆಯ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್.ರಾಜಣ್ಣ, ಹೈಸ್ಕೂಲ್ ಮಕ್ಕಳಿಗೆ 15 ದಿನದೊಳಗೆ ತಪಾಸಣೆ ಮಾಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



**ಸಚಿವ ಕೆ.ಎನ್.ರಾಜಣ್ಣ ಹೇಳಿದ್ದಿಷ್ಟು?** ಜಿಲ್ಲೆಯ ಚನ್ನರಾಯಪಟ್ಟಣ ಪ್ರವಾಸಿ ಮಂದಿರದಲ್ಲಿ ಅಧಿಕಾರಿಗಳ ಜೊತೆಗಿನ ಸಭೆ ಬಳಿಕ ಮಾತನಾಡಿ ಸಚಿವ ಕೆ.ಎನ್.ರಾಜಣ್ಣ, ಮಕ್ಕಳಿಂದ ಹಿಡಿದು ಪ್ರತಿಯೊಬ್ಬರು ಪ್ರತಿ ವರ್ಷ ಕಡ್ಡಾಯವಾಗಿ ಹೃದಯ ತಪಾಸಣೆ ಮಾಡಿಸಲು ಸರ್ಕಾರದಲ್ಲಿ ಚಿಂತನೆ ನಡೆದಿದೆ. ಚಿಕ್ಕ ಚಿಕ್ಕ ವಯಸ್ಸಿನವರು ಅಸುನೀಗಿದ್ದಾರೆ. ಅದು ಬೇಸರದ ಸಂಗತಿ. ಮುಂದೆ ಸಾವುಗಳು ಆಗಬಾರದು, ಅದನ್ನು ತಡೆಯಲು ಸರ್ಕಾರ ಕ್ರಮಗಳನ್ನು ಕೈಗೊಂಡಿದೆ ಎಂದು ಹೇಳಿದ್ದಾರೆ.

**ನಗ್ತಾ ಮಾತಾಡಿಕೊಂಡಿದ್ದ ಬಾಣಂತಿಗೆ ಹಾರ್ಟ್ ಅಟ್ಯಾಕ್ ಅಂದರೇನರ್ಥ? ಜೈರಾಜ್:** ನಾನು ಬರುವಾಗ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರನ್ನು ಭೇಟಿ ಮಾಡಿ ಬಂದಿದ್ದೇನೆ. ಅವರು ಸಹ ಕೈಗೊಂಡಿರುವ ಕ್ರಮಗಳ ಬಗ್ಗೆ ತಿಳಿಸಿದ್ದಾರೆ. ಶೀಘ್ರದಲ್ಲೇ ಸಭೆ ನಡೆಸುತ್ತೇವೆ. ಅಲ್ಲಿ ತಜ್ಞರ ಸಮಿತಿ ನೀಡುವ ಸಲಹೆಗಳನ್ನು ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದರು. ಲಸಿಕೆಯಿಂದ ಅಡ್ಡ ಪರಿಣಾಮ ಇಲ್ಲ ಎಂದು ಮಾಧ್ಯಮದಲ್ಲಿ ಬಂದಿದೆ. ಆಹಾರ ಪದ್ಧತಿ, ಹೆಚ್ಚು ಆಯಾಸದಿಂದ ಹೃದಯಾಘಾತ ಸಂಭವಿಸುತ್ತೆ. ಜನಸಂಖ್ಯೆ ಹೆಚ್ಚಿದೆ, ಮೊದಲೂ ಹೃದಯಾಘಾತದಿಂದ ಸಾಯುತ್ತಿದ್ದರು. ನಟ ಪುನೀತ್ ಹೆಚ್ಚು ವ್ಯಾಯಾಮ ಮಾಡಿದ್ದರಿಂದ ಮೃತಪಟ್ಟರು. ಈ ಬಗ್ಗೆ ಅವರ ವೈದ್ಯರೇ ಹೇಳಿದ್ದಾರೆ ಎಂದರು.

**ಜನರಿಗೆ ರಾಜಣ್ಣ ಮನವಿ:** ಶಾಲೆಗಳಲ್ಲಿ ಎಲ್ಲಾ ಮಕ್ಕಳಿಗೂ ತಪಾಸಣೆ ಮಾಡಿಸಬೇಕು. ಹೈಸ್ಕೂಲ್ ಮಕ್ಕಳಿಗೆ 15 ದಿನದೊಳಗೆ ತಪಾಸಣೆ ಮಾಡಬೇಕು. ಮೃತಪಟ್ಟವರ ಮರಣೋತ್ತರ ಪರೀಕ್ಷೆಗಾಗಿ ಕುಟುಂಬಸ್ಥರಿಗೆ ಮನವಿ ಮಾಡಿ, ಪ್ರತಿಯೊಂದು ಕೇಸ್‌ಗೂ ಹಿಸ್ಟರಿ ಬರೆಯಬೇಕು. ಜಿಲ್ಲೆಯಲ್ಲಿ ಹೃದಯಾಘಾತದಿಂದ ಮೃತಪಟ್ಟರೆ ಮಾಹಿತಿ ಕಲೆಹಾಕಿ. ಹಾಸನ ಜಿಲ್ಲೆಯಲ್ಲಿ ಒಬ್ಬರೇ ಹೃದ್ರೋಗ ತಜ್ಞರಿದ್ದಾರೆ. ಇನ್ನೂ 2-3 ಹೃದ್ರೋಗ ತಜ್ಞರ ನೇಮಕಕ್ಕೆ ಮನವಿ ಮಾಡುತ್ತೇನೆ ಎಂದು ಹೇಳಿದ್ದಾರೆ.

ಹೃದ್ರೋಗ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ಕಾಮಗಾರಿ ಪೂರ್ಣಗೊಳ್ಳಲಿ. ನಾನು ಕೂಡ ಗುತ್ತಿಗೆದಾರನ ಜೊತೆ ಮಾತನಾಡುತ್ತೇನೆ. ಸುಳ್ಳು ಸುದ್ದಿ ಪ್ರಸಾರ ಮಾಡುವವರನ್ನು ಕರೆಸಿ ವಾರ್ನ್ ಮಾಡಿ. ಅದನ್ನೇ ಮುಂದುವರಿಸಿದರೆ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಸೂಚನೆ ನೀಡಲಾಗಿದೆ ಎಂದರು.

**ಕಣ್ಣಿನ ಶಸ್ತ್ರ ಚಿಕಿತ್ಸೆ ಆಗಿದ್ದರಿಂದ ಬಂದಿರಲಿಲ್ಲ:** ಕಳೆದ 2-3 ತಿಂಗಳಿಂದ ನಾನು ಹಾಸನಕ್ಕೆ ಬಂದಿರಲಿಲ್ಲ. ನನಗೆ ಕಣ್ಣಿನ ಶಸ್ತ್ರ ಚಿಕಿತ್ಸೆ ಆಗಿತ್ತು, ಹಾಗಾಗಿ ಬಂದಿರಲಿಲ್ಲ. ಹಾಸನಕ್ಕೆ ಬರುವ ಮೊದಲನೇ ದಿನ ಪಟಾಕಿ ಸಿಡಿದು ಪೆಟ್ಟಾಗಿತ್ತು. ವೈದ್ಯರು ನನಗೆ ಪ್ರಯಾಣಿಸದಂತೆ ಸೂಚಿಸಿದ್ದಾರೆ. ಈ ಕಾರಣದಿಂದ ನಾನು ಹಾಸನ ಜಿಲ್ಲೆಗೆ ಬರಲು ಆಗಲಿಲ್ಲ. ಅದನ್ನು ಹೊರತುಪಡಿಸಿಯೂ ಕೆಲವು ಕಾರಣಗಳಿವೆ. ಆ ಕಾರಣಗಳಿಗೆ ನೀವು ಚಿಂತಿಸಬೇಡಿ ಎಂದು ಹಾಸ್ಯ ಮಾಡಿದರು.

ಉಸ್ತುವಾರಿ ಬೇಡ ಎಂದು ಕಳೆದ ಡಿಸೆಂಬರ್ ನಲ್ಲೇ ಹೇಳಿದ್ದೆ. ಆ ಬಗ್ಗೆ ಇಲ್ಲಿವರೆಗೆ ಯಾವುದೇ ನಿರ್ಧಾರ ಆಗಲಿಲ್ಲ. ಹಾಗಂತ ನಾನು ಹಾಸನ ಜಿಲ್ಲೆಗೆ ಬರಬಾರದು ಅನ್ನೋದೇನಿಲ್ಲ. ನಾನು ಜಿಲ್ಲೆಗೆ ಬಂದು ಕೆಲಸ ಮಾಡುತ್ತೇನೆ ಎಂದಿದ್ದಾರೆ.

# ಒಕ್ಕಲಿಗರು ಹಾಗೂ ಲಿಂಗಾಯತರು ರಾಷ್ಟ್ರಮಟ್ಟದಲ್ಲಿ ಓಬಿಸಿಗಳು

**ಕನಕಪುರ:** ''ದೇಶದಲ್ಲಿ ಓಬಿಸಿಗಳ ಸಂಖ್ಯೆ ವ್ಯಾಪಕವಾಗಿದೆ. ಒಕ್ಕಲಿಗರು ಹಾಗೂ ಲಿಂಗಾಯತರು ರಾಷ್ಟ್ರಮಟ್ಟದಲ್ಲಿ ಓಬಿಸಿಗಳೇ. ಸಮಾಜದಲ್ಲಿ ಹಿಂದುಳಿದ ವರ್ಗಗಳ ಜನರನ್ನು ಮುನ್ನೆಲೆಗೆ ತರಬೇಕು ಎಂದು ಓಬಿಸಿ ಸಲಹಾ ಸಮಿತಿ ಸಭೆ ನಡೆಸಲಾಗುತ್ತಿದೆ'' ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೇಳಿದರು.



ಕನಕಪುರದ ಬಿಜ್ಜಹಳ್ಳಿಯಲ್ಲಿ ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಭಾನುವಾರ ಉತ್ತರಿಸಿದ ಅವರು, ರಾಷ್ಟ್ರ ರಾಜಕಾರಣಕ್ಕೆ ಸಿದ್ದರಾಮಯ್ಯ ಅವರನ್ನು ಕಳುಹಿಸಲು ಅವರಿಗೆ ಪಕ್ಷದ ಓಬಿಸಿ ಸಲಹಾ ಮಂಡಳಿ ಜವಾಬ್ದಾರಿ ನೀಡಿದ್ದಾರೆ ಎನ್ನುವ ಬಿಜೆಪಿ ಟೀಕೆಯ ಬಗ್ಗೆ ಕೇಳಿದಾಗ, ''ಪಕ್ಷದಲ್ಲಿ ಅಲ್ಪಸಂಖ್ಯಾತ, ಪರಿಶಿಷ್ಟ ಸೇರಿದಂತೆ ಇದೇ ರೀತಿ ಅನೇಕ ಘಟಕಗಳಿವೆ. ಅಲ್ಪಸಂಖ್ಯಾತರಲ್ಲಿ ಜೈನ, ಸಿಖ್ ಧರ್ಮದವರೂ ಸೇರುತ್ತಾರೆ. ಇದನ್ನೆಲ್ಲಾ ಟೀಕೆ ಮಾಡಲಿಲ್ಲ ಎಂದರೆ ಬಿಜೆಪಿಯವರಿಗೆ ಸಮಾಧಾನವಾಗಬೇಕಲ್ಲ. ಟೀಕೆಗಳು ಸಾಯುತ್ತವೆ. ಕೆಲಸಗಳು ಉಳಿಯುತ್ತವೆ'' ಎಂದರು.

''ರಾಜ್ಯದಲ್ಲಿ ಪಕ್ಷ ಅಧಿಕಾರದಲ್ಲಿ ಇರುವ ಕಾರಣಕ್ಕೆ ಪಕ್ಷದ ಓಬಿಸಿ ಸಲಹಾ ಮಂಡಳಿಯ ಸಭೆ ಕೆಪಿಸಿಸಿ ಕಚೇರಿಯಲ್ಲಿಯೇ ನಡೆಯಲಿ ಎಂದು ಸಲಹೆ ನೀಡಿದ್ದೆ. ಅದರಂತೆ ಇಲ್ಲಿ ಸಭೆ ಏರ್ಪಡಿಸಲಾಗಿದೆ. ರಾಷ್ಟ್ರಮಟ್ಟದ ಸುಮಾರು 40 ಕ್ಕೂ ಹೆಚ್ಚು ನಾಯಕರು ಈ ಸಭೆಯಲ್ಲಿ ಭಾಗವಹಿಸಲಿದ್ದಾರೆ'' ಎಂದು ತಿಳಿಸಿದರು.

ಇನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಕನಕಪುರ ತಾಲೂಕಿನ ಕೋಡಿಹಳ್ಳಿ ಹೋಬಳಿಯ ಸಿದ್ದೇಶ್ವರಸ್ವಾಮಿ ಬೆಟ್ಟದಲ್ಲಿ ಮೆಟ್ಟಿಲುಗಳ ಉದ್ಘಾಟನೆ ಹಾಗೂ ಧರ್ಮಜಾಗೃತಿ ಸಮಾರಂಭದಲ್ಲಿ ಮಾತನಾಡಿದ ಡಿಕೆ ಶಿವಕುಮಾರ್, ಶ್ರೀಮದ್ರಂಭಾಪುರಿ ವೀರಗಂಗಾಧರಜ್ಜಯ್ಯನವರು 'ಧರ್ಮದಿಂದಲೇ ಶಾಂತಿ ವಿಶ್ವಕ್ಕೆ ಧರ್ಮಕ್ಕೆ ಜಯವಾಗಲಿ. ನಾಡು ಧರ್ಮ ಸಾಮ್ರಾಜ್ಯವಾಗಲಿ. ಭಕ್ತಿಯುತ ಬೀಡಾಗಲಿ. ಧರ್ಮಕ್ಕಾಗಿ ಏಳಿರಿ, ಧರ್ಮಕ್ಕಾಗಿ ಬಾಳಿರಿ, ಧರ್ಮಕ್ಕಾಗಿ ತಾಳಿರಿ' ಎಂಬ ಅದ್ಭುತ ಸಂದೇಶ ಸಾರಿದ್ದಾರೆ ಎಂದರು.

ಧರ್ಮ- ದೇವರನ್ನು ನಾವು ಎಂದಿಗೂ ಮರೆಯಬಾರದು. ಹಿರಿಯರು 'ಮನೆ ಹುಷಾರು, ಮಠ ಹುಷಾರು' ಎಂದಿದ್ದಾರೆ. ತಾಯಿ- ತಂದೆ- ಗುರು ಸಮಾಜದ ಮೂರು ಕಣ್ಣುಗಳು. ಹುಟ್ಟುವಾಗ ಯಾರೂ ಇದೇ ಧರ್ಮದಲ್ಲಿ ಹುಟ್ಟಬೇಕೆಂದು ಅರ್ಜಿ ಹಾಕಿಕೊಂಡು ಹುಟ್ಟುವುದಿಲ್ಲ. 'ಧರ್ಮ ಯಾವುದಾದರೂ ತತ್ವ ಒಂದೇ, ನಾಮ ನೂರಾದರೂ ದೈವ ಒಂದೇ, ಪೂಜೆ ಯಾವುದಾದರೂ ಭಕ್ತಿ ಒಂದೇ, ಕರ್ಮ ಹಲವಾದರೂ ನಿಷ್ಠೆ ಒಂದೇ, ದೇವನೊಬ್ಬ ನಾಮ ಹಲವು'. ಹೀಗಾಗಿ ಗುರುಗಳು ಹಾಕಿಕೊಟ್ಟ ಧರ್ಮದ ಹಾದಿಯಲ್ಲಿ ನಾವೆಲ್ಲರೂ ಸಾಗಬೇಕು ಎಂದು ಹೇಳಿದರು.

ರಂಭಾಪುರಿ ಮಠಕ್ಕೆ ದೊಡ್ಡ ಇತಿಹಾಸವಿದೆ, ಪರಂಪರೆ ಇದೆ. ಈ ಮಠದೊಂದಿಗೆ ನನಗೆ ಭಕ್ತನಿಗೂ- ಭಗವಂತನಿಗೂ ಇರುವ ಸಂಬಂಧವಿದೆ. ರಂಭಾಪುರಿ ಶ್ರೀಗಳು ನಮ್ಮೂರಿಗೆ ಬರುತ್ತಾರೆನ್ನುವುದೇ ನಮ್ಮ ಭಾಗ್ಯ. ನಿಮ್ಮೆಲ್ಲರ ಸೇವಕನಾಗಿ ಈ ಬೆಟ್ಟದ ಅಭಿವೃದ್ಧಿಗೆ ನಿಮ್ಮೆಲ್ಲರ ಜೊತೆ ನಾನೂ ನಿಲ್ಲುತ್ತೇನೆ ಎಂದು ಭರವಸೆ ನೀಡಿದರು.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054